# ಜನತಾವಾಣಿ

ಮಧ್ಯ ಕರ್ನಾಟಕದ ಆಪ್ತ ಒಡನಾಡಿ

ಸಂಪಾದಕರು : ಎಂ.ಎಸ್. ವಿಕಾಸ್

ದಾವಣಗೆರೆ ಶುಕ್ರವಾರ, ಡಿಸೆಂಬರ್ 06, 2024

ಸಂಪುಟ : 51 ಸಂಚಿಕೆ : 203 ☎ 08192-254736 91642 99999 RNI No: 27369 ಪುಟ : 6 ರೂ : 5.00 www.janathavani.com janathavani@mac.com


## ಮತದಾರರೇ ನಮಗೆ ದೇವರು

### ದೇವೇಗೌಡರು ಯಾರನ್ನೂ ಬೆಳೆಸಲು ಇಷ್ಟ ಪಡುವುದಿಲ್ಲ

### ಜನಕಲ್ಯಾಣ ಸಮಾವೇಶದಲ್ಲಿ ಸಿಎಂ ಸಿದ್ಧರಾಮಯ್ಯ ವಾಗ್ದಾಳಿ



ಹಾಸನ, ಡಿ.5- ಹಾಸನ, ಡಿ.5- ಡಾ. ರಾಜ್‌ಕುಮಾರ್ ಅವರು ಅಭಿಮಾನಿಗಳೇ ದೇವರು ಎಂದು ಹೇಳಿದ್ದರು. ಆದರೆ ನಮಗೆ ಮತದಾರರೇ ದೇವರುಗಳು ಎಂದು ಮುಖ್ಯಮಂತ್ರಿ ಸಿದ್ದರಾಮಯ್ಯ ಅವರು ಗುರುವಾರ ರಾಜ್‌ಕುಮಾರ್ ಹೇಳಿಕೆಯನ್ನು ಉಲ್ಲೇಖಿಸಿ ಮಾತನಾಡಿದರು.

ಇಂದು ಜೆಡಿಎಸ್ ಭದ್ರಕೋಟೆ ಹಾಸನದಲ್ಲಿ ಕರ್ನಾಟಕ ಪ್ರದೇಶ ಕಾಂಗ್ರೆಸ್ ಸಮಿತಿ ಹಾಗೂ ಸ್ವಾಭಿಮಾನಿ ಸಮಿತಿಯ ಆಶ್ರಯದಲ್ಲಿ ನಡೆದ ಬೃಹತ್ ಜನಕಲ್ಯಾಣ ಸಮಾವೇಶ ಉದ್ದೇಶಿಸಿ ಮಾತನಾಡಿದ ಸಿಎಂ ಸಿದ್ದರಾಮಯ್ಯ ಅವರು, ಜೆಡಿಎಸ್ ಹಾಗೂ ಮಾಜಿ ಪ್ರಧಾನಿ ಎಚ್ ಡಿ ದೇವೇಗೌಡ ಅವರ ಕುಟುಂಬದ ವಿರುದ್ಧ ತೀವ್ರ ವಾಗ್ದಾಳಿ ನಡೆಸಿದರು.

ನಾವೆಲ್ಲ ಜೆಡಿಎಸ್ ಪಕ್ಷವನ್ನು ಕಟ್ಟಿದೆವು. ಆದರೆ, ಅಹಿಂದ ಸಮಾವೇಶ ಮಾಡಿದೆ ಎನ್ನುವ ಒಂದೇ ಕಾರಣಕ್ಕೆ ನನ್ನನ್ನು ಪಕ್ಷದಿಂದ ಉಚ್ಚಾಟಿಸಿದರು. ದೇವೇಗೌಡರು ಯಾರನ್ನೂ ಬೆಳೆಸಲು ಇಷ್ಟ ಪಡುವುದಿಲ್ಲ. ಒಕ್ಕಲಿಗರನ್ನೇ ಬೆಳೆಸುವುದಿಲ್ಲ ಎಂದರು.

ಸಿದ್ದರಾಮಯ್ಯ ಅವರನ್ನು ಹಣಕಾಸು ಸಚಿವನನ್ನಾಗಿ ಮಾಡಿದೆ. ಅದಕ್ಕಾಗಿ ಅವರು ಬೆಳೆದರು ಎಂದು ದೇವೇಗೌಡರು ಹೇಳಿದ್ದಾರೆ. ನಾನು, ಜಾಲಪ್ಪ ಇಲ್ಲದೇ ಹೋಗಿದ್ದರೆ, 1994 ರಲ್ಲಿ ಎಚ್.ಡಿ. ದೇವೇಗೌಡರು ಮುಖ್ಯಮಂತ್ರಿ ಆಗಲು ಸಾಧ್ಯವೇ ಇರಲಿಲ್ಲ ಎಂದು ತಿರುಗೇಟು ನೀಡಿದರು.

ದೇವೇಗೌಡರು ವಯಸ್ಸಿಗೆ ತಕ್ಕಂತೆ ಮಾತನಾಡಬೇಕು. 2019ರಲ್ಲಿ ನರೇಂದ್ರ ಮೋದಿ ಪ್ರಧಾನಿಯಾದರೆ, ದೇಶ ಬಿಡುವುದಾಗಿ ಎಚ್.ಡಿ. ದೇವೇಗೌಡರು ಹೇಳಿದ್ದರು. ಈಗ ಚನ್ನಪಟ್ಟಣದಲ್ಲಿ ಸಿದ್ದರಾಮಯ್ಯ ಗರ್ವಭಂಗ ಮಾಡುತ್ತೇನೆ. ಕಾಂಗ್ರೆಸ್ ಸರ್ಕಾರವನ್ನು ಕಿತ್ತೊಗೆಯಿರಿ ಎಂದು ಹೇಳಿದರು. ನಾನು ದೇವೇಗೌಡರಿಂದ ಈ ಮಾತುಗಳನ್ನು ನಿರೀಕ್ಷೆ ಮಾಡಿರಲಿಲ್ಲ. ಒಂದು ವಾರ ಚನ್ನಪಟ್ಟಣದಲ್ಲಿ ದೇವೇಗೌಡರು, ಕುಮಾರಸ್ವಾಮಿ, ನಿಖಿಲ್ ಕುಮಾರಸ್ವಾಮಿ ಕಣ್ಣೀರು (2ನೇ ಪುಟಕ್ಕೆ)

## ತಾಕತ್ತಿದ್ದರೆ ವಕ್ಫ್ ಕಾಯ್ದೆ ಗೆಜೆಟ್ ರದ್ದುಪಡಿಸಿ

### ‘ನಮ್ಮ ಭೂಮಿ ನಮ್ಮ ಹಕ್ಕು’ ಹೋರಾಟ ಸಭೆಯಲ್ಲಿ ಸಿಎಂಗೆ ಛಲವಾದಿ ನಾರಾಯಣ ಸ್ವಾಮಿ ಸವಾಲು

ಮಲೇಬೆನ್ನೂರು, ಡಿ. 5- ನಿಮಗೆ ತಾಕತ್ತಿದ್ದರೆ 1974ರಲ್ಲಿ ಜಾರಿಗೊಳಿಸಿರುವ ವಕ್ಫ್ ಕಾಯ್ದೆ ಗೆಜೆಟ್ ರದ್ದುಪಡಿಸಿ, ಜೊತೆಗೆ ಈ ಕುರಿತು ಕೇಂದ್ರ ಸರ್ಕಾರಕ್ಕೆ ಪತ್ರ ಬರೆಯಿರಿ ಎಂದು ವಿಧಾನ ಪರಿಷತ್‌ನ ವಿರೋಧ ಪಕ್ಷದ ನಾಯಕ ಛಲವಾದಿ ನಾರಾಯಣ ಸ್ವಾಮಿ ಅವರು ಸಿಎಂ ಸಿದ್ದಾರಾಮಯ್ಯ ಅವರಿಗೆ ಬಹಿರಂಗ ಸವಾಲು ಹಾಕಿದರು.

ಅವರು ಗುರುವಾರ ಭಾನುವಳ್ಳಿ ಗ್ರಾಮದಲ್ಲಿ ವಕ್ಫ್ ಕಾಯ್ದೆ ವಿರುದ್ಧ ಬಿಜೆಪಿ ವತಿಯಿಂದ ಹಮ್ಮಿಕೊಂಡಿದ್ದ ‘ನಮ್ಮ ಭೂಮಿ ನಮ್ಮ ಹಕ್ಕು’ ಆಂದೋಲನದ ನೇತೃತ್ವ ವಹಿಸಿ ಮಾತನಾಡಿದರು.

ಪಾಕಿಸ್ತಾನ, ಬಾಂಗ್ಲಾದೇಶದಲ್ಲಿ ಇಲ್ಲದ ವಕ್ಫ್ ಬೋರ್ಡ್ ಭಾರತದಲ್ಲಿ ಮಾತ್ರ ಯಾಕೆ? ಎಂದು ಪ್ರಶ್ನಿಸಿದ ನಾರಾಯಣ ಸ್ವಾಮಿ ಅವರು ‘ವಕ್ಫ್’ ನೆಹರು ಮನೆತನದ ಕೊಡುಗೆಯಾಗಿದ್ದು, ಈ ದೇಶವನ್ನು ಸಮಸ್ಯೆಯಲ್ಲಿಡಬೇಕೆಂಬ ಉದ್ದೇಶದಿಂದ 1969-70ರಲ್ಲಿ ಇಂದಿರಾಗಾಂಧಿ ಅವರು ದೇಶದಲ್ಲಿರುವ ವಕ್ಫ್ ಆಸ್ತಿ ಸರ್ವೆ ಮಾಡಿಸಿ, 1974ರಲ್ಲಿ ವಕ್ಫ್ ಕಾಯ್ದೆಯ ಗಜೆಟ್ ಜಾರಿಗೊಳಿಸಿದ್ದಾರೆ ಎಂದರು.

ರಾಜ್ಯದಲ್ಲಿ ಈ ಬಾರಿ ಕಾಂಗ್ರೆಸ್ ಪಕ್ಷ ಅಧಿಕಾರಕ್ಕೆ ಬಂದ ನಂತರ ಸಚಿವ ಜಮೀರ್ ಅಹ್ಮದ್ ಅವರು ವಕ್ಫ್ ಆಸ್ತಿ ಗುರುತಿಸುವ ನೆಪದಲ್ಲಿ ಹಿಂದೂಗಳ ಜಮೀನು, ದೇವಸ್ಥಾನ, ಮಠಗಳ ಆಸ್ತಿಯನ್ನೂ ಕಬಳಿಸಲು ಮುಂದಾಗಿದ್ದಾರೆ. ಇದಕ್ಕೆ ಸಿಎಂ ಸಿದ್ದರಾಮಯ್ಯ ಅವರ ಕುಮ್ಮಕ್ಕು ಇದೆ ಎಂದು ದೂರಿದ ನಾರಾಯಣಸ್ವಾಮಿ ಅವರು, ಮಾಹಿತಿ ಪ್ರಕಾರ ರಾಜ್ಯದಲ್ಲಿ 1 ಲಕ್ಷಕ್ಕೂ ಅಧಿಕ ಎಕರೆ ಜಮೀನು ವಕ್ಫ್ ಹೆಸರಿನಲ್ಲಿದೆ ಎಂದು ಹೇಳಲಾಗುತ್ತಿದೆ. ಭಾನುವಳ್ಳಿ ಗ್ರಾಮದಲ್ಲಿ ಹಿಂದೂಗಳ ರುದ್ರಭೂಮಿಗೆ ಮೀಸಲಾಗಿದ್ದ 6 ಎಕರೆ 15 ಗುಂಟೆ ಜಮೀನನ್ನೂ ವಕ್ಫ್ ಆಸ್ತಿ ಎಂದು ದಾಖಲೆ ಸೃಷ್ಟಿ ಮಾಡಿಸಿಕೊಂಡಿದ್ದಾರೆ ಎಂದು ಆಕ್ರೋಶ ವ್ಯಕ್ತಪಡಿಸಿದರು.



**ಭಾನುವಳ್ಳಿಯಲ್ಲಿ ಬಿಜೆಪಿ ಜನ ಆಂದೋಲನ**

**ವಕ್ಫ್ ಕಾಯ್ದೆ ವಿರುದ್ಧ ರಾಜ್ಯದಲ್ಲಿ ಬುಧವಾರದಿಂದ ‘ನಮ್ಮ ಭೂಮಿ ನಮ್ಮ ಹಕ್ಕು’ ಎಂಬ ಜನ ಆಂದೋಲನ ಪ್ರಾರಂಭಿಸಿರುವ ಬಿಜೆಪಿ ಗುರುವಾರ ಭಾನುವಳ್ಳಿ ಗ್ರಾಮದಲ್ಲಿ ಛಲವಾದಿ ನಾರಾಯಣಸ್ವಾಮಿ ನೇತೃತ್ವದಲ್ಲಿ ಹಿಂದೂ ರುದ್ರ ಭೂಮಿವರೆಗೆ ಪಾದಯಾತ್ರೆ ಮೂಲಕ ಪ್ರತಿಭಟನೆ ನಡೆಸಿತು. ಈ ವೇಳೆ ಗ್ರಾಮದ ಟಿ.ಆರ್. ಮಹೇಶ್ವರಪ್ಪ ಅವರು, ಹಿಂದೂ ರುದ್ರಭೂಮಿಯ ಎಲ್ಲ ಜಮೀನನ್ನು ವಕ್ಫ್ ಆಸ್ತಿಯನ್ನಾಗಿ ಮಾಡಿಕೊಂಡಿರುವ ಬಗ್ಗೆ ಬಿಜೆಪಿ ನಾಯಕರಿಗೆ ಮಾಹಿತಿ ನೀಡಿದರು.**

ವಕ್ಫ್ ಆಸ್ತಿ ವಿಚಾರವಾಗಿ ರಾಜ್ಯದಲ್ಲಿ ಗೊಂದಲ ಶುರುವಾಗಿ ರೈತರಿಂದ ವ್ಯಾಪಾರ ವಿರೋಧ ವ್ಯಕ್ತವಾದ ಹಿನ್ನೆಲೆಯಲ್ಲಿ ಸಿಎಂ ಸಿದ್ದರಾಮಯ್ಯ ಅವರು, 11ನೇ ಕಾಲಂ ತೆಗೆಯುವುದಾಗಿ ಹೇಳಿ ತಾತ್ಕಾಲಿಕ ಸಮಾಧಾನ ಮಾಡಲು ಮುಂದಾಗಿದೆ. 11 ನೇ ಕಾಲಂ ತೆಗೆಯುವುದಕ್ಕಿಂತ ವಕ್ಫ್ ಕಾಯ್ದೆಯ ಗಜೆಟ್ಟನ್ನೇ ರದ್ದುಪಡಿಸಿ, ಇಲ್ಲದಿದ್ದರೆ ರಾಜ್ಯವ್ಯಾಪಿ ಹೋರಾಟ ತೀವ್ರಗೊಳ್ಳಲಿದೆ ಎಂದು ಛಲವಾದಿ ನಾರಾಯಣಸ್ವಾಮಿ ರಾಜ್ಯ ಸರ್ಕಾರಕ್ಕೆ ಎಚ್ಚರಿಕೆ ನೀಡಿದರು.

ಮಾಜಿ ಸಚಿವ ಬಿ.ಸಿ. ಪಾಟೀಲ್ ಮಾತನಾಡಿ, ನಾವು-ನೀವು ಎಚ್ಚರ ವಹಿಸದಿದ್ದರೆ ಗೌರಿ ಹೆಸರು ನಾಳೆ ಗೌಸಿಯಾ ಆಗಲಿದೆ. ನಮ್ಮ ಹಕ್ಕು, ಅಸ್ತಿತ್ವ ಮತ್ತು ಆಸ್ತಿಯನ್ನು (4ನೇ ಪುಟಕ್ಕೆ)

## ಈ ಬಂಡೆ ಸದಾ ಸಿದ್ದರಾಮಯ್ಯ ಅವರ ಜೊತೆಗೆ ಇರುತ್ತೆ: ಡಿಕೆಶಿ

ಹಾಸನ, ಡಿ.5- ಈ ಬಂಡೆ ಸದಾ ಸಿದ್ದರಾಮಯ್ಯ ಅವರ ಜೊತೆಗೆ ಇರುತ್ತದೆ. ಇಂದು, ನಾಳೆ, ಎಂದೆಂದಿಗೂ ಡಿ.ಕೆ. ಶಿವಕುಮಾರ್, ಸಿದ್ದರಾಮಯ್ಯ ಅವರೊಂದಿಗೆ ಇರುತ್ತಾರೆ. ನೀವು ಚಿಂತೆ ಬಿಡಿ ಎಂದು ಕೆಪಿಸಿಸಿ ಅಧ್ಯಕ್ಷ, ಉಪ ಮುಖ್ಯಮಂತ್ರಿ ಡಿ.ಕೆ. ಶಿವಕುಮಾರ್ ಹೇಳಿದ್ದಾರೆ.

ಹಾಸನದಲ್ಲಿ ಜನ ಕಲ್ಯಾಣ ಸಮಾವೇಶದಲ್ಲಿ ಪಾಲ್ಗೊಂಡು ಮಾತನಾಡಿದ ಅವರು, ಈ ಜಿಲ್ಲೆಯಲ್ಲಿ ಆಗುತ್ತಿರುವ ಅನ್ಯಾಯದ ವಿರುದ್ಧ ಆಕ್ರೋಶಗೊಂಡು, ನೊಂದ ತಾಯಂದಿರಿಗೆ ಧೈರ್ಯ ತುಂಬಲು ಹಾಸನ ಜಿಲ್ಲೆಯ ಜನರು ಸಂಸದ ಶ್ರೇಯಸ್ ಪಟೇಲ್ ಅವರಿಗೆ ಆಶೀರ್ವಾದ ಮಾಡಿದ್ದಾರೆ ಎಂದರು.

ಐದು ಗ್ಯಾರಂಟಿಗಳು ಪರ್ಮನೆಂಟ್. 2028ಕ್ಕೆ ಮತ್ತೆ ಕಾಂಗ್ರೆಸ್ ಅಧಿಕಾರಕ್ಕೆ ಬರುವುದೂ ನಿಶ್ಚಿತ. ಬಿಜೆಪಿ–ಜೆಡಿಎಸ್‌ನವರ ಟೀಕೆಗಳಿಗೆ ರಾಜ್ಯದಲ್ಲಿ ನಡೆದ ಉಪ ಚುನಾವಣೆಯ ಮೂಲಕ ರಾಜ್ಯದ ಜನರು ಉತ್ತರ ನೀಡಿದ್ದಾರೆ. ಬಡವರಿಗೆ ಆರ್ಥಿಕ ಶಕ್ತಿ ತುಂಬುವ ಮೂಲಕ ಬೆಲೆ ಏರಿಕೆಯಿಂದ ತತ್ತರಿಸುತ್ತಿದ್ದ ಸಮಾಜಕ್ಕೆ ಶಕ್ತಿ ಕೊಟ್ಟಿದ್ದೇವೆ ಎಂದರು.

ಮಂಡ್ಯ, ಮೈಸೂರು, ಚಾಮರಾಜನಗರ, ಚಿಕ್ಕಮಗಳೂರು, ರಾಮನಗರ, ಕೊಡಗು ಜಿಲ್ಲೆಗಳಲ್ಲಿ ಕಾಂಗ್ರೆಸ್ ಗೆದ್ದಿದೆ. ಮುಂದೆ ಹಾಸನ ಜಿಲ್ಲೆಯಲ್ಲೂ ಕಾಂಗ್ರೆಸ್ ಗೆಲ್ಲಲಿದೆ ಎಂದು ವಿಶ್ವಾಸ ವ್ಯಕ್ತಪಡಿಸಿದ ಅವರು, ಹಾಸನ ಜಿಲ್ಲೆಯನ್ನು ನೋಡಿದರೆ ಸಂಕಟವಾಗುತ್ತದೆ. ತಾಯಂದಿರ ಸ್ವಾಭಿಮಾನ ಉಳಿಸುವ ಉದ್ದೇಶದಿಂದ ಈ ಸಮಾವೇಶ ಆಯೋಜಿಸಿದ್ದೇವೆ ಎಂದರು.

ದೇವರಾಜ ಅರಸು ಕಾಲದಲ್ಲಿ ಉಳುವವನೇ ಭೂಮಿಯ ಒಡೆಯ ಯೋಜನೆ ತರಲಾಗಿತ್ತು. ಇಂದಿರಾ ಗಾಂಧಿ ಅವರ (4ನೇ ಪುಟಕ್ಕೆ)

## ಪ್ರಮಾಣ ವಚನ ಸ್ವೀಕರಿಸಿದ ದೇವೇಂದ್ರ



ಮುಂಬೈ, ಡಿ.5- ವಿಧಾನಸಭೆ ಚುನಾವಣೆಯ ಫಲಿತಾಂಶ ಪ್ರಕಟವಾಗಿ ಎರಡು ವಾರಗಳ ನಂತರ ಮಹಾರಾಷ್ಟ್ರ ನೂತನ ಮುಖ್ಯಮಂತ್ರಿಯಾಗಿ ದೇವೇಂದ್ರ ಫಡ್ನವೀಸ್ ಗುರುವಾರ ಪ್ರಮಾಣ ವಚನ ಸ್ವೀಕರಿಸಿದರು.

ಸಂಜೆ 5-30ಕ್ಕೆ ದಕ್ಷಿಣ ಮುಂಬೈನ ಆಜಾದ್ ಮೈದಾನದಲ್ಲಿ ನಡೆದ ಅದ್ದೂರಿ ಸಮಾರಂಭದಲ್ಲಿ ರಾಜ್ಯಪಾಲ ಸಿ. ಪಿ. ರಾಧಾಕೃಷ್ಣನ್ ಅವರು ದೇವೇಂದ್ರ ಫಡ್ನವೀಸ್ ಅವರಿಗೆ ಪ್ರತಿಜ್ಞಾ ವಿಧಿ ಬೋಧಿಸಿದರು. ನಂತರ ಉಪ ಮುಖ್ಯಮಂತ್ರಿಗಳಾಗಿ ಏಕನಾಥ್ ಶಿಂಧೆ ಹಾಗೂ ಅಜಿತ್ ಪವಾರ್ ಅವರು ಪ್ರಮಾಣ ವಚನ ಸ್ವೀಕರಿಸಿದರು.

ಕಾರ್ಯಕ್ರಮದಲ್ಲಿ ಪ್ರಧಾನಿ ನರೇಂದ್ರ ಮೋದಿ, ಕೇಂದ್ರ ಗೃಹ ಸಚಿವ ಅಮಿತ್ ಶಾ, ಬಿಜೆಪಿ ರಾಷ್ಟ್ರೀಯ ಅಧ್ಯಕ್ಷ ಜೆಪಿ ನಡ್ಡಾ, ರಕ್ಷಣಾ ಸಚಿವ ರಾಜನಾಥ್ ಸಿಂಗ್, ಉತ್ತರ ಪ್ರದೇಶ ಮುಖ್ಯಮಂತ್ರಿ ಯೋಗಿ ಆದಿತ್ಯನಾಥ್ ಮತ್ತು ಎನ್‌ಡಿಎ ಆಡಳಿತವಿರುವ ರಾಜ್ಯಗಳ ಸಿಎಂಗಳು ಹಾಗೂ ಉಪ ಮುಖ್ಯಮಂತ್ರಿಗಳು, ಕೇಂದ್ರ ಸಚಿವರು, ಎನ್‌ಡಿಎ ನಾಯಕರು ಸೇರಿದಂತೆ ಹಲವು ನಾಯಕರು ಭಾಗವಹಿಸಿದ್ದರು.

ಬಾಲಿವುಡ್ ನಟರಾದ ಶಾರುಖ್ ಖಾನ್, ಸಲ್ಮಾನ್ ಖಾನ್, ರಣಬೀರ್ ಕಪೂರ್ ಮತ್ತು ರಣವೀರ್ ಸಿಂಗ್, ಮಾಜಿ ಕ್ರಿಕೆಟಿಗ ಸಚಿನ್ ತೆಂಡೂಲ್ಕರ್, ಕೈಗಾರಿಕೋದ್ಯಮಿಗಳಾದ ಮುಖೇಶ್ ಅಂಬಾನಿ ಮತ್ತು ಗೌತಮ್ ಅದಾನಿ ಸೇರಿದಂತೆ, ಪ್ರಮುಖ ಸೆಲೆಬ್ರಿಟಿಗಳು ಸಹ ಸಮಾರಂಭದಲ್ಲಿ (2ನೇ ಪುಟಕ್ಕೆ)

## ಬೆಳಗಾವಿ ಅಧಿವೇಶನಕ್ಕೆ ವಿಶೇಷ ವಿಮಾನ ಸಂಚಾರ

ಬೆಂಗಳೂರು, ಡಿ.5- ಇದೇ ಡಿಸೆಂಬರ್ 9 ರಿಂದ ಬೆಳಗಾವಿಯ ಸುವರ್ಣಸೌಧದಲ್ಲಿ ವಿಧಾನಮಂಡಲದ ಚಳಿಗಾಲದ ಅಧಿವೇಶನ ಆರಂಭವಾಗುತ್ತಿದ್ದು, ಅಧಿವೇಶನದಲ್ಲಿ ಪಾಲ್ಗೊಳ್ಳುವ ಶಾಸಕರು ಮತ್ತು ಅಧಿಕಾರಿಗಳಿಗೆ ಅನುಕೂಲಕ್ಕಾಗಿ ಬೆಳಗಾವಿ - ಬೆಂಗಳೂರು ನಡುವೆ ವಿಶೇಷ ವಿಮಾನ ಸಂಚರಿಸಲಿದೆ.

ಇಂಡಿಗೋ ಏರ್‌ಲೈನ್ಸ್ ಡಿಸೆಂಬರ್ 9 ರಿಂದ 19 ರವರೆಗೆ ಬೆಂಗಳೂರು ಮತ್ತು ಬೆಳಗಾವಿ ನಡುವೆ ವಿಶೇಷ ಏರ್‌ಬಸ್ A320 ವಿಮಾನ ಸಂಚರಿಸಲಿದೆ ಎಂದು ಘೋಷಿಸಿದೆ.

ವೇಳಾಪಟ್ಟಿಯ ಪ್ರಕಾರ, ಇಂಡಿಗೋ ವಿಮಾನ ಬೆಂಗಳೂರು ವಿಮಾನ ನಿಲ್ದಾಣದಿಂದ ಬೆಳಗ್ಗೆ 6 ಗಂಟೆಗೆ ಹೊರಟು ಬೆಳಗ್ಗೆ 7 ಗಂಟೆಗೆ ಬೆಳಗಾವಿ ವಿಮಾನ ನಿಲ್ದಾಣಕ್ಕೆ ಆಗಮಿಸುತ್ತದೆ. ನಂತರ ಅದೇ ವಿಮಾನ ಬೆಳಗಾವಿ ವಿಮಾನ ನಿಲ್ದಾಣದಿಂದ ಬೆಳಗ್ಗೆ 7.30 ಕ್ಕೆ (2ನೇ ಪುಟಕ್ಕೆ)



## ವಕ್ಫ್ ದೌರ್ಜನ್ಯ ಖಂಡಿಸಿ ಬಿಜೆಪಿ ಬೃಹತ್ ಪ್ರತಿಭಟನೆ

ಯಾದಗಿರಿ, ಡಿ.5- ಬಿಜೆಪಿ ರಾಜ್ಯ ಘಟಕದ ಅಧ್ಯಕ್ಷ ಬಿ.ವೈ.ವಿಜಯೇಂದ್ರ ಅವರ ನೇತೃತ್ವದಲ್ಲಿ ರೈತರು, ಪಕ್ಷದ ನಾಯಕರ ಜೊತೆಗೆ ಶಹಾಪುರದಲ್ಲಿ ಗುರುವಾರ ವಕ್ಫ್ ಹೆಸರಿನಲ್ಲಿ ನಡೆಯುತ್ತಿರುವ ದೌರ್ಜನ್ಯ ಖಂಡಿಸಿ ಬೃಹತ್ ಪ್ರತಿಭಟನಾ ಮೆರವಣಿಗೆ ನಡೆಯಿತು.

ಶಹಾಪುರ ನಗರದ ಸಿಬಿ ಕಮಾನ್ ನಿಂದ ಹೊರಟು ಬಸವೇಶ್ವರ ವೃತ್ತದ ವರೆಗೆ ಪ್ರತಿಭಟನಾ ಮೆರವಣಿಗೆ ನಡೆದು ಅಲ್ಲಿ ಬಹಿರಂಗ ಪ್ರತಿಭಟನಾ ಸಮಾವೇಶ ನಡೆಯಿತು.

ರಾಜ್ಯ ಸೇರಿ ಜಿಲ್ಲೆಯಲ್ಲಿ ವಕ್ಫ್ ಹೆಸರಿನಲ್ಲಿ ರೈತರ, ಮಠ ಮಾನ್ಯಗಳು ಸೇರಿದಂತೆ, ಎಲ್ಲರ ಜಮೀನು ನುಂಗುವ ನಿಟ್ಟಿನಲ್ಲಿ ನಡೆಯುತ್ತಿರುವ ದೌರ್ಜನ್ಯದ ವಿರುದ್ಧ ಹಾಗೂ ಮುಡಾ ಹಗರಣ, ನಿಗಮಗಳ ಹಗರಣಗಳು ಸೇರಿದಂತೆ ಸರ್ಕಾರದ ವೈಫಲ್ಯದ ವಿರುದ್ಧವೂ ಆಕ್ರೋಶ ವ್ಯಕ್ತವಾಯಿತು.

ತೆರೆದ ವಾಹನದಲ್ಲಿ ಹಲವು ಬಿಜೆಪಿ ನಾಯಕರು ರಾಜ್ಯ ಕಾಂಗ್ರೆಸ್ ಸರ್ಕಾರ, ವಕ್ಫ್ ವಿರುದ್ಧ ಆಕ್ರೋಶ ವ್ಯಕ್ತಪಡಿಸಿದರು.

ಮಾಜಿ ಸಚಿವರಾದ ಭೈರತಿ ಬಸವರಾಜ, ಶ್ರೀರಾಮುಲು, ರಾಜೂಗೌಡ, ಮಾಜಿ ಶಾಸಕ ಎಂ.ಪಿ. ರೇಣುಕಾಚಾರ್ಯ, ವಿಧಾನ ಪರಿಷತ್ ಸದಸ್ಯ ಬಿ.ಜಿ. ಪಾಟೀಲ, ಬಿಜೆಪಿ ಜಿಲ್ಲಾ ಘಟಕದ ಅಧ್ಯಕ್ಷ ಅಮೀನರಡ್ಡಿ ಯಾಳಗಿ, ಮಾಜಿ ಅಧ್ಯಕ್ಷ ಡಾ.ಶರಣ ಭೂಪಾಲರೆಡ್ಡಿ ನಾಯ್ಕಲ್, ಅರೆ ಅಲೆಮಾರಿ ನಿಗಮದ ಮಾಜಿ ಅಧ್ಯಕ್ಷ ದೇವೇಂದ್ರನಾಥ ನಾದ್ ಸೇರಿದಂತೆ ಇತರರಿದ್ದರು.

### ಹಾಸನ ಸಮಾವೇಶ ಕುರ್ಚಿ ಉಳಿಸಲು ಮಾಡುವ ಸರ್ಕಸ್

**ಹಾಸನದಲ್ಲಿ ಕಾಂಗ್ರೆಸ್ ಪಕ್ಷ ಹಮ್ಮಿಕೊಂಡಿರುವ ಸಮಾವೇಶ ಯಾವ ಪುರುಷಾರ್ಥಕ್ಕಾಗಿ, ಮುಖ್ಯಮಂತ್ರಿ ಸಿದ್ದರಾಮಯ್ಯ ಅವರು ತಮ್ಮ ಕುರ್ಚಿ ಉಳಿಸಿಕೊಳ್ಳಲು ಮಾಡುವ ಸರ್ಕಸ್ ಇದಾಗಿದೆ ಎಂದು ಬಿಜೆಪಿ ರಾಜ್ಯ ಘಟಕದ ಅಧ್ಯಕ್ಷ ಬಿ.ವೈ.ವಿಜಯೇಂದ್ರ ಲೇವಡಿ ಮಾಡಿದರು.**

**ಶಹಾಪುರದಲ್ಲಿ ಸುದ್ದಿಗಾರರ ಜೊತೆ ಮಾತನಾಡಿದ ಅವರು, ಉಪಮುಖ್ಯಮಂತ್ರಿ ಡಿ.ಕೆ. ಶಿವಕುಮಾರ ಮತ್ತು ಮುಖ್ಯಮಂತ್ರಿ ಸಿದ್ದರಾಮಯ್ಯ ನಡುವೆ ಕುರ್ಚಿಗಾಗಿ ಗುದ್ದಾಟ ನಡೆದಿದೆ. ಜನತೆಯ ಸಮಸ್ಯೆ ಬದಿಗೊತ್ತಿ ಇವರು ಸಮಾವೇಶ ನಡೆಸುತ್ತಿದ್ದಾರೆ. ಮುಡಾ ಹಗರಣ ಮರೆ ಮಾಚಲು ನಡೆಸುತ್ತಿರುವ ವ್ಯರ್ಥ ಸರ್ಕಸ್ ಇದಾಗಿದೆ ಎಂದು ವ್ಯಂಗ್ಯವಾಡಿದರು.**

## ‘ಪ್ರೊಬಾ-3’ ಇಸ್ರೋ ಯಶಸ್ವಿ ಉಡಾವಣೆ

ನವದೆಹಲಿ, ಡಿ.5- ಭಾರತೀಯ ಬಾಹ್ಯಾಕಾಶ ಸಂಶೋಧನಾ ಸಂಸ್ಥೆ ಇಂದು ಯುರೋಪಿಯನ್ ಬಾಹ್ಯಾಕಾಶ ಸಂಸ್ಥೆಯ (ಇಎಸ್‌ಎ) ‘ಪ್ರೊಬಾ -3’ ಮಿಷನ್‌ನ ಅನ್ನು ಯಶಸ್ವಿಯಾಗಿ ಉಡಾವಣೆ ಮಾಡಿದೆ.

ಬೆಂಗಳೂರು ಮೂಲದ ಬಾಹ್ಯಾಕಾಶ ಸಂಸ್ಥೆಯು ಮೂಲತಃ ಯುರೋಪಿಯನ್ ಸ್ಪೇಸ್ ಏಜೆನ್ಸಿಯ (ಇಎಸ್‌ಎ) ‘ಪ್ರೊಬಾ-3’ ಅನ್ನು ಶ್ರೀಹರಿಕೋಟಾದ ಸತೀಶ್ ಧವನ್ ಬಾಹ್ಯಾಕಾಶ ಕೇಂದ್ರದಿಂದ ಅತ್ಯಂತ ವಿಶ್ವಾಸಾರ್ಹ ಪಿಎಸ್‌ಎಲ್‌ವಿ-ಎಕ್ಸ್‌ಎಲ್ ರಾಕೆಟ್ ಬಳಸಿ ಉಡಾವಣೆ ಮಾಡಲಾಯಿತು.

## ಷೇರು ಮಾರುಕಟ್ಟೆಯಲ್ಲಿ ನಿಲ್ಲದ ಗೂಳಿ ಓಟ

ಮುಂಬೈ, ಡಿ.5- ಭಾರತೀಯ ಷೇರು ಮಾರುಕಟ್ಟೆ ಸತತ 5ನೇ ದಿನವೂ ಸಕಾರಾತ್ಮಕ ವಹಿವಾಟು ನಡೆಸಿದ್ದು, ಷೇರು ಮಾರುಕಟ್ಟೆಯ ಉಭಯ ಸೂಚ್ಯಂಕಗಳಾದ ಸೆನ್ಸೆಕ್ಸ್ ಮತ್ತು ನಿಫ್ಟಿ ಭಾರೀ ಏರಿಕೆಯಲ್ಲಿ ದಿನದ ವಹಿವಾಟು ಅಂತ್ಯಗೊಳಿಸಿವೆ.

ಇಂದಿನ ವಹಿವಾಟಿನಲ್ಲಿ ಭಾರತೀಯ ಷೇರು ಮಾರುಕಟ್ಟೆ ಸೂಚ್ಯಂಕಗಳಾದ ಸೆನ್ಸೆಕ್ಸ್ ಮತ್ತು ನಿಫ್ಟಿ ಶೇ.0.98 ರಿಂದ ಶೇ.1.00ರಷ್ಟು ಏರಿಕೆ ಕಂಡಿದ್ದು, ಸೆನ್ಸೆಕ್ಸ್ 809.53 ಅಂಕಗಳ ಏರಿಕೆಯೊಂದಿಗೆ (4ನೇ ಪುಟಕ್ಕೆ)

## ಪುಷ್ಪ2 ಚಿತ್ರ ವೀಕ್ಷಣೆ ವೇಳೆ ಕಾಲ್ತುಳಿತ: ಸಾವು

ಹೈದರಾಬಾದ್, ಡಿ.5- ಸಂಧ್ಯಾ ಥಿಯೇಟರ್ ನಲ್ಲಿ ಇಂದು ಬೆಳಗ್ಗೆ ಪುಷ್ಪಾ2 ಚಿತ್ರ ವೀಕ್ಷಣೆಗಾಗಿ ತೆರಳಿದ್ದ 39 ವರ್ಷದ ರೇವತಿ ಎಂಬ ಮಹಿಳೆ ಕಾಲ್ತುಳಿತಕ್ಕೆ ಒಳಗಾಗಿ ಸಾವನ್ನಪ್ಪಿದ್ದಾರೆ.

ದುರಂತದಲ್ಲಿ ಸಾವನ್ನಪ್ಪಿದ ಮಹಿಳೆಗೆ ನೆರವು ನೀಡುವುದಾಗಿ ನಟ ಅಲ್ಲು ಅರ್ಜುನ್ ತಂಡ ಘೋಷಣೆ ಮಾಡಿದೆ.

ಹೈದರಾಬಾದ್ ನ ಇದೇ ಘಟನೆಯಲ್ಲಿ ರೇವತಿ ಅವರ 9 ವರ್ಷದ (4ನೇ ಪುಟಕ್ಕೆ)


॥ ಶ್ರೀ ಲಕ್ಷ್ಮಿನರಸಿಂಹ ಪ್ರಸೀದಂತು ॥


**ವಿವಾಹ ಮಹೋತ್ಸವದ ಹಾರ್ದಿಕ ಶುಭಾಶಯಗಳು**

**ಶ್ರೀಮತಿ ಪರಿಮಳ ಮತ್ತು ಶ್ರೀ ಡಿ.ಆರ್. ಶಾಮಸುಂದರ್**

"ಸಂಪದ" ಅಲೆಕ್ಸಾಂಡರ್ ಲೇಔಟ್, ಬ್ಯಾಂಕ್ ಕಾಲೋನಿ, ಚಿತ್ರದುರ್ಗ.

ಇವರು ಮಾಡುವ ವಿಜ್ಞಾಪನೆಗಳು.

ಸ್ವಸ್ತಿಶ್ರೀ ವಿಜಯಾಭ್ಯುದಯ ಶ್ರೀಮನೃಪ ಶಾಲಿವಾಹನ ಶಕೆ 1946ನೇ ಶ್ರೀ ಕ್ರೋಧಿನಾಮ ಸಂವತ್ಸರದ, ಮಾರ್ಗಶಿರ ಮಾಸ ಶುಕ್ಲಪಕ್ಷ ಪಂಚಮಿ ಶುಕ್ರವಾರ ದಿನಾಂಕ : 06.12.2024 ರಂದು ಮಧ್ಯಾಹ್ನ 12.15 ರಿಂದ 12.40ಕ್ಕೆ ಸಲ್ಲುವ ಶುಭ ಕುಂಭ ಲಗ್ನದಲ್ಲಿ



ನಮ್ಮ ಸುಪುತ್ರಿ

**ಚಿ॥ ಹ॥ ಕುಂ॥ ಸೌ॥ ಸುರಭಿ ಎಸ್. ಭಾರದ್ವಾಜ್**

**ಚಿ॥ ರಾ॥ ಚೇತನ್ ಬಿಳಿಚೋಡು**

ಶ್ರೀಮತಿ ಉಷಾ ಮತ್ತು ಬಿಳಿಚೋಡು ಶಾಮರಾವ್

ದಾವಣಗೆರೆ, ಇವರ ದ್ವಿತೀಯ ಪುತ್ರ

ಇವರ ವಿವಾಹ ಮಂಗಳ ಮಹೋತ್ಸವವು ಶ್ರೀ ಹರಿವಾಯು ಗುರುಗಳ ಪರಮಾನುಗ್ರಹದಿಂದ ಗುರು-ಹಿರಿಯರ ಶುಭಾಶೀರ್ವಾದದೊಂದಿಗೆ ನೆರವೇರಲಿದ್ದು, ತಾವುಗಳೆಲ್ಲ ಈ ಶುಭ ದಿನಕ್ಕೆ ಆಗಮಿಸಿ ವಧು-ವರರನ್ನು ಆಶೀರ್ವದಿಸಬೇಕಾಗಿ ಕೋರುತ್ತೇವೆ.

ವಿವಾಹ ದಿನಾಂಕ : 06.12.2024 ಶುಕ್ರವಾರ ಮಧ್ಯಾಹ್ನ 12.15 ರಿಂದ 12.40ಕ್ಕೆ

ವಿವಾಹ ಸ್ಥಳ : ಕಮ್ಮಾರೆಡ್ಡಿ ಸಮುದಾಯ ಭವನ, ತುರುವನೂರು ರಸ್ತೆ, NH4 ಸರ್ವೀಸ್ ರಸ್ತೆ, ಬ್ಯಾಂಕ್ ಕಾಲೋನಿ, ಚಿತ್ರದುರ್ಗ.

**ಆರತಕ್ಷತೆ ಕಾರ್ಯಕ್ರಮ**

ನನ್ನ ತಂಗಿಯ ಮಗಳಾದ ಸುರಭಿ ಎಸ್. ಭಾರದ್ವಾಜ್ ಮತ್ತು ಚೇತನ್ ಬಿಳಿಚೋಡು ಇವರ ಆರತಕ್ಷತೆ ಕಾರ್ಯಕ್ರಮವನ್ನು ದಿನಾಂಕ : 7.12.2024ರ ಶನಿವಾರ ಸಂಜೆ 7.00 ಗಂಟೆಗೆ ದಾವಣಗೆರೆ - ಹರಿಹರ ಅರ್ಬನ್ ಬ್ಯಾಂಕ್ ಸಮುದಾಯ ಭವನ, ಎಂ.ಸಿ.ಸಿ. ಎ ಬ್ಲಾಕ್, (ವಿನೋಬನಗರ, 1ನೇ ಕ್ರಾಸ್ ಡೆಡ್ ಎಂಡ್) ಇಲ್ಲಿ ಏರ್ಪಡಿಸಲಾಗಿದೆ.

ಸರ್ವರೂ ಆಗಮಿಸಿ ನಮ್ಮ ಮನಸ್ಸಂತೋಷಪಡಿಸಬೇಕಾಗಿ ವಿನಂತಿ.

ತಮ್ಮ ಆಗಮನದ ನಿರೀಕ್ಷೆಯಲ್ಲಿರುವ :

ಶ್ರೀಮತಿ ವಿಜಯಲಕ್ಷ್ಮೀ ಬಿ.ಜೆ. ಅನಂತಪದ್ಮನಾಭರಾವ್, ಜನತಾವಾಣಿ ವರದಿಗಾರರು

ಸರ್ಕಾರಿ ಆಸ್ಪತ್ರೆ ರಸ್ತೆ, ಭರಮಸಾಗರ. ಮೊ. : 9964 891029

ಕು॥ ಅಕ್ಷತಾರಾವ್ , ಕು॥ ಅಂಜನರಾವ್, ಬಿ.ಎ.,

ಶ್ರೀಮತಿ ಜಯಮ್ಮ ಜಯರಾವ್ ಶಾನ್‌ಭೋಗ್, ಕುಟುಂಬದವರು ಮತ್ತು ಬಂಧು-ಮಿತ್ರರು.

# ಜಿಲ್ಲೆಯ ಕೆರೆಗಳ ಕಾಯಕಲ್ಪಕ್ಕೆ ಒತ್ತಾಯ



ದಾವಣಗೆರೆ, ಡಿ. 5- ಜಿಲ್ಲೆಯ ಕೆರೆಗಳ ಕಾಯಕಲ್ಪ ಹಾಗೂ ಅಭಿವೃದ್ಧಿ ವಿಚಾರವಾಗಿ ತುರ್ತು ಸಭೆ ಕರೆಯುವಂತೆ ನೆಲ ಜಲ ಹಾಗೂ ಪರಿಸರ ಸಂರಕ್ಷಣಾ ಆಂದೋಲನಾ ಸಮಿತಿ ಗುರುವಾರ ಜಿಲ್ಲಾಧಿಕಾರಿಗಳಿಗೆ ಮನವಿ ಸಲ್ಲಿಸಿದೆ.

ಜಿಲ್ಲೆಯಲ್ಲಿ 538 ಕೆರೆಗಳಿದ್ದು, ಅದರಲ್ಲಿ ಮಹಾನಗರ ಪಾಲಿಕೆಗೆ ಸೇರಿದ ಕೆರೆಗಳು ಬೃಹತ್ ನೀರಾವರಿ ಇಲಾಖೆ, ಸಣ್ಣ ನೀರಾವರಿ ಇಲಾಖೆ, ಜಿಲ್ಲಾ ಪಂಚಾಯತಿ ಹಾಗೂ ಗ್ರಾಮ ಪಂಚಾಯತಿಯ ಕೆರೆಗಳೂ ಸೇರಿರುತ್ತವೆ. 2024ರ ಮಳೆಗಾಲದ ಹಂಗಾಮಿನಲ್ಲಿ 235 ಕೆರೆಗಳು ಮಾತ್ರ ತುಂಬಿದ್ದು, ಇನ್ನುಳಿದ ಕೆರೆಗಳಲ್ಲಿ ಶೇ. 30-50ರಷ್ಟು ಮಾತ್ರ ನೀರು ತುಂಬಿದೆ. ಉಳಿದ ನೀರು ಕೆರೆಗೆ ಬರುವ ಮೂಲ ಒತ್ತುವರಿಯಾಗಿ ಕೆರೆಗೆ ಬರುವ ನೀರು ಬಾರದೇ, ಸಮುದ್ರ ಸೇರಿರುತ್ತದೆ.

538 ಕೆರೆಗಳಿಂದ 40 ಟಿಎಂಸಿ ನೀರು ಸಂಗ್ರಹವಾಗಬೇಕಾಗಿದ್ದು, ಕೇವಲ 17 ಟಿಎಂಸಿ ಮಾತ್ರ ಕೆರೆಗೆ ಶೇಖರಣೆಯಾಗಿದ್ದು, ಉಳಿದ 23 ಟಿಎಂಸಿ ನೀರು ಸಂಬಂಧಿಸಿದ ಇಲಾಖೆಯವರ ಬೇಜಾವಾಬ್ದಾರಿಯಿಂದ ನೀರು ಸಮುದ್ರದ ಪಾಲಾಗಿದೆ.

ಆದ್ದರಿಂದ ಬೇಸಿಗೆಯಲ್ಲಿ ನೀರಿಗೆ ಹಾಹಾಕಾರ ಪಡುವ ಬದಲು ಬೇಸಿಗೆ ಬರುವ 3 ತಿಂಗಳ ಮೊದಲೇ ಸಭೆ ಕರೆದು ಸಂಬಂಧಿಸಿದ ಇಲಾಖೆ ಹೂಳು ತೆಗೆಯುವುದು, ಏರಿಯನ್ನು ಭದ್ರಗೊಳಿಸುವುದು, ಮುಖ್ಯ ಕಾಲುವೆಗಳನ್ನು ಸ್ವಚ್ಛಗೊಳಿಸುವುದು ಹಾಗೂ ಒತ್ತುವರಿ ತೆರವುಗೊಳಿಸುವುದು, ನೀರು ಬರುವ ಮಾರ್ಗವನ್ನು ಸರಳೀಕರಣಗೊಳಿಸುವುದು ಸೇರಿದಂತೆ ಈ ಎಲ್ಲಾ ವಿಷಯಗಳ ಬಗ್ಗೆ ತುರ್ತು ಸಭೆ ಕರೆಯಬೇಕೆಂದು ಸಮಿತಿ ಒತ್ತಾಯಿಸಿ ಜಿಲ್ಲಾಧಿಕಾರಿಗಳಿಗೆ ಮನವಿ ಸಲ್ಲಿಸಲಾಯಿತು.

ಈ ಸಂದರ್ಭದಲ್ಲಿ ಸಮಿತಿಯ ರಾಜ್ಯಸಂಚಾಲಕ ಬಲ್ಲೂರು ರವಿಕುಮಾರ್, ಜಿಲ್ಲಾ ಸಂಚಾಲಕರಾದ ಮಿಯ್ಯಾಪುರದ ತಿರುಮಲ್ಲೇಶ್, ಹೆಬ್ಬಾಳು ರಾಜಯೋಗಿ, ತಾಲ್ಲೂಕು ಸಂಚಾಲಕ ಸಾಣೇಹಳ್ಳಿ ಗುರುಮೂರ್ತಿ ಉಪಸ್ಥಿತರಿದ್ದರು.

# ವೀರೇಶ್ವರ ಪುಣ್ಯಾಶ್ರಮದಲ್ಲಿ ಕಾರ್ತಿಕೋತ್ಸವ



ದಾವಣಗೆರೆ, ಡಿ.5- ನಗರ ಸಮೀಪದ ಬಾಡಾ ಕ್ರಾಸ್‌ನಲ್ಲಿರುವ ಶ್ರೀ ವೀರೇಶ್ವರ ಪುಣ್ಯಾಶ್ರಮದಲ್ಲಿ ಕಾರ್ತಿಕೋತ್ಸವ ಕಾರ್ಯಕ್ರಮ ನಡೆಯಿತು.

ಮುಖ್ಯ ಅತಿಥಿಯಾಗಿ ಹಿರಿಯ ಕೈಗಾರಿಕೋದ್ಯಮಿ ಡಾ. ಅಥಣಿ ಎಸ್. ವೀರಣ್ಣ ಭಾಗವಹಿಸಿದ್ದರು. ನಲ್ಕುದುರೆಯ ಶ್ರೀಮತಿ ಶಶಿಕಲಾ ಮೂರ್ತಿ, ಎಸ್.ಕೆ. ವೀರಣ್ಣ, ಜೆ.ಎನ್. ಕರಿಬಸಪ್ಪ, ಜಿ.ಹೆಚ್. ಯಲ್ಲಪ್ಪ, ಎ.ಹೆಚ್. ಸಿದ್ದಲಿಂಗಸ್ವಾಮಿ ಉಪಸ್ಥಿತರಿದ್ದರು. ಶ್ರೀ ಗುರು ಪಂಚಾಕ್ಷರಿ ಗವಾಯಿಗಳವರ ಅಂಧರ ಶಿಕ್ಷಣ ಸಮಿತಿ ಹಾಗೂ ಸಿಬ್ಬಂದಿ ವರ್ಗ ಮತ್ತಿತರರು ಉಪಸ್ಥಿತರಿದ್ದರು.

# ಕನ್ನಡ ನಾಡಿನ ಸೇವೆ ನಮ್ಮ ಮನೆಯ ಕೆಲಸವಾಗಬೇಕು

## ಹರಪನಹಳ್ಳಿ ಕಾರ್ಯಕ್ರಮದಲ್ಲಿ ಸರ್ಕಾರಿ ಪ್ರಥಮ ದರ್ಜೆ ಕಾಲೇಜು ಪ್ರಾಂಶುಪಾಲ ಡಾ. ಕೆ. ಸತೀಶ್




ಹರಪನಹಳ್ಳಿ, ಡಿ. 5- ಕನ್ನಡ ನಾಡಿನ ಸೇವೆ ನಮ್ಮ ಮನೆಯ ಕೆಲಸವಾಗಬೇಕು. ಓದುಗರೆಲ್ಲ ವೀಕ್ಷಕರಾಗಿ ಬದಲಾದ ಈ ಕಾಲಘಟ್ಟದಲ್ಲಿ ದತ್ತಿ ಉಪನ್ಯಾಸಗಳು ಹೆಚ್ಚಿನ ಮಹತ್ವ ಪಡೆಯುತ್ತಿವೆ ಎಂದು ಸರ್ಕಾರಿ ಪ್ರಥಮ ದರ್ಜೆ ಕಾಲೇಜು ಪ್ರಾಂಶುಪಾಲ ಡಾ. ಕೆ. ಸತೀಶ್ ಹೇಳಿದರು.

ಪಟ್ಟಣದ ಸರ್ಕಾರಿ ಪ್ರಥಮ ದರ್ಜೆ ಕಾಲೇಜಿನಲ್ಲಿ ಶ್ರೀಮತಿ ಚಿಗಟೇರಿ ಬಾರಿಕರ ಅಂಬಮ್ಮ ಮತ್ತು ಹನುಮಂತಪ್ಪ ದತ್ತಿ, ಮೈದೂರು ಶ್ರೀಮತಿ ಸಾವಿತ್ರಮ್ಮ ಕೆ. ರಾಮಪ್ಪ ದತ್ತಿ, ಶ್ರೀ ಹಾಲನಾಯ್ಕ ಲಷ್ಕರಿನಾಯ್ಕ ದತ್ತಿ ಉಪನ್ಯಾಸ ಕಾರ್ಯಕ್ರಮವನ್ನು ಉದ್ಘಾಟಿಸಿ ಅವರು ಮಾತನಾಡಿದರು.

ಕನ್ನಡ ಭಾಷೆ ಶ್ರೀಮಂತ ಭಾಷೆ, ಕನ್ನಡ ಭಾಷೆ ಬಳಕೆ ಸಮೃದ್ಧವಾಗಬೇಕು, ಅನ್ಯ ಭಾಷೆ ವ್ಯವಹಾರಕ್ಕೆ ಸೀಮಿತವಾಗಬೇಕು. ಜನಸೇವೆ ತೋರಿಕೆಗೆ ಆಗದೇ ಜನಪರವಾಗಿರಬೇಕು. ಹಿರಿಯರ ನೆನಪಿಗಾಗಿ ಅವರ ಹೆಸರಲ್ಲಿ ದತ್ತಿ ಕಾರ್ಯಕ್ರಮ ನಡೆಸುವುದು ಶ್ಲಾಘನೀಯ ಕಾರ್ಯ. ಇದರಿಂದ ಕನ್ನಡ ಭಾಷೆಯ ಬೆಳವಣಿಗೆಯೂ ಆಗುತ್ತದೆ. ಇಂದಿನ ಪಾಶ್ಚಾತ್ಯ ಶೈಲಿಯ ಸಂಗೀತದ ಮಧ್ಯೆ ಜಾನಪದ ಗೀತೆಗಳು ತನ್ನ ಹಿಂದಿನ ವೈಭವವನ್ನು ಸ್ವಲ್ಪಮಟ್ಟಿಗೆ ಕಳೆದುಕೊಂಡಿವೆ ಎಂದೆನಿಸಿದರೂ ತನ್ನ ಮೂಲ ನೆಲೆಯಾದ ಹಳ್ಳಿಗಳಲ್ಲಿ ಇನ್ನೂ ತನ್ನ ನೆಲೆಯನ್ನು ಭದ್ರವಾಗಿ ಉಳಿಸಿಕೊಂಡಿರುವುದು ಸಮಾಧಾನ ತರುವ ಸಂಗತಿಯಾಗಿದೆ ಎಂದರು.

ಕನ್ನಡ ಸಾಹಿತ್ಯ ಪರಿಷತ್ತು ತಾಲ್ಲೂಕು ಅಧ್ಯಕ್ಷ ಕೆ. ಉಚ್ಚೆಂಗೆಪ್ಪ ಕಾರ್ಯಕ್ರಮದ ಅಧ್ಯಕ್ಷತೆ ವಹಿಸಿ ಮಾತನಾಡಿ, ಕನ್ನಡಿಗರು ತಮ್ಮ ಭಾಷೆಗೆ ಸಮರ್ಪಿಸಿ ಕೊಳ್ಳುವ ಕೆಲಸವನ್ನು ಪ್ರತಿನಿತ್ಯವೂ ಮಾಡಲಿ. ಕನ್ನಡ ಸಾಹಿತ್ಯ ಪರಿಷತ್ತು ಕನ್ನಡ, ಕನ್ನಡಿಗ-ಕರ್ನಾಟಕಕ್ಕೆ ದುಡಿಯುವ ಸಂಸ್ಥೆಯಾಗಿದ್ದು, ನಿರಂತರವಾಗಿ ಕನ್ನಡವನ್ನು ಜಾಗೃತಿಗೊಳಿಸುತ್ತಿರುವ ಸಂಸ್ಥೆಯಾಗಿದೆ. ವಿದ್ಯಾರ್ಥಿಗಳು ಕನ್ನಡದ ಇತಿಹಾಸದ ಬಗ್ಗೆ ತಿಳಿದುಕೊಂಡು ಕನ್ನಡದ ಬಗ್ಗೆ ಅಭಿಮಾನ ಮೂಡಿಸಿಕೊಳ್ಳಬೇಕು. ಶಿಕ್ಷಣದೊಂದಿಗೆ ಸಾಹಿತ್ಯ ಪರ ಚಟುವಟಿಕೆಗಳಲ್ಲಿಯೂ ತೊಡಗಿಸಿಕೊಳ್ಳಬೇಕು ಎಂದು ಸಲಹೆ ನೀಡಿದರು.

ಅಡವಿ ಮಲ್ಲನಕೇರಿ ಸರ್ಕಾರಿ ಪ್ರೌಢಶಾಲಾ ಕನ್ನಡ ಶಿಕ್ಷಕಿ ಕೆ. ಮುಮ್ತಾಜ್ ಬೇಗಂ ಜಾನಪದ ಸಾಹಿತ್ಯ ಮತ್ತು ಕಲೆ ಕುರಿತು ಮಾತನಾಡಿ, ಜನಪದ ಸಾಹಿತ್ಯವು ಆಕಾಶದಷ್ಟು ವಿಶಾಲ, ಸಾಗರದಷ್ಟು ಆಳ. ಅದರಲ್ಲಿ ಹಲವು ಪ್ರಕಾರಗಳಿವೆ. ಗಾದೆ, ಒಗಟು, ಒಡಪು, ಕಥೆ, ಗೀತೆ, ಕಥನ ಗೀತೆ ಪ್ರಮುಖವಾಗಿವೆ. ಇಡೀ ಜಗತ್ತಿನ ಸಾಹಿತ್ಯದ ಮೂಲವನ್ನೆಲ್ಲಾ ಜನಪದ ಸಾಹಿತ್ಯದಲ್ಲಿ ಕಾಣಬಹುದು. ನವರಸಗಳನ್ನೂ ಒಳಗೊಂಡಿರುವ ಮೂಲ ಜಾನಪದ ಕಲೆ ಮತ್ತು ಸಾಹಿತ್ಯವನ್ನು ಜನಸಾಮಾನ್ಯರ ಬಳಿಗೆ ಕೊಂಡೊಯ್ಯುವುದು ಪರಿಷತ್ತಿನ ಉದ್ದೇಶಗಳಲ್ಲಿ ಒಂದು. ಅನೇಕ ರೀತಿಯಲ್ಲಿ ಹುದುಗಿರುವ ಜಾನಪದ ಸಾಹಿತ್ಯವನ್ನು ಹೆಕ್ಕಿ ತೆಗೆದು ಸಂಗ್ರಹಿಸಿದರೆ ಅದನ್ನು ಭವಿಷ್ಯದ ಪೀಳಿಗೆಯವರೆಗೂ ತಲುಪಿಸಲು ಸಾಧ್ಯವಾಗಲಿದೆ. ಜಾನಪದ ಎಂಬುದು ಸಾಂಸ್ಕೃತಿಕ, ಸಾಮಾಜಿಕ ವ್ಯವಸ್ಥೆಯ ಮೂಲವೇ ಆಗಿದೆ, ಜಾನಪದ ಮತ್ತು ಜನರ ಬದುಕಿನಲ್ಲಿ ಅವಿನಾಭಾವ ಸಂಬಂಧ ಇದ್ದು, ನಡೆ-ನುಡಿಯಲ್ಲಿ, ಆಹಾರ, ವೇಷಭೂಷಣ, ಕೃಷಿ, ಕಲೆ ಇವೆಲ್ಲವೂ ಜನಪದದ ಭಾಗಗಳಾಗಿವೆ ಎಂದರು.

ಕನ್ನಡ ಸಾಹಿತ್ಯ ಪರಿಷತ್ತು ತಾಲ್ಲೂಕು ಘಟಕದ ಮಾಜಿ ಅಧ್ಯಕ್ಷ ಡಿ. ರಾಮನಮಲಿ ಮಾತನಾಡಿ, ಹೊಟ್ಟೆಯ ಹಸಿವಿಗಿಂತ ನೆತ್ತಿಯ ಹಸಿವುಮುಖ್ಯವಾಗಿದ್ದು ಕಲಿಯದವರು ಕಲಿತವರಿಗೆ ಕಲಿಸುವುದೇ ಜಾನಪದ ಎಂದರು.

ಸರ್ಕಾರಿ ಪ್ರಥಮ ದರ್ಜೆ ಕಾಲೇಜು ಸಹಾಯಕ ಪ್ರಾಧ್ಯಾಪಕ ಕೆ.ಎಂ. ಹುಚ್ಚರಾಯಪ್ಪ, ಡಾ. ಕೆ.ಬುಳ್ಳಪ್ಪ, ಕೆ. ಶಂಭುಲಿಂಗಪ್ಪ, ಪುನೀತರಾಜ್, ದೈಹಿಕ ಶಿಕ್ಷಣ ನಿರ್ದೇಶಕ ಹೆಚ್. ಕೊಟ್ರೇಶ, ಕನ್ನಡ ಸಾಹಿತ್ಯ ಪರಿಷತ್ತು ಅರಸಿಕೇರಿ ಹೋಬಳಿ ಘಟಕದ ಅಧ್ಯಕ್ಷ ಡಾ. ಎಂ. ಸುರೇಶ, ಕನ್ನಡ ಸಾಹಿತ್ಯ ಪರಿಷತ್ತು ತಾಲ್ಲೂಕು ಗೌರವ ಕಾರ್ಯದರ್ಶಿ ಜಿ. ಮಹಾದೇವಪ್ಪ, ಕಾರ್ಯಕಾರಿ ಮಂಡಳಿ ಸದಸ್ಯ ಬಿ.ಎಂ. ನಾಗರಾಜ ಸೇರಿದಂತೆ ಮತ್ತಿತರರು ಈ ಸಂದರ್ಭದಲ್ಲಿ ಉಪಸ್ಥಿತರಿದ್ದರು.

# ಹೊಸಬೆಳವನೂರಿನಲ್ಲಿ ಬಸವೇಶ್ವರ, ಶ್ರೀ ಸಿದ್ಧಿವಿನಾಯಕ ಕಾರ್ತಿಕೋತ್ಸವ



ದಾವಣಗೆರೆ, ಡಿ. 5- ಇಂದಿನ ಹಿರಿಯರು ಹಿಂದಿನ ಕಾಲದ ಸಿಸಿ ಕ್ಯಾಮರಾಗಳಾಗಿದ್ದರು. ಊರಿಗೆ ಯಾರಾದರೂ ಹೊಸಬರು ಬಂದರೆ ಅವರ ಎಲ್ಲಾ ಮಾಹಿತಿಯನ್ನೂ ಸಂಗ್ರಹಿಸುತ್ತಿದ್ದರು ಎಂದು ಡಾ. ಹೆಚ್. ಎಸ್. ಮಂಜುನಾಥ್ ಕುರ್ಕಿ ತಿಳಿಸಿದರು.

ಸಮೀಪದ ಹೊಸಬೆಳವನೂರು ಗ್ರಾಮದಲ್ಲಿ ಏರ್ಪಡಿಸಿದ್ದ ಶ್ರೀ ಬಸವೇಶ್ವರ ಮತ್ತು ಶ್ರೀ ಸಿದ್ಧಿವಿನಾಯಕ ದೇವಸ್ಥಾನದ ಕಾರ್ತಿಕೋತ್ಸವ ಹಾಗೂ ಗ್ರಾಮದ ಅತ್ಯಂತ ಹಿರಿಯರಿಗೆ ನಡೆದ ಸನ್ಮಾನ ಕಾರ್ಯಕ್ರಮದಲ್ಲಿ ಉಪಸ್ಥಿತರಿದ್ದು ಅವರು ಮಾತನಾಡಿದರು.

ಗ್ರಾಮದ ಸಾಂಸ್ಕೃತಿಕ ಮೌಲ್ಯಗಳಾಗಿರುವ ಇಂತಹ ಹಿರಿಯರನ್ನು ಸನ್ಮಾನಿಸುತ್ತಿರುವುದು ಶ್ಲಾಘನೀಯ ಹಾಗೂ ಅವರ ಬದುಕಿನ ಸಾರ್ಥಕತೆಗೆ ಗೌರವ ಸೇರಿದಂತೆ ಎಂದರು. ಇಂತಹ ಕಾರ್ಯಕ್ರಮಗಳು ಸ್ಫೂರ್ತಿದಾಯಕವಾಗಿವೆ ಎಂದರು.

ಕಾರ್ಯಕ್ರಮದ ಅಧ್ಯಕ್ಷತೆ ವಹಿಸಿದ್ದ ಎಸ್.ಬಿ. ಪ್ರಭಾಕರ್, ಹಿರಿ-ಕಿರಿಯರನ್ನು ಗೌರವಿಸುವುದೆಂದರೆ ನಮ್ಮೂರಿಗೆ ಗೌರವ ಮತ್ತು ಇಂತಹ ಸಾಂಸ್ಕೃತಿಕ ಕಾರ್ಯಕ್ರಮಗಳು ಭಾವೈಕ್ಯತೆಯನ್ನು ಕಾಪಾಡುತ್ತವೆ ಎಂದರು.

ಈ ಸಂದರ್ಭದಲ್ಲಿ ಕೆ. ಉಜ್ಜಪ್ಪ, ಕೆ.ಎಸ್. ಶೇಖರಪ್ಪ, ಹೆಚ್. ಧರ್ಮಪ್ಪ, ಬಿ.ಜಿ. ಬಸವರಾಜಪ್ಪ, ಹೆಚ್. ತಿಪ್ಪೇಶಪ್ಪ, ಮಂಜಪ್ಪ ಮೇಷ್ಟ್ರು, ಹೆಚ್. ಎಂ. ರೇವಣಸಿದ್ದಪ್ಪ, ವಿಠ್ಠಲಾಪುರದ ಶಿವಮೂರ್ತ್ಯಪ್ಪ, ಕುಂಬಾರ ಶೇಖರಪ್ಪ, ಎಂ.ಎಸ್. ಪರಮೇಶ್ವರಪ್ಪ, ಪಾಲಪ್ಪರ ನಿಂಗಪ್ಪ, ವಿಠ್ಠಲಾಪುರದ ರಾಮಚಂದ್ರಪ್ಪ, ಶ್ರೀಮತಿ ಕರಿಬಸಮ್ಮ ಅವರುಗಳನ್ನು ಸನ್ಮಾನಿಸಿ, ಗೌರವಿಸಲಾಯಿತು.

ಎಂ.ಎಸ್. ಮಲ್ಲಿಕಾರ್ಜುನ ಸ್ವಾಗತಿಸಿದರು. ಕೆ.ಎಂ. ಮಹೇಂದ್ರ ಪ್ರಾಸ್ತಾವಿಕವಾಗಿ ಮಾತನಾಡಿದರು. ವಿಠ್ಠಲಾಪುರದ ರತ್ನಮ್ಮ ವಂದಿಸಿದರು.

# ಪ್ರಮಾಣ ವಚನ ಸ್ವೀಕರಿಸಿದ ದೇವೇಂದ್ರ

(1ನೇ ಪುಟದಿಂದ) ಉಪಸ್ಥಿತರಿದ್ದರು.

ದೇವೇಂದ್ರ ಫಡ್ನವೀಸ್ ಮೂರನೇ ಬಾರಿ ಪ್ರಮಾಣ ವಚನ ಸ್ವೀಕರಿಸಿದರು. ಮೊದಲ ಬಾರಿಗೆ ಅಕ್ಟೋಬರ್ 2014 ರಿಂದ ನವೆಂಬರ್ 2019 ರವರೆಗೆ ಪೂರ್ಣ ಅವಧಿಗೆ ಮುಖ್ಯಮಂತ್ರಿಯಾಗಿ ಸೇವೆ ಸಲ್ಲಿಸಿದ್ದರು. ಅಲ್ಲದೆ 44ನೇ ವಯಸ್ಸಿನಲ್ಲಿ ಸಿಎಂ ಹುದ್ದೆಯನ್ನು ಅಲಂಕರಿಸಿದ ಅತ್ಯಂತ ಕಿರಿಯ ವ್ಯಕ್ತಿ ಎಂಬ ಗೌರವಕ್ಕೆ ಪಾತ್ರರಾಗಿದ್ದರು. ಅವರ ಎರಡನೇ ಅವಧಿಯು ಅತ್ಯಂತ ಸಂಕ್ಷಿಪ್ತವಾಗಿತ್ತು. ಕೇವಲ ಐದು ದಿನಗಳ ಕಾಲ ಅಂದರೆ ನವೆಂಬರ್ 23 ರಿಂದ 28, 2019 ರವರೆಗೆ ಸಿಎಂ ಆಗಿದ್ದರು. ಅವಿಭಜಿತ ಶಿವಸೇನೆ, ಬಿಜೆಪಿ ಜೊತೆ ಮೈತ್ರಿ ಮುರಿದುಕೊಂಡಿದ್ದರಿಂದ ಸರ್ಕಾರ ಫಡ್ನವೀಸ್ ಸರ್ಕಾರ ಪತನವಾಗಿತ್ತು.

**ಮಿಂಚಿದ ದೇವೇಂದ್ರ ಫಡ್ನವೀಸ್ ಪತ್ನಿ:** ಫಡ್ನವೀಸ್ ಮುಖ್ಯಮಂತ್ರಿಯಾಗಿ ಪ್ರಮಾಣ ವಚನ ಸ್ವೀಕಾರ ಕಾರ್ಯಕ್ರಮದಲ್ಲಿ ಅವರ ಪತ್ನಿ ಅಮೃತಾ ಫಡ್ನವೀಸ್ ಎಲ್ಲರ ಗಮನ ಸೆಳೆದಿದ್ದಾರೆ. ಹಳದಿ – ಬಂಗಾರ ಬಣ್ಣದ ಸೀರೆಯುಟ್ಟು ಕಾರ್ಯಕ್ರಮಕ್ಕೆ ಆಗಮಿಸಿದ್ದರು.

ಸುದ್ದಿಗಾರರೊಂದಿಗೆ ಮಾತನಾಡಿದ ಅವರು, 'ದೇವೇಂದ್ರ ಅವರು ಆರು ಬಾರಿ ಶಾಸಕರಾಗಿ, ಮೂರನೇ ಬಾರಿ ಮುಖ್ಯಮಂತ್ರಿ ಆಗುತ್ತಿರುವುದಕ್ಕೆ ಬಹಳ ಸಂತಸವಾಗಿದೆ. ಅವರ ಜವಾಬ್ದಾರಿ ಕೂಡ ಹೆಚ್ಚಾಗಿದೆ' ಎಂದು ಅಭಿಪ್ರಾಯ ವ್ಯಕ್ತಪಡಿಸಿದ್ದಾರೆ.

# ಉಕ್ಕಡಗಾತ್ರಿಯಲ್ಲಿ ಇಂದು ಮೌಢ್ಯ ವಿರೋಧಿ ದಿನಾಚರಣೆ

ಸುಕ್ಷೇತ್ರ ಉಕ್ಕಡಗಾತ್ರಿ ಗ್ರಾಮದ ರುದ್ರಭೂಮಿಯಲ್ಲಿ ಇಂದು ಸಂಜೆ 5 ಗಂಟೆಗೆ ಮಾನವ ಬಂಧುತ್ವ ವೇದಿಕೆ ವತಿಯಿಂದ ಸಂವಿಧಾನ ಶಿಲ್ಪಿ ಡಾ. ಬಿ.ಆರ್.ಅಂಬೇಡ್ಕರ್ ಅವರ 68ನೇ ಮಹಾಪರಿನಿರ್ವಾಣ ದಿನದ ಅಂಗವಾಗಿ ಮೌಢ್ಯ ವಿರೋಧಿ ದಿನಾಚರಣೆ ಕಾರ್ಯಕ್ರಮವನ್ನು ಹಮ್ಮಿಕೊಳ್ಳಲಾಗಿದೆ ಎಂದು ಮಂಜು ದೊಡ್ಮನಿ ತಿಳಿಸಿದ್ದಾರೆ. ಜಿ. ಮಂಜುನಾಥ್ ಪಟೇಲ್, ಜಿಗಳಿ ಆನಂದಪ್ಪ, ಸಾಬೀರ್ ಅಲಿ, ಕೆ.ಪಿ. ಗಂಗಾಧರ್, ಕುಂಬಳೂರು ವಾಸುದೇವಮೂರ್ತಿ, ಪತ್ರಕರ್ತ ಪ್ರಕಾಶ್, ಬಸವರಾಜ್ ದೊಡ್ಮನಿ ಸೇರಿದಂತೆ ಇತರರು ಭಾಗವಹಿಸಲಿದ್ದಾರೆ.

# ಅಧಿವೇಶನಕ್ಕೆ ವಿಶೇಷ ವಿಮಾನ

(1ನೇ ಪುಟದಿಂದ) ಹೊರಟು ಬೆಳಗ್ಗೆ 8:30 ಕ್ಕೆ ಬೆಂಗಳೂರು ವಿಮಾನ ನಿಲ್ದಾಣದಲ್ಲಿ ತಲುಪಲಿದೆ ಎಂದು ಇಂಡಿಗೋ ತಿಳಿಸಿದೆ. ಬೆಳಗಾವಿ ಸಂಸದರಾದ ಜಗದೀಶ್ ಶೆಟ್ಟರ್ ಮತ್ತು ರಾಜ್ಯಸಭಾ ಸದಸ್ಯ ಈರಣ್ಣ ಕಡಾಡಿ ಅವರು ಅಧಿವೇಶನದ ಸಮಯದಲ್ಲಿ ಬೆಳಗಾವಿ ಮತ್ತು ಬೆಂಗಳೂರು ನಡುವೆ ವಿಶೇಷ ವಿಮಾನ ಸಂಚಾರಕ್ಕೆ ಮನವಿ ಮಾಡಿದ್ದರು.

# ನಗರದಲ್ಲಿ ನಾಳೆ ದೇಹದಾರ್ಢ್ಯ ಸ್ಪರ್ಧೆ

ದಾವಣಗೆರೆ, ಡಿ.5- ಮಾಯಾಸ್‌ಫ್ರೆಂಡ್ಸ್ ಗ್ರೂಪ್, ಜಿಎಸ್‌ಎನ್ ಗ್ಲೋಬಲ್ ಸ್ಪೋರ್ಟ್ಸ್ ನ್ಯೂಟ್ರಿಷನ್ ಹಾಗೂ ಮಣಿ ಸರ್ಕಾರ್ ನೇತೃತ್ವದಲ್ಲಿ ರಾಜ್ಯ ಮಟ್ಟದ ದೇಹದಾರ್ಢ್ಯ 'ಕರ್ನಾಟಕ ಸಿರಿ-2024' ಹಾಗೂ 'ಸರ್ಕಾರ್ ಮೆನ್ಸ್ ಫಿಸಿಕ್ ಐಕಾನ್ ಚಾಂಪಿಯನ್‌ಶಿಪ್' ಪಂದ್ಯಾವಳಿಯನ್ನು ನಾಡಿದ್ದು ದಿನಾಂಕ 7ರ ಶನಿವಾರ ಮೋತಿ ವೀರಪ್ಪ ಕಾಲೇಜು ಮೈದಾನದಲ್ಲಿ ಆಯೋಜಿಸಲಾಗಿದೆ ಎಂದು ದೇಹದಾರ್ಢ್ಯ ಸಂಘದ ಪ್ರಧಾನ ಕಾರ್ಯದರ್ಶಿ ಸಂತೋಷ್ ಏಕಬೋಟೆ ತಿಳಿಸಿದರು.

ಪತ್ರಿಕಾಗೋಷ್ಠಿಯಲ್ಲಿ ಮಾತನಾಡಿದ ಅವರು, ಇಂಡಿಯನ್ ಬಾಡಿ ಬಿಲ್ಡಿಂಗ್ ಫೆಡರೇಷನ್, ಕರ್ನಾಟಕ ಅಸೋಸಿಯೇಶನ್ ಆಫ್ ಬಾಡಿ ಬಿಲ್ಡರ್ಸ್ ಹಾಗೂ ದಾವಣಗೆರೆ ಅಸೋಸಿಯೇಷನ್ ಆಫ್ ಬಾಡಿ ಬಿಲ್ಡರ್ಸ್ ಸಹಯೋಗದಲ್ಲಿ ಸ್ಪರ್ಧೆ ಸಂಘಟಿಸಲಾಗಿದೆ ಎಂದರು.

ದಿನಾಂಕ 7ರಂದು ಸಚಿವ ಎಸ್.ಎಸ್. ಮಲ್ಲಿಕಾರ್ಜುನ್ ಸ್ಪರ್ಧೆಗೆ ಚಾಲನೆ ನೀಡುವರು. ದೂಡಾ ಅಧ್ಯಕ್ಷ ದಿನೇಶ್ ಕೆ. ಶೆಟ್ಟಿ, ಮುರುಗೇಶ್ ದೇವರಮನೆ, ಆರ್.ಎಲ್. ಶಿವಪ್ರಕಾಶ್, ಎಲ್. ವಾಸುದೇವ್ ರಾಯ್ಕರ್, ನರೇಂದ್ರ ಕರೂರು, ಶ್ರೀನಿವಾಸ್ ದಾಸಕರಿಯಪ್ಪ, ಹೆಚ್ಚುವರಿ ಎಸ್ಪಿ ವಿಜಯಕುಮಾರ್ ಎಂ. ಸಂತೋಷ್ ಭಾಗವಹಿಸುವರು.

ಸಂಘಟನೆಯ ಪ್ರಮುಖರಾದ ಕೆ.ಎಂ. ಮಹೇಶ್, ನೂರ್ ಅಹ್ಮದ್, ಜಯಪ್ರಕಾಶ್, ಸಮೀರ್ ಇನ್ನಿತರರು ಪತ್ರಿಕಾಗೋಷ್ಠಿಯಲ್ಲಿದ್ದರು.

# ಮಲೇಷ್ಯಾದಲ್ಲಿ ಡಾ.ಪ್ರಸನ್ನಕುಮಾರ ಉಪನ್ಯಾಸ



ದಾವಣಗೆರೆ, ಡಿ. 5- ಮಲೇಷ್ಯಾದ ಮೊನಾಶ್ ವಿಶ್ವವಿದ್ಯಾಲಯದಲ್ಲಿ ಏರ್ಪಡಿಸಿರುವ ಹವಾಮಾನ ಸ್ಥಿತಿಸ್ಥಾಪಕ ಮೂಲ ಸೌಲಭ್ಯ- 2024 ಕುರಿತು ನಾಡಿದ್ದು ದಿನಾಂಕ 7ರಿಂದ 10ರ ವರೆಗೆ ಏರ್ಪಡಿಸಿರುವ ಅಂತರರಾಷ್ಟ್ರೀಯ ಮಟ್ಟದ ವಿಚಾರ ಸಂಕಿರಣದಲ್ಲಿ ದಾವಣಗೆರೆ ವಿಶ್ವವಿದ್ಯಾನಿಲಯದ ಗಣಿತಶಾಸ್ತ್ರ ಅಧ್ಯಯನ ವಿಭಾಗದ ಪ್ರಾಧ್ಯಾಪಕ ಡಾ.ಬಿ.ಸಿ.ಪ್ರಸನ್ನಕುಮಾರ ವಿಶೇಷ ಉಪನ್ಯಾಸ ನೀಡಲಿದ್ದಾರೆ.

ಜಾಗತಿಕ ಮಟ್ಟದ ವಿಚಾರ ಸಂಕಿರಣದಲ್ಲಿ 14 ರಾಷ್ಟ್ರಗಳ ಸಂಶೋಧಕರು ತಮ್ಮ ವಿದ್ವತ್ಪೂರ್ಣ ಪ್ರಬಂಧ ಮಂಡಿಸಲಿದ್ದಾರೆ. ಡಿ.9ರಂದು ನಿರ್ಮಾಣ ಪರಿವರ್ತನೆ ಕುರಿತು ಗೋಷ್ಠಿಯಲ್ಲಿ ಡಾ. ಪ್ರಸನ್ನಕುಮಾರ ಅವರು 'ಪ್ರಿಡಿಕ್ಟಿವ್ ಮಷಿನ್ ಲರ್ನಿಂಗ್ ಟೆಕ್ನಿಕ್ಸ್ ಫಾರ್ ಫರ್ಫಾರ್ಮೆನ್ಸ್ ಅನಲೈಸಿಸ್ ಆಫ್ ದಿ ಅರ್ಥ್-ಏರ್ ಹೀಟ್ ಎಕ್ಸ್‌ಚೇಂಜರ್' ಕುರಿತು ವಿಚಾರ ಮಂಡಿಸಲಿದ್ದಾರೆ. ಡಾ. ಪ್ರಸನ್ನಕುಮಾರ ಅವರು ಇತ್ತೀಚೆಗೆ ಕರ್ನಾಟಕ ಸರ್ಕಾರವು ಯುವ ವಿಜ್ಞಾನಿಗಳಿಗೆ ಕೊಡಮಾಡಿದ ಸರ್ ಸಿ.ವಿ. ರಾಮನ್ ಪ್ರಶಸ್ತಿ ಪಡೆದಿದ್ದಾರೆ.

ವಿಚಾರ ಸಂಕಿರಣದಲ್ಲಿ ಭಾಗವಹಿಸಲು ತೆರಳಿದ ಡಾ. ಪ್ರಸನ್ನಕುಮಾರ ಅವರನ್ನು ಕುಲಪತಿ ಪ್ರೊ.ಬಿ.ಡಿ.ಕುಂಬಾರ, ಕುಲಸಚಿವರಾದ ಪ್ರೊ. ಯು.ಎಸ್. ಮಹಾಬಲೇಶ್ವರ, ಪ್ರೊ.ರಮೇಶ್, ಡೀನ್‌ಗಳಾದ ಪ್ರೊ. ಆರ್.ಶಶಿಧರ, ಪ್ರೊ. ಕೆ.ವೆಂಕಟೇಶ, ಪ್ರೊ. ಸುಚಿತ್ರಾ ಅಭಿನಂದಿಸಿದರು.

## ಆಯವ್ಯಯ : ಪಾಲಿಕೆಯಲ್ಲಿ ನಾಳೆ ಸಭೆ

ದಾವಣಗೆರೆ, ಡಿ.5- ಮಹಾನಗರ ಪಾಲಿಕೆಯ ಕೌನ್ಸಿಲ್ ಸಭಾಂಗಣದಲ್ಲಿ ನಾಡಿದ್ದು ದಿನಾಂಕ 7ರ ಶನಿವಾರ ಬೆಳಿಗ್ಗೆ 11ಕ್ಕೆ ಪಾಲಿಕೆಯ 2025-26ನೇ ಆಯವ್ಯಯ ಪಟ್ಟಿ ತಯಾರಿಸಲು ಸಲಹೆ ಪಡೆಯಲು ಮೊದಲನೇ ಸಭೆ ಕರೆಯಲಾಗಿದೆ ಎಂದು ಪಾಲಿಕೆ ಆಯುಕ್ತರಾದ ಶ್ರೀಮತಿ ರೇಣುಕಾ ತಿಳಿಸಿದ್ದಾರೆ.

# ಮಲಬಾರ್ ಗೋಲ್ಡ್ ಅಂಡ್ ಡೈಮಂಡ್ಸ್ ಶೋ ರೂಂ ನಲ್ಲಿ ಆರ್ಟಿಸ್ಟ್ರಿ ಶೋ ಆರಂಭ




ದಾವಣಗೆರೆ, ಡಿ.5- ದೇಶದಲ್ಲಿ ಅತಿ ದೊಡ್ಡ ಚಿನ್ನ ಮತ್ತು ವಜ್ರದ ರಿಟೇಲ್ ಜಾಲಗಳಲ್ಲಿ ಒಂದಾಗಿರುವ ಮಲಬಾರ್ ಗೋಲ್ಡ್ ಅಂಡ್ ಡೈಮಂಡ್ಸ್ ತನ್ನ ದಾವಣಗೆರೆ ಶೋ ರೂಂ.ನಲ್ಲಿ ಇಂದಿನಿಂದ ಇದೇ ದಿನಾಂಕ 8 ರವರೆಗೆ 'ಆರ್ಟಿಸ್ಟ್ರಿ ಶೋ' ಆಯೋಜಿಸಿಲಾಗಿದೆ.

ಭೂಮಿಕಾ, ಅನುಷಾ, ಡಾ. ಅಧಿತಿ, ಡಾ. ರೇಣು ಅವರು ಕಾರ್ಯಕ್ರಮಕ್ಕೆ ಚಾಲನೆ ನೀಡಿದರು. ಈ ಸಂದರ್ಭದಲ್ಲಿ ಚಿನ್ನದ ಆಭರಣಗಳ ಮೇಕಿಂಗ್ ಚಾರ್ಜ್‌ನಲ್ಲಿ ಶೇ. 25 ರ ತನಕ ಹಾಗೂ ವಜ್ರದ ಮೇಲೆ ಶೇ. 25 ರ ತನಕ ರಿಯಾಯತಿ ನೀಡಲಾಯಿತು. ಜಮ್‌ಸ್ಟೋನ್ ಜ್ಯುವೆಲರಿಯ ಪ್ಲಾಟ್ ಮೇಕಿಂಗ್ ಚಾರ್ಜ್‌ನಲ್ಲಿ ಶೇ. 25 ರ ತನಕ ರಿಯಾಯತಿ ನೀಡಲಾಯಿತು. ಈ ವಿಶೇಷ ಪ್ರದರ್ಶನದಲ್ಲಿ ಸಾಂಪ್ರದಾಯಿಕ ಮತ್ತು ಸಮಕಾಲೀನ ವಿನ್ಯಾಸಗಳ ವ್ಯಾಪಕ ಶ್ರೇಣಿಯೊಂದಿಗೆ ಕರಕುಶಲ ಆಭರಣಗಳ ಕಲಾತ್ಮಕ ಕೌಶಲ್ಯವನ್ನು ಪ್ರದರ್ಶಿಸಲಾಗುತ್ತದೆ.

ಈ ಸಂದರ್ಭದಲ್ಲಿ ಮಲಬಾರ್ ಗೋಲ್ಡ್ ಅಂಡ್ ಡೈಮಂಡ್ಸ್ ನಿರ್ದೇಶಕ ಬಾಸಿಲ್ ರಾಜನ್, ಆಡಳಿತ ಮಂಡಳಿ ಹಾಗೂ ಸಿಬ್ಬಂದಿ ವರ್ಗದವರು ಉಪಸ್ಥಿತರಿದ್ದರು.

ಮಲಬಾರ್ ಗ್ರೂಪ್‌ನ ಅಧ್ಯಕ್ಷ ಎಂ.ಪಿ. ಅಹ್ಮದ್ ಮಾತನಾಡಿ, ದಾವಣಗೆರೆ ಶೋರೂಂನಲ್ಲಿ ಆರ್ಟಿಸ್ಟ್ರಿ ಶೋ ಅನ್ನು ಆರಂಭ ಮಾಡಲು ಮತ್ತು ನಮ್ಮ ಆಭರಣದ ಕರಕುಶಲತೆಯ ಶ್ರೇಷ್ಠತೆಯನ್ನು ಆಚರಿಸುವ ಸೊಗಸಾದ ವಿನ್ಯಾಸಗಳನ್ನು ಪರಿಚಯಿಸಲು ನಾವು ಸಂತೋಷಪಡುತ್ತೇವೆ ಎಂದರು.

# ಮತದಾರರೇ ನಮಗೆ ದೇವರು

(1ನೇ ಪುಟದಿಂದ) ಹಾಕಿದ್ದೇ ಹಾಕಿದ್ದು. ಆದರೆ, ಹಾಸನದಲ್ಲಿ ಮಹಿಳೆಯರು ಕಣ್ಣೀರು ಹಾಕುತ್ತಿದ್ದಾರೆ. ಇಲ್ಲಿಗೆ ಬಂದು ಕಣ್ಣೀರು ಹಾಕಿದ್ದಾರಾ? ಎಂದು ಪ್ರಶ್ನಿಸಿದರು.

ತೆರಿಗೆಯಲ್ಲಿ ಸರಿಯಾದ ಪಾಲು ಕೊಡುತ್ತಿಲ್ಲ. ಕೇಂದ್ರ ಪುರಸ್ಕೃತ ಯೋಜನೆಗಳ ಅನುದಾನದಲ್ಲಿ ಕಡಿತ ಮಾಡಿದ್ದಾರೆ. 4.5 ಲಕ್ಷ ಕೋಟಿ ರೂ. ತೆರಿಗೆಯನ್ನು ಕರ್ನಾಟಕದಿಂದ ಕೊಡಲಾಗುತ್ತಿದೆ. ನಮಗೆ ಬರುತ್ತಿರುವುದು ಕೇವಲ 13 ಪೈಸೆ. ರಾಜ್ಯಕ್ಕೆ ಇಷ್ಟೊಂದು ಅನ್ಯಾಯ ಆಗುತ್ತಿದೆ. ಈ ಬಗ್ಗೆ ಕೇಳಿದ್ದೀರಾ ದೇವೇಗೌಡರೇ? ಕೇಂದ್ರ ಸಚಿವ ಎಚ್.ಡಿ. ಕುಮಾರಸ್ವಾಮಿ ಕೇಳಿದ್ದಾರಾ ಎಂದು ಪ್ರಶ್ನಿಸಿದರು.

## ಅಣಬೇರು ಶ್ರೀಮತಿ ನೀಲಮ್ಮ ನಿಧನ



ಹರಿಹರ ತಾಲ್ಲೂಕು ಕೊಂಡಜ್ಜಿ ಗ್ರಾಮದ ವಾಸಿ ದಿ. ಅಣಬೇರು ಬಸವರಾಜಪ್ಪನವರ ಧರ್ಮಪತ್ನಿ ಅಣಬೇರು ಶ್ರೀಮತಿ ನೀಲಮ್ಮ (63) ರವರು ದಿನಾಂಕ 5.12.2024ರ ಗುರುವಾರ ಸಂಜೆ 4.20ಕ್ಕೆ ನಿಧನರಾದರು. ಓರ್ವ ಪುತ್ರ, ಇಬ್ಬರು ಪುತ್ರಿಯರು ಹಾಗೂ ಅಪಾರ ಬಂಧು-ಬಳಗವನ್ನು ಅಗಲಿರುವ ಮೃತರ ಅಂತ್ಯಕ್ರಿಯೆಯು ದಿನಾಂಕ 6.12.2024ರ ಶುಕ್ರವಾರ ಮಧ್ಯಾಹ್ನ 12 ಗಂಟೆಗೆ ಮೃತರ ಸ್ವಗ್ರಾಮ ಕೊಂಡಜ್ಜಿ ಗ್ರಾಮದ ಮೃತರ ಜಮೀನಿನಲ್ಲಿ ನೆರವೇರಲಿದೆ.

# ಹೆಜ್ಜೇನು ದಾಳಿಗೆ ತುತ್ತಾಗಿ ವ್ಯಕ್ತಿ ಸಾವು

ತ್ಯಾವಣಿಗೆ, ಡಿ.5- ಹೆಜ್ಜೇನು ದಾಳಿಯಿಂದ ವ್ಯಕ್ತಿಯೊಬ್ಬರು ಮೃತಪಟ್ಟಿರುವ ಘಟನೆ ಸಮೀಪದ ನವಿಲೇಹಾಳ್ ಗ್ರಾಮದಲ್ಲಿ ನಡೆದಿದೆ. ಕೆ.ನಾಗೇಂದ್ರಪ್ಪ (66) ಮೃತರು. ದೊಡ್ಡಘಟ್ಟ ಗ್ರಾಮದ ಸಮೀಪ ಇರುವ ತೋಟಕ್ಕೆ ತೆರಳಿದ್ದಾಗ ಜೇನು ನೊಣಗಳು ಕಡಿದಿವೆ.

ಪ್ರಜ್ಞೆ ಕಳೆದುಕೊಂಡಿದ್ದ ಅವರನ್ನು ಚಿಕಿತ್ಸೆಗಾಗಿ ದಾವಣಗೆರೆಯ ಖಾಸಗಿ ಆಸ್ಪತ್ರೆಗೆ ದಾಖಲಿಸಲಾಗಿತ್ತು. ಅಲ್ಲಿ ಮೃತಪಟ್ಟಿದ್ದಾರೆ. ಬಸವಾಪಟ್ಟಣ ಠಾಣೆಯಲ್ಲಿ ಪ್ರಕರಣ ದಾಖಲಾಗಿದೆ.

## ಪಿ.ಎಂ. ಗಿರಿಜಮ್ಮ ನಿಧನ




ವಿಜಯನಗರ ಜಿಲ್ಲೆ, ಹರಪನಹಳ್ಳಿ ತಾಲ್ಲೂಕು, ಪುಣಬಘಟ್ಟ ಗ್ರಾಮದ ವಾಸಿ
ದಿ. ಪಿ.ಎಂ. ಸಿದ್ದಯ್ಯರವರ ಧರ್ಮಪತ್ನಿ

**ಪಿ.ಎಂ. ಗಿರಿಜಮ್ಮ (72)**

ಇವರು, ದಿನಾಂಕ 5.12.2024ರ ಗುರುವಾರ ಮಧ್ಯಾಹ್ನ 3 ಗಂಟೆಗೆ ಶಿವಾಧೀನರಾದರು. ಇಬ್ಬರು ಪುತ್ರರು, ಓರ್ವ ಪುತ್ರಿ ಹಾಗೂ ಅಪಾರ ಬಂಧು-ಬಳಗವನ್ನು ಅಗಲಿರುವ ಮೃತರ ಅಂತ್ಯಕ್ರಿಯೆಯನ್ನು ದಿನಾಂಕ 6.12.2024ರ ಶುಕ್ರವಾರ ಮಧ್ಯಾಹ್ನ 12ಕ್ಕೆ ಪುಣಬಘಟ್ಟ ಗ್ರಾಮದ ಮೃತರ ಜಮೀನಿನಲ್ಲಿ ನೆರವೇರಿಸಲಾಗುವುದು.

**ದುಃಖತಪ್ತರು : ಮಕ್ಕಳು ಶ್ರೀಮತಿ ರೇಖಾ, ಪಿ.ಎಂ. ಮಂಜುನಾಥಯ್ಯ ಶ್ರೀಮತಿ ರೂಪಾ ಪಿ.ಎಂ. ಶಿವಮೂರ್ತಿ, ಶ್ರೀಮತಿ ಪರಿಮಳ ಶಿವಲಿಂಗಪ್ಪ ನಾಗರಕಟ್ಟೆ ಮತ್ತು ಮೊಮ್ಮಕ್ಕಳು, ಪುಣಬಘಟ್ಟ, ಮೊ : 91139 25877, 98868 26725**

## ಸೇಪುರ್ ತಿಮ್ಮಣ್ಣ ನಿಧನ




ದಾವಣಗೆರೆ ಚಿತ್ರಗಾರಗಲ್ಲಿ ದುಗ್ಗಮ್ಮನಪೇಟೆ ವಾಸಿ
ಮಾರ್ಕಂಡೇಶ್ವರ ಪದ್ಮಶಾಲಿ ಸಮಾಜ
ಸೇವಾ ಸಂಘದ ಗೌರವಾಧ್ಯಕ್ಷರಾಗಿದ್ದ

**ಶ್ರೀ ಸೇಪುರ್ ತಿಮ್ಮಣ್ಣ**

ಇವರು ದಿನಾಂಕ 5.12.2024ರ ಗುರುವಾರ ಬೆಳಿಗ್ಗೆ 6.30ಕ್ಕೆ ನಿಧನರಾದರು. ಪತ್ನಿ, ಇಬ್ಬರು ಪುತ್ರರು ಹಾಗೂ ಅಪಾರ ಬಂಧು-ಬಳಗವನ್ನು ಅಗಲಿರುವ ಮೃತರ ಅಂತ್ಯಕ್ರಿಯೆಯು ದಿನಾಂಕ 5.12.2024ರ ಗುರುವಾರ ಮಧ್ಯಾಹ್ನ 8.30ಕ್ಕೆ ಗಾಂಧಿನಗರದ ಹಿಂದೂ ರುದ್ರಭೂಮಿಯಲ್ಲಿ ನೆರವೇರಿತು.

**ದುಃಖತಪ್ತರು : ಜಕ್ಕಾ ತುಕಪ್ಪನವರ ಕುಟುಂಬಸ್ಥರು ಮಕ್ಕಳು ಮತ್ತು ಸಹೋದರರು ಬೊಮ್ಮ ತಿಪ್ಪೇಸ್ವಾಮಿ (STP) ಕುಟುಂಬಸ್ಥರು ಮತ್ತು ಮಕ್ಕಳು ವದ್ದಿ ನರಸಿಂಹಮೂರ್ತಿ ಕುಟುಂಬಸ್ಥರು ಮತ್ತು ಮಕ್ಕಳು.**

## ಮ್ಯಾಡಂ ಚೆನ್ನವೀರಪ್ಪ ನಿಧನ



ದಾವಣಗೆರೆ ಸಿಟಿ ಹುಬ್ಬಳ್ಳಿ ಚೌಡಪ್ಪನಗಲ್ಲಿ
ಬಸವರಾಜ ಪೇಟೆ ವಾಸಿ

**ಮ್ಯಾಡಂ ಚನ್ನವೀರಪ್ಪ** ಇವರು ದಿನಾಂಕ 5.12.2024ರ ಗುರುವಾರ ಬೆಳಿಗ್ಗೆ 5.30ಕ್ಕೆ ನಿಧನರಾದರೆಂದು ತಿಳಿಸಲು ವಿಷಾದಿಸುತ್ತೇವೆ. ಮೃತರಿಗೆ 77 ವರ್ಷ ವಯಸ್ಸಾಗಿತ್ತು. ಪತ್ನಿ, ಇಬ್ಬರು ಪುತ್ರರು, ಓರ್ವ ಪುತ್ರಿ ಹಾಗೂ ಅಪಾರ ಬಂಧು-ಬಳಗವನ್ನು ಅಗಲಿರುವ ಮೃತರ ಅಂತ್ಯಕ್ರಿಯೆಯನ್ನು ದಿನಾಂಕ 6.12.2024ರ ಶುಕ್ರವಾರ ಬೆಳಿಗ್ಗೆ 11.30ಕ್ಕೆ ಹಿಂದೂ ರುದ್ರಭೂಮಿಯಲ್ಲಿ ನೆರವೇರಿಸಲಾಗುವುದು.

**ದುಃಖತಪ್ತ ಕುಟುಂಬವರ್ಗ : ಮ್ಯಾಡಂ ವಂಶಸ್ಥರು ಹಾಗೂ ಬಂಧು ಮಿತ್ರರು, ದಾವಣಗೆರೆ. ಮೊ. : 97411 81911, 97408 03444**

# ಕನ್ನಡ ಕೇವಲ ಭಾಷೆಯಲ್ಲ, ಅದು ಸಂಸ್ಕೃತಿ ಪ್ರತೀಕ

## ರಾಜ್ಯೋತ್ಸವ ಮತ್ತು ಕಾನೂನು ಅರಿವು ಕಾರ್ಯಕ್ರಮದಲ್ಲಿ ಪ್ರೊ. ವಿದ್ಯಾಧರ ವೇದವರ್ಮ



ದಾವಣಗೆರೆ, ಡಿ.5- ಕನ್ನಡ ಭಾಷೆಗೆ 2 ಸಾವಿರ ವರ್ಷಗಳ ಇತಿಹಾಸವಿದೆ. ಅದು ಕೇವಲ ಭಾಷೆಯಲ್ಲ, ಶ್ರೇಷ್ಠ ಸಂಸ್ಕೃತಿಯ ಪ್ರತೀಕ ಎಂದು ಆರ್.ಎಲ್.ಲಾ ಕಾಲೇಜಿನ ಸಹಾಯಕ ಪ್ರಾಧ್ಯಾಪಕ ಟಿ. ವಿದ್ಯಾಧರ ವೇದವರ್ಮ ಹೇಳಿದರು.

ಕರ್ನಾಟಕ ಜನಶಕ್ತಿ ಮತ್ತು ಕಾಯಕ ಜೀವಿ ಕಟ್ಟಡ ಕಾರ್ಮಿಕರ ಸಂಘದ ಸಂಯುಕ್ತಾಶ್ರಯದಲ್ಲಿ ನಗರದ ಕುಂದುವಾಡ ರಸ್ತೆಯ ಕಾಡಪ್ಪರ ಬಾವಿ ಹತ್ತಿರ ಕಳೆದ ವಾರ ಏರ್ಪಡಿಸಿದ್ದ ಕರ್ನಾಟಕ ರಾಜ್ಯೋತ್ಸವ ಮತ್ತು ಕಾನೂನು ಅರಿವು ಕಾರ್ಯಕ್ರಮವನ್ನು ಉದ್ಘಾಟಿಸಿ ಅವರು ಮಾತನಾಡಿದರು.

ಒಂದು ಭಾಷೆಯ ಉಳಿವು ಆ ಭಾಷೆ ಮಾತನಾಡುವವರನ್ನು ಅವಲಂಬಿಸಿರುತ್ತದೆ. ಕನ್ನಡ ಭಾಷೆಯನ್ನು ಹೆಚ್ಚಾಗಿ ಬಳಸುವುದರಿಂದ ನಮ್ಮ ಸಂಸ್ಕೃತಿಯನ್ನು ಮುಂದಿನ ಪೀಳಿಗೆಗೆ ಪರಿಚಯಿಸಿ ದಂತಾಗುತ್ತದೆ. ಇಂತಹ ಜಾಗತಿಕ ಪ್ರಪಂಚದಲ್ಲೂ ನಮ್ಮ ಕನ್ನಡ ಭಾಷೆ ಮತ್ತು ಕನ್ನಡ ಸಾಹಿತ್ಯವನ್ನು ಉಳಿಸಿ ಬೆಳೆಸಿಕೊಂಡು ಹೋಗುತ್ತಿರುವ ಕನ್ನಡ ಪರ ಹೋರಾಟ ಸಂಘಗಳು, ಕವಿಗಳು ಮತ್ತು ಚಿಂತಕರ ಪಾತ್ರ ದೊಡ್ಡದು ಎಂದರು.

ಕಾನೂನು ಅರಿವು ಕುರಿತು ಮಾತನಾಡಿದ ಜಿಲ್ಲಾ ಕಾರ್ಮಿಕ ಅಧಿಕಾರಿ ಇಬ್ರಾಹಿಂಸಾಬ್ ಅವರು, ಸಂವಿಧಾನ ಮಹಾನ್ ಗ್ರಂಥವಾಗಿದ್ದು, ಬೇರೆ ದೇಶಗಳ ಸಂವಿಧಾನದ ಆಶಯಗಳನ್ನು ಎರವಲು ಪಡೆದು ಮತ್ತು ನಮ್ಮ ದೇಶದ ಎಲ್ಲಾ ಕ್ಷೇತ್ರಗಳಲ್ಲೂ ಅನುಭವ ಇರುವ ಸಂಪನ್ಮೂಲ ವ್ಯಕ್ತಿಗಳನ್ನು ಕ್ರೋಢೀಕರಿಸಿ ಅಂದು ರಚಿಸಿದ ಸಂವಿಧಾನ ಕೆಲವೇ ತಿದ್ದುಪಡಿಯೊಂದಿಗೆ ಇಂದಿಗೂ ಪ್ರಸ್ತುತವೆನಿಸುವಂತೆ, ಎಲ್ಲಾ ವರ್ಗದ ಜನರ ಅಭಿವೃದ್ಧಿಯನ್ನು ಹೊಂದಿರುವ ಒಂದು ಯಶಸ್ವೀ ಸಂವಿಧಾನವನ್ನು ನಮ್ಮ ಹಿರಿಯರು ನಮಗೆ ಕೊಟ್ಟಿದ್ದಾರೆ. ಅಂತಹ ಸಂವಿಧಾನವನ್ನು ರಕ್ಷಿಸುವುದು ನಮ್ಮೆಲ್ಲರ ಹೊಣೆಯಾಗಿದೆ ಎಂದರು.

ಕರ್ನಾಟಕ ಜನಶಕ್ತಿ ಜಿಲ್ಲಾ ಪ್ರಧಾನ ಕಾರ್ಯದರ್ಶಿ ಪವಿತ್ರ ಅಧ್ಯಕ್ಷತೆ ವಹಿಸಿದ್ದರು. ಮುಖ್ಯ ಅತಿಥಿಗಳಾಗಿ ಪೀಪಲ್ಸ್ ಲಾಯರ್ ಗಿಲ್ಡ್ ಸಂಚಾಲಕ ಅನಿಸ್ ಪಾಷ, ಪಾಲಿಕೆ ಸದಸ್ಯೆ ಆಶಾ ಉಮೇಶ್, ವಕೀಲ ಸತೀಶ್ ಅರವಿಂದ್ ಉಪಸ್ಥಿತರಿದ್ದರು. ಆದಿಲ್ ಖಾನ್ ಪ್ರಾಸ್ತಾವಿಕ ನುಡಿಗಳನ್ನಾಡಿದರು. ಹನುಮಂತಪ್ಪ ಕರೂರು ಸ್ವಾಗತಿಸಿದರೆ, ಸೈಯದ್ ಅಶ್ಫಾಕ್ ನಿರೂಪಿಸಿದರು.

# ವಿಕಲಚೇತನರು ಸಮಾಜಕ್ಕೆ ಹೊರೆಯಲ್ಲ

## ಡಿಸಿ ಕಛೇರಿಯಲ್ಲಿ ವಿಶ್ವ ವಿಕಲಚೇತನರ ದಿನಾಚರಣೆ ಕಾರ್ಯಕ್ರಮದಲ್ಲಿ ಶಾಸಕ ಬಸವಂತಪ್ಪ

ದಾವಣಗೆರೆ, ಡಿ.5- ವಿಕಲಚೇತನರು ಮತ್ತು ಅವರ ಅವಲಂಭಿಸಿದ ಕುಟುಂಬ ನೆಮ್ಮದಿಯಿಂದ ಜೀವನ ನಡೆಸುವುದೇ ಕಷ್ಟ. ಅಂತಹದರಲ್ಲಿ ಅವರಿಗೆ ಸರ್ಕಾರಿ ಸೌಲಭ್ಯ ಕಲ್ಪಿಸಲು ಹಣ ವಸೂಲಿ ಮಾಡುವುದು ದೊಡ್ಡ ಪಾಪ ಅಲ್ಲವೇ ಎಂದು ಮಾಯಕೊಂಡ ಶಾಸಕ ಕೆ.ಎಸ್.ಬಸವಂತಪ್ಪ ಅಧಿಕಾರಿಗಳನ್ನು ಪ್ರಶ್ನೆ ಮಾಡಿದರು.

ಜಿಲ್ಲಾಧಿಕಾರಿಗಳ ಕಚೇರಿಯ ತುಂಗಭದ್ರಾ ಸಭಾಂಗಣದಲ್ಲಿ ಮಂಗಳವಾರ ಜಿ.ಪಂ., ಜಿಲ್ಲಾಡಳಿತ, ಜಿಲ್ಲಾ ಕಾನೂನು ಸೇವಾ ಪ್ರಾಧಿಕಾರ, ಮಹಿಳಾ ಮತ್ತು ಮಕ್ಕಳ ಅಭಿವೃದ್ಧಿ ಇಲಾಖೆ, ಜಿಲ್ಲಾ ಯುವ ಸಬಲೀಕರಣ ಮತ್ತು ಕ್ರೀಡಾ ಇಲಾಖೆ, ಜಿಲ್ಲಾ ವಿಕಲಚೇತನ ಹಾಗೂ ಹಿರಿಯ ನಾಗರಿಕ ಸಬಲೀಕರಣ ಇಲಾಖೆ ಹಾಗೂ ಜಿಲ್ಲೆಯಲ್ಲಿ ವಿಕಲಚೇತನರ ಶ್ರೇಯೋಭಿವೃದ್ಧಿಗಾಗಿ ಶ್ರಮಿಸುತ್ತಿರುವ ಸ್ವಯಂ ಸೇವಾ ಸಂಘ-ಸಂಸ್ಥೆಗಳ ಆಶ್ರಯದಲ್ಲಿ ಆಯೋಜಿಸಿದ್ದ ವಿಶ್ವ ವಿಕಲಚೇತನರ ದಿನಾಚರಣೆ ಕಾರ್ಯಕ್ರಮವನ್ನು ಉದ್ಘಾಟಿಸಿ ಅವರು ಮಾತನಾಡಿದರು.

ಸರ್ಕಾರ ವಿಕಲಚೇತನರಿಗಾಗಿ ಮೋಟಾರು ಸೈಕಲ್, ಪಿಂಚಣಿ, ಬಸ್ ಪಾಸ್, ಸಾಲಸೌಲಭ್ಯ ಸೇರಿದಂತೆ ಹಲವಾರು ಸೌಲಭ್ಯ ಕಲ್ಪಿಸಿದೆ. ಆದರೆ ಅವರಿಗೆ ಆ ಸೌಲಭ್ಯಗಳನ್ನು ತಲುಪಿಸಲು ಅಧಿಕಾರಿಗಳು ಆಯಾ ಸೌಲಭ್ಯಗಳ ಅನುಗುಣವಾಗಿ 2 ರಿಂದ 8 ಸಾವಿರ ರೂ. ಹಣ ವಸೂಲಿ ಮಾಡಲಾಗುತ್ತಿದೆ ಎಂದು ಫಲಾನುಭವಿಗಳಿಂದ ನಮಗೆ ದೂರುಗಳು ಬರುತ್ತವೆ. ವಿಕಲಚೇತನರ ಪೋಷಕರು ಮೊದಲೇ ಅವರ ಪೋಷಣೆ ಮತ್ತು ಕುಟುಂಬ ನಿರ್ವಹಣೆ ಕಷ್ಟವಾಗಿರುತ್ತದೆ. ಹೀಗಿರುವಾಗ ಅವರಿಂದ ಹಣ ವಸೂಲಿ ಮಾಡಬಹುದೇ ಎಂದು ಅಸಮಾಧಾನ ವ್ಯಕ್ತಪಡಿಸಿದರು.




ವಿಕಲಚೇತರಿಗೆ ಕೇವಲ 50 ಸಾವಿರದಿಂದ 1 ಲಕ್ಷದವರೆಗೆ ಸಾಲಸೌಲಭ್ಯ ಕಲ್ಪಿಸಿದರೆ ಸಾಲದು, ಅವರಿಗೆ 10 ರಿಂದ 15 ಲಕ್ಷದವರೆಗೆ ಕೇಂದ್ರ ಮತ್ತು ರಾಜ್ಯ ಸರ್ಕಾರಗಳು ಬಡ್ಡಿರಹಿತ ಸಾಲಸೌಲಭ್ಯ ನೀಡಿದರೆ ಅವರು ಗುಡಿ ಕೈಗಾರಿಕೆಗಳನ್ನು ಸ್ಥಾಪಿಸುವ ಮೂಲಕ ಆರ್ಥಿಕವಾಗಿ ಸಬಲರಾಗಿ ಸಮಾಜದ ಮುಖ್ಯವಾಹಿನಿಗೆ ಬರಲು ಸಹಕಾರಿಯಾಗುತ್ತದೆ ಎಂದರು.

ವಿಕಲಚೇತನರು ಸಮಾಜಕ್ಕೆ ಹೊರೆಯಲ್ಲ, ಸ್ವಾವಲಂಬಿ ಜೀವನ ನಡೆಸಲು ಪೂರಕವಾದ ವಾತಾವರಣ ಕಲ್ಪಿಸುವ ಮೂಲಕ ಅವರನ್ನು ಮುಖ್ಯವಾಹಿನಿಗೆ ತರಬೇಕೆಂದು ಅಧಿಕಾರಿಗಳಿಗೆ ಕಿವಿಮಾತು ಹೇಳಿದರು.

ಜಿಲ್ಲಾಧಿಕಾರಿ ಡಾ. ಜಿ.ಎಂ. ಗಂಗಾಧರಸ್ವಾಮಿ ಅವರು ಮಾತನಾಡಿ, ಛಲ, ಶ್ರದ್ಧೆ ಇದ್ದರೆ ಯಾವ ಕ್ಷೇತ್ರದಲ್ಲಾದರೂ ಮುಂದೆ ಬರಬಹುದು. ವಿಕಲಚೇತನರು ಸಾಲ ಸೌಲಭ್ಯ ಪಡೆದುಕೊಂಡು ಸ್ವಾವಲಂಬಿ ಜೀವನ ನಡೆಸಿಕೊಳ್ಳ ಬೇಕು. ಸರ್ಕಾರಿ ಸೌಲಭ್ಯ ಕಲ್ಪಿಸಲು ಅಧಿಕಾರಿಗಳು ವಿಕಲಚೇತನರಿಂದ ಹಣ ವಸೂಲಿ ಮಾಡುವ ಬಗ್ಗೆ ಫಲಾನುಭವಿಗಳ ದೂರುಗಳು ಬರುತ್ತಿವೆ. ಈ ಬಗ್ಗೆ ಪರಿಶೀಲನೆ ಮಾಡಿ ತಪ್ಪಿತಸ್ಥರ ವಿರುದ್ಧ ಕ್ರಮ ತೆಗೆದುಕೊಳ್ಳುವುದಾಗಿ ಭರವಸೆ ನೀಡಿದರು.

ಈ ಸಂದರ್ಭದಲ್ಲಿ ದುಡಾ ಅಧ್ಯಕ್ಷ ದಿನೇಶ್ ಕೆ.ಶೆಟ್ಟಿ, ಮಹಾನಗರಪಾಲಿಕೆ ಮೇಯರ್ ಚಮನ್ ಸಾಬ್, ಎಎಸ್ಪಿ ಮಂಜುನಾಥ್, ಮಹಿಳಾ ಮತ್ತು ಮಕ್ಕಳ ಕಲ್ಯಾಣ ಇಲಾಖೆ ಉಪನಿರ್ದೇಶಕ ರಾಜನಾಯ್ಕ್, ಉಪ ನಿರ್ದೇಶಕ ಡಾ. ಪ್ರಕಾಶ್ ಸೇರಿದಂತೆ ಜಿಲ್ಲಾ ಮಟ್ಟದ ಅಧಿಕಾರಿಗಳು ಭಾಗವಹಿಸಿದ್ದರು.

# ಸೊಕ್ಕೆ ಗ್ರಾಮ ಪಂಚಾಯ್ತಿ ಅಧ್ಯಕ್ಷರಾಗಿ ಸರೋಜಮ್ಮ ಮಲ್ಲೇಶಪ್ಪ



ಜಗಳೂರು, ಡಿ. 5- ತಾಲ್ಲೂಕಿನ ಸೊಕ್ಕೆ ಗ್ರಾಮ ಪಂಚಾಯಿತಿ ಅಧ್ಯಕ್ಷರಾಗಿ ಸರೋಜಮ್ಮ ಮಲ್ಲೇಶಪ್ಪ ಅವಿರೋಧವಾಗಿ ಆಯ್ಕೆಯಾಗಿದ್ದಾರೆ. ಸಾಮಾನ್ಯ ಮೀಸಲು ಕ್ಷೇತ್ರದ ಅಧ್ಯಕ್ಷ ಸ್ಥಾನಕ್ಕೆ ಒಬ್ಬರೇ ನಾಮಪತ್ರ ಸಲ್ಲಿಸಿದ್ದರಿಂದ ಅವಿರೋಧವಾಗಿ ಆಯ್ಕೆಯಾಗಿದ್ದಾರೆ ಎಂದು ಚುನಾವಣಾ ಅಧಿಕಾರಿಯಾಗಿ ಕಾರ್ಯನಿರ್ವಹಿಸಿದ ತೋಟಗಾರಿಕೆ ಇಲಾಖೆ ಸಹಾಯಕ ನಿರ್ದೇಶಕ ಪ್ರಭುಶಂಕರ್ ಘೋಷಿಸಿದರು. ಈ ಸಂದರ್ಭದಲ್ಲಿ ಜಿ.ಪಂ.ಮಾಜಿ ಸದಸ್ಯ ಸೊಕ್ಕೆ ನಾಗರಾಜ್, ಗ್ರಾ.ಪಂ. ಉಪಾಧ್ಯಕ್ಷೆ ಚೌಡಮ್ಮ, ಸದಸ್ಯರಾದ ಸ್ವಾತಿ ತಿಪ್ಪೇಸ್ವಾಮಿ, ರಾಜಪ್ಪ, ತಿರುಮಲ, ತಿಂದಪ್ಪ, ಕಾಳಮ್ಮ, ಭಾಗ್ಯಮ್ಮ, ಪಾಪಣ್ಣ, ರೇಣುಕಮ್ಮ, ಗೋವಿಂದಪ್ಪ, ನಿರ್ಮಲ, ಹನುಮಂತಪ್ಪ, ಶೈಲಾಕ್ಷಿ, ಮಂಜಪ್ಪ, ಆಶಾ, ಮುರಿಗೆಪ್ಪ ಸೇರಿದಂತೆ ಮತ್ತಿತರರು ಉಪಸ್ಥಿತರಿದ್ದರು.

# ನಗರದಲ್ಲಿ ನಾಳೆ ನೇರ ಸಂದರ್ಶನ

ದಾವಣಗೆರೆ, ಡಿ.5- ಜಿಲ್ಲಾ ಉದ್ಯೋಗ ವಿನಿಮಯ ಕೇಂದ್ರ, ಮಾದರಿ ವೃತ್ತಿ ಕೇಂದ್ರದ ವತಿಯಿಂದ ನಾಡಿದ್ದು ದಿನಾಂಕ 7 ರ ಶನಿವಾರ ಬೆಳಗ್ಗೆ 10 ಗಂಟೆಗೆ ವಾಕ್‌ಇನ್ ಇಂಟರ್‌ವ್ಯೂ ಅನ್ನು ಜಿಲ್ಲಾಡಳಿತ ಭವನದಲ್ಲಿರುವ ಜಿಲ್ಲಾ ಉದ್ಯೋಗ ವಿನಿಮಯ ಕೇಂದ್ರದಲ್ಲಿ ಏರ್ಪಡಿಸಲಾಗಿದೆ.

ಹೆಚ್ಚಿನ ಮಾಹಿತಿಗಾಗಿ 74838 08321 08192-259446 ಸಂಪರ್ಕಿಸಲು ಉದ್ಯೋಗಾಧಿಕಾರಿ ಡಿ. ರವೀಂದ್ರ ಅವರು ಪತ್ರಿಕಾ ಹೇಳಿಕೆಯಲ್ಲಿ ತಿಳಿಸಿದ್ದಾರೆ.

# ಹರಪನಹಳ್ಳಿಯಲ್ಲಿ ಇಂದು ಅಂತರ್ ಕಾಲೇಜು ಕುಸ್ತಿ ಪಂದ್ಯಾವಳಿ

ಸರ್ಕಾರಿ ಪ್ರಥಮ ದರ್ಜೆ ಕಾಲೇಜಿನಲ್ಲಿ ವಿಶ್ವವಿದ್ಯಾಲಯ ಮಟ್ಟದ ಪುರುಷ ಹಾಗೂ ಮಹಿಳೆಯರ ಅಂತರ್ ಕಾಲೇಜು ಕುಸ್ತಿ ಪಂದ್ಯಾವಳಿಯು ಇಂದು ಮತ್ತು ನಾಳೆ ಜರುಗಲಿವೆ ಎಂದು ಸರ್ಕಾರಿ ಪ್ರಥಮ ದರ್ಜೆ ಕಾಲೇಜು ಪ್ರಾಂಶುಪಾಲ ಡಾ. ಸತೀಶ ಹಾಗೂ ದೈಹಿಕ ಶಿಕ್ಷಣ ನಿರ್ದೇಶಕ ಹೆಚ್. ಕೊಟ್ರೇಶ ತಿಳಿಸಿದ್ದಾರೆ.

ಶಾಸಕರಾದ ಎಂ.ಪಿ. ಲತಾ ಮಲ್ಲಿಕಾರ್ಜುನ್ ಅವರು ಇಂದು ಬೆಳಿಗ್ಗೆ 11ಕ್ಕೆ ಕಾರ್ಯಕ್ರಮ ಉದ್ಘಾಟಿಸುವರು. ಸರ್ಕಾರಿ ಪ್ರಥಮ ದರ್ಜೆ ಕಾಲೇಜು ಪ್ರಾಂಶುಪಾಲ ಡಾ. ಕೆ. ಸತೀಶ್ ಕಾರ್ಯಕ್ರಮದ ಅಧ್ಯಕ್ಷತೆ ವಹಿಸುವರು.

ಮುಖ್ಯ ಅತಿಥಿಗಳಾಗಿ ಬಳ್ಳಾರಿ ವಿ.ವಿ. ಆಡಳಿತ ವಿಭಾಗದ ಕುಲಸಚಿವ ಎಸ್. ಎನ್. ರುದ್ರೇಶ್, ಕಲಬುರ್ಗಿ ಕೇಂದ್ರಿಯ ವಿವಿ ಸಂದರ್ಶಕ ಪ್ರಾಧ್ಯಾಪಕ ಡಾ. ಎಂ.ಎಸ್ ಪಾಸವಾಡಿ, ವಿ.ಎಸ್. ಕೆಯುಬಿಯ ಇಂಗ್ಲಿಷ್ ವಿಭಾಗದ ಮುಖ್ಯಸ್ಥ ಡಾ.ಶಾಂತನಾಯ್ಕ, ಕೊಪ್ಪಳದ ನಿವೃತ್ತ ದೈಹಿಕ ಶಿಕ್ಷಣ ನಿರ್ದೇಶಕ ಎಂ.ಆರ್ ಹವಳದ್, ಕೂಡ್ಲಿಗಿ ಪ್ರಥಮ ದರ್ಜೆ ಕಾಲೇಜು ಪ್ರಾಂಶುಪಾಲ ಡಾ. ಷಣ್ಮುಖನಗೌಡ ಎಸ್., ಹೂವಿನ ಹಡಗಲಿ ಪ್ರಥಮ ದರ್ಜೆ ಕಾಲೇಜಿನ ಪ್ರಾಂಶುಪಾಲ ಡಾ. ವಿಜಯಕುಮಾರ, ಕೊಟ್ಟೂರಿನ ಕೊಟ್ಟೂರೇಶ್ವರ ಮಹಾವಿದ್ಯಾಲಯದ ಡಾ.ರವಿಕುಮಾರ, ನ್ಯಾಯವಾದಿ ಕೆ.ಎಂ. ಚಂದ್ರಮೌಳಿ, ಕಸಾಪ ತಾಲ್ಲೂಕು ಅಧ್ಯಕ್ಷ ಕೆ.ಉಚ್ಚಂಗೆಪ್ಪ, ನ್ಯಾಯವಾದಿ ಡಾ.ಎಂ.ಸುರೇಶ ಭಾಗವಹಿಸುವರು.

# ನಗರದಲ್ಲಿ ಇಂದು ವಿದ್ಯಾರ್ಥಿಗಳಿಗೆ ಥೀಮ್ ಪಾರ್ಕ್ ಉಚಿತ ವೀಕ್ಷಣೆ

ದಾವಣಗೆರೆ ವಿಶ್ವವಿದ್ಯಾನಿಲಯ ದೃಶ್ಯಕಲಾ ಮಹಾವಿದ್ಯಾಲಯದ ಆವರಣದಲ್ಲಿರುವ ಥೀಮ್ ಪಾರ್ಕ್ ಮತ್ತು ಬಯಲು ರಂಗ ಮಂದಿರ ವೀಕ್ಷಣೆಗಾಗಿ ಶಾಲಾ ವಿದ್ಯಾರ್ಥಿಗಳಿಗೆ ಇಂದು ಉಚಿತ ಪ್ರವೇಶ ಅವಕಾಶ ನೀಡಲಾಗಿದೆ.

ಥೀಮ್ ಪಾರ್ಕ್ ಉದ್ಘಾಟನೆ ಮತ್ತು ಡಾ.ಬಿ.ಆರ್.ಅಂಬೇಡ್ಕರ್ ಪರಿನಿಬ್ಬಾಣ ದಿನದ ಪ್ರಯುಕ್ತ ಒಂದು ದಿನ ಮಾತ್ರ ಶಾಲಾ ಮಕ್ಕಳು ಥೀಮ್ ಪಾರ್ಕ್ ಅನ್ನು ಉಚಿತವಾಗಿ ವೀಕ್ಷಿಸಲು ಅವಕಾಶ ನೀಡಲಾಗಿದೆ ಎಂದು ಕುಲಪತಿ ಪ್ರೊ.ಬಿ.ಡಿ.ಕುಂಬಾರ ತಿಳಿಸಿದ್ದಾರೆ.

ಕಲೆಯಲ್ಲಿ ಅರಳಿರುವ ಗ್ರಾಮೀಣ ಸೊಗಡಿನ ಜೀವನ ಶೈಲಿ, ಕ್ರೀಡೆ, ಜಾತ್ರೆ, ಹಬ್ಬ, ಮಾರುಕಟ್ಟೆ, ಉತ್ಸವ, ಎತ್ತುಗಳ ಮಾರಾಟ ಹಾಗೂ ಇನ್ನಿತರೆ ಅಪೂರ್ಣ ಕಲಾಕೃತಿಗಳನ್ನು ವೀಕ್ಷಿಸಬಹುದಾಗಿದೆ. ಅಲ್ಲದೆ ಗ್ರೀಕ್ ವಿನ್ಯಾಸ ಶೈಲಿಯ ಬಯಲು ರಂಗ ಮಂದಿರವೂ ವಿಶೇಷ ಆಕರ್ಷಣೆಯಾಗಿದೆ. ಇವುಗಳನ್ನು ವಿದ್ಯಾರ್ಥಿಗಳು ವೀಕ್ಷಿಸಿ, ಆನಂದಿಸಬಹುದಾಗಿದೆ. ಉಳಿದ ದಿನಗಳಲ್ಲಿ ಸಾರ್ವಜನಿಕ ಪ್ರವೇಶಕ್ಕೆ ರೂ. 20 ಹಾಗೂ ಶಾಲಾ ವಿದ್ಯಾರ್ಥಿಗಳಿಗೆ ರೂ.10 ನಿಗದಿಪಡಿಸಲಾಗಿದೆ ಎಂದು ಅವರು ಹೇಳಿದ್ದಾರೆ.

# ರಂಗ ಮಂದಿರ ನಿರ್ಮಾಣವಾದ ಬಳಿಕ ಕಲಾವಿದರಿಗೆ ತರಬೇತಿ : ಕಡಕೋಳ



## ನಾಟಕ ಕಂಪನಿಗಳ ಮಾಲೀಕರ ಸಭೆ

ದಾವಣಗೆರೆ, ಡಿ.5- ವೃತ್ತಿ ರಂಗಭೂಮಿ ರಂಗಾಯಣವನ್ನು ಹೇಗೆ ರೂಪಿಸಬೇಕು ಎಂಬುದಕ್ಕೆ ಸಂಬಂಧಿಸಿದಂತೆ ವಿವರವಾದ ಚರ್ಚೆ ನಡೆಯುತ್ತಿದೆ. ರಂಗಮಂದಿರ ನಿರ್ಮಾಣದ ಬಳಿಕ ಕಲಾವಿದರಿಗೆ ತರಬೇತಿ ನೀಡಿ ನಾಟಕ ಕಂಪನಿಗಳಿಗೆ ಕಳುಹಿಸಿಕೊಡಲಾಗುವುದು ಎಂದು ರಂಗಾಯಣ ನಿರ್ದೇಶಕ ಮಲ್ಲಿಕಾರ್ಜುನ ಕಡಕೋಳ ತಿಳಿಸಿದರು.

ಇಲ್ಲಿನ ಜಿಲ್ಲಾಡಳಿತ ಭವನದಲ್ಲಿ ಗುರುವಾರ ನಡೆದ ನಾಟಕ ಕಂಪನಿಗಳ ಮಾಲೀಕರ ಸಭೆಯ ಅಧ್ಯಕ್ಷತೆ ವಹಿಸಿ ಅವರು ಮಾತನಾಡಿದರು.

ಇದಕ್ಕೂ ಮುನ್ನ, ಅಳಿವಿನ ಅಂಚಿಗೆ ಸಾಗಿರುವ ವೃತ್ತಿ ರಂಗಭೂಮಿಯನ್ನು ಉಳಿಸಲು ರಂಗಾಯಣದ ವತಿಯಿಂದ ಕಲಾವಿದರಿಗೆ ತರಬೇತಿ ನೀಡಿ ನಾಟಕ ಕಂಪನಿಗಳಿಗೆ ಕಳುಹಿಸಿಕೊಡುವ ವ್ಯವಸ್ಥೆಯೊಂದು ರೂಪುಗೊಳ್ಳಬೇಕು ಎಂದು ನಾಟಕ ಕಂಪನಿಗಳ ಮಾಲೀಕರು ಕೋರಿಕೊಂಡರು.

ವೃತ್ತಿ ರಂಗಭೂಮಿ ಕಲಾವಿದರ ಕೊರತೆ ಎದುರಿಸುತ್ತಿದೆ. ವೃತ್ತಿ ರಂಗಭೂಮಿಗೆ ಪ್ರತ್ಯೇಕವಾಗಿ ಆರಂಭವಾಗಿರುವ ರಂಗಾಯಣ ನೆರವಿಗೆ ಧಾವಿಸುವ ನಿರೀಕ್ಷೆಯಲ್ಲಿದ್ದೇವೆ. ಯುವಸಮೂಹಕ್ಕೆ ನಾಟಕ ತರಬೇತಿ ನೀಡಿ ಸಜ್ಜುಗೊಳಿಸಬೇಕಿದೆ. ನಾಟಕ ಕಂಪನಿಗಳ ಪೋಷಣೆಯ ಜವಾಬ್ದಾರಿಯನ್ನು ರಂಗಾಯಣ ಹೊರಬೇಕಿದೆ ಎಂದು ಮನವಿ ಮಾಡಿದರು.

ವೃತ್ತಿ ರಂಗಭೂಮಿ ರಂಗಾಯಣ ಕಲಾವಿದರಿಗೆ ಕನಿಷ್ಠ ಮೂರು ವರ್ಷ ತರಬೇತಿ ನೀಡಬೇಕು. ಮೊದಲ ವರ್ಷದ ತರಬೇತಿ ಮುಗಿದ ಬಳಿಕ ನಾಟಕ ಕಂಪನಿಗಳಿಗೆ ಕಳುಹಿಸಬೇಕು. ರಂಗ ಪ್ರಯೋಗಗಳ ಮೂಲಕ ಅವರು ಇನ್ನಷ್ಟು ಪರಿಪಕ್ವತೆ ಸಾಧಿಸುವ ಅವಕಾಶ ಕಲ್ಪಿಸಬೇಕು' ಎಂದು ಧಾರವಾಡ ರಂಗಾಯಣದ ನಿರ್ದೇಶಕ ರಾಜು ತಾಳಿಕೋಟೆ ಸಲಹೆ ನೀಡಿದರು.

ಹರಿಹರ ತಾಲ್ಲೂಕಿನ ಕೊಂಡಜ್ಜಿಯಲ್ಲಿ ಲಭ್ಯವಾಗಿರುವ ಭೂಮಿಯಲ್ಲಿ ರೆಪರ್ಟರಿ ಪ್ರಾರಂಭಿಸಬೇಕು. ಕಂಪನಿ ನಾಟಕಗಳ ಪರಂಪರೆ ಬಿಂಬಿಸುವ ವಸ್ತುಸಂಗ್ರಹಾಲಯ ಕೂಡ ನಿರ್ಮಿಸಬೇಕು ಎಂದು ನಾಟಕ ಅಕಾಡೆಮಿಯ ಮಾಜಿ ಅಧ್ಯಕ್ಷ ಬಿ.ಎಲ್. ಶೇಖ್ ಮಾಸ್ತರ್ ಕೋರಿಕೊಂಡರು.

ವೃತ್ತಿ ರಂಗಭೂಮಿ ರಂಗಾಯಣ ವಿಶೇಷಾಧಿಕಾರಿ ರವಿಚಂದ್ರ, ಹರಿಹರ ತಾಲ್ಲೂಕಿನ ಕೊಂಡಜ್ಜಿ ಬಳಿ ರಂಗಾಯಣಕ್ಕೆ 10 ಎಕರೆ ಭೂಮಿ ಮೀಸಲಿದೆ. ವೃತ್ತಿ ರಂಗಭೂಮಿಗೆ ಸಂಬಂಧಿಸಿದ ವಸ್ತುಸಂಗ್ರಹಾಲಯ ನಿರ್ಮಿಸಲಾಗುವುದು ಎಂದರು.

ಸಕ್ಕರಿ ಬಾಳಾಚಾರ್ಯ ಅವರ ಶ್ರೀ ವೀರ ನಾರಾಯಣ ಪ್ರಸಾತ ಕೃತಪುರ ಕರ್ನಾಟಕ ನಾಟಕ ಮಂಡಳಿ ಆರಂಭವಾದ ದಿನವಾದ ನ.14ನ್ನು ವೃತ್ತಿ ರಂಗಭೂಮಿ ದಿನವನ್ನಾಗಿ ಸರ್ಕಾರ ಘೋಷಣೆ ಮಾಡಬೇಕು ಎಂದು ಸಭೆ ನಿರ್ಣಯ ಕೈಗೊಂಡಿತು.

ನಾಟಕ ಕಂಪನಿಗಳ ಮಾಲೀಕರಾದ ಪ್ರೇಮಾ ಗುಳೇದಗುಡ್ಡ, ಜ್ಯೋತಿ, ಫಯಾಜ್, ಮಹಾದೇವ್ ಸೇರಿ ಅನೇಕರು ಭಾಗವಹಿಸಿದ್ದರು.

# ಹಿಂಜರಿಕೆ ಮೆಟ್ಟಿ ನಿಂತು ಸಾಧನೆ ಮಾಡಿರಿ

## ಜಿಲ್ಲಾ ಮಟ್ಟದ ಕಾಲೇಜುಗಳ ಸಾಂಸ್ಕೃತಿಕ ಸ್ಪರ್ಧೆಯಲ್ಲಿ ಶಾಸಕ ಶಿವಗಂಗಾ ಬಸವರಾಜ್

ದಾವಣಗೆರೆ, ಡಿ. 5- ಹಿಂಜರಿಕೆ ಮೆಟ್ಟಿ ನಿಂತು ಜೀವನ ಸಾಧನೆ ಮಾಡುವಂತೆ ಚನ್ನಗಿರಿ ಶಾಸಕ ಶಿವಗಂಗಾ ಬಸವರಾಜ್ ವಿದ್ಯಾರ್ಥಿಗಳಿಗೆ ಕಿವಿ ಮಾತು ಹೇಳಿದರು.

ಶಾಲಾ ಶಿಕ್ಷಣ ಇಲಾಖೆ (ಪದವಿ ಪೂರ್ವ) ಹಾಗೂ ಮೋತಿ ವೀರಪ್ಪ ಸರ್ಕಾರಿ ಪದವಿ ಪೂರ್ವ ಕಾಲೇಜು ಸಂಯುಕ್ತಾಶ್ರಯದಲ್ಲಿ ಗುರುವಾರ ಹಮ್ಮಿಕೊಳ್ಳಲಾಗಿದ್ದ 2024-25ನೇ ಸಾಲಿನ ಪದವಿ ಪೂರ್ವ ಕಾಲೇಜುಗಳ ಜಿಲ್ಲಾ ಮಟ್ಟದ ಸಾಂಸ್ಕೃತಿಕ ಪಠ್ಯೇತರ ಚಟುವಟಿಕೆಗಳ ಸ್ಪರ್ಧಾ ಕಾರ್ಯಕ್ರಮದಲ್ಲಿ ಮುಖ್ಯ ಅತಿಥಿಯಾಗಿ ಪಾಲ್ಗೊಂಡು ಅವರು ಮಾತನಾಡಿದರು.



ನಾನೂ ಸಹ ಮೋತಿ ವೀರಪ್ಪ ಕಾಲೇಜು ವಿದ್ಯಾರ್ಥಿಯಾಗಿದ್ದೆ. ಆಗ ನನಗೆ ಉಪನ್ಯಾಸಕರೆಂದರೆ ಅಂಜಿಕೆ, ಹಿಂಜರಿಕೆ ಇತ್ತು ಎಂದು ನೆನಪಿಸಿಕೊಂಡ ಶಾಸಕರು, ನೀವು ಧೈರ್ಯದಿಂದ ಸ್ಪರ್ಧೆಗಳಲ್ಲಿ, ಸಾಂಸ್ಕೃತಿಕ ಚಟುವಟಿಕೆಗಳಲ್ಲಿ ಭಾಗವಹಿಸಿ ಎಂದು ಹೇಳಿದರು.

ಸಮಾರಂಭವನ್ನು ಉದ್ಘಾಟಿಸಿ ಮಾತನಾಡಿದ ಜಿಲ್ಲಾಧಿಕಾರಿ ಡಾ. ಜಿ.ಎಂ. ಗಂಗಾಧರ ಸ್ವಾಮಿ, ವಿದ್ಯಾರ್ಥಿಗಳು ಸಮಯಕ್ಕೆ ಹೆಚ್ಚಿನ ಮಹತ್ವ ನೀಡಬೇಕು ಎಂದರು.

ಸರ್ಕಾರಿ ಕಾಲೇಜಿನಲ್ಲಿ ಓದುವ ವಿದ್ಯಾರ್ಥಿಗಳಲ್ಲಿ ಹೆಚ್ಚಿನವರು ಪ್ರತಿಭಾವಂತರಿರುತ್ತಾರೆ. ವಿದ್ಯಾರ್ಥಿಗಳಿಗಾಗಿ ಸರ್ಕಾರವೂ ಅನೇಕ ಸೌಲಭ್ಯಗಳನ್ನು ನೀಡುತ್ತದೆ. ಇವುಗಳನ್ನು ಸದುಪಯೋಗಪಡಿಸಿಕೊಂಡು ಗುರಿ ಸಾಧಿಸಬೇಕು ಎಂದು ಹೇಳಿದರು.

ಮಹಾನಗರ ಪಾಲಿಕೆ ಮೇಯರ್ ಕೆ.ಚಮನ್ ಸಾಬ್ ಮಾತನಾಡಿ, ಅಂಕ ಗಳಿಕೆಯ ಜೊತೆಗೆ ಗುರು-ಹಿರಿಯರಿಗೆ ಗೌರವ ಕೊಡುವುದನ್ನೂ ಕಲಿಯಬೇಕು ಎಂದು ಹೇಳಿದರು.

ಪ್ರತಿಯೊಬ್ಬರಲ್ಲೂ ಒಂದೊಂದು ರೀತಿಯ ಕಲೆ, ಪ್ರತಿಭೆ ಇರುತ್ತದೆ. ಅದನ್ನು ಸ್ಫೂರ್ತಿದಾಯಕವಾಗಿ ಬಳಸಿಕೊಂಡು ಓದಿನ ಕಾಲೇಜಿಗೆ, ಹೆತ್ತವರಿಗೆ, ನಗರಕ್ಕೆ ಕೀರ್ತಿ ತನ್ನಿ ಎಂದು ಆಶಿಸಿದರು.

ಪದವಿ ಪೂರ್ವ ಶಿಕ್ಷಣ ಇಲಾಖೆಯ ಉಪ ನಿರ್ದೇಶಕ ಕರಿಸಿದ್ದಪ್ಪ ಎಸ್.ಜಿ., ಮೋತಿ ವೀರಪ್ಪ ಸರ್ಕಾರಿ ಪದವಿ ಪೂರ್ವ ಕಾಲೇಜು ಪ್ರಾಂಶುಪಾಲ ಪಂಚಾಕ್ಷರಪ್ಪ ಎಸ್., ಜಿಲ್ಲಾ ಪದವಿ ಪೂರ್ವ ಕಾಲೇಜುಗಳ ಪ್ರಾಚಾರ್ಯರ ಸಂಘದ ಅಧ್ಯಕ್ಷ ಪ್ರದೀಪ್ ಕುಮಾರ್ ಎಸ್., ರಾಜನಹಳ್ಳಿ ಸೀತಮ್ಮ ಬಾಲಕಿಯರ ಸರ್ಕಾರಿ ಪದವಿ ಪೂರ್ವ ಕಾಲೇಜು ಪ್ರಾಂಶುಪಾಲರಾದ ಕುಸುಗಟ್ಟಿ ಟಿ.ಎಂ., ಜೀನಳ್ಳಿ ಸರ್ಕಾರಿ ಪ.ಪೂ. ಕಾಲೇಜು ಪ್ರಾಂಶುಪಾಲ ಶರಣಪ್ಪ ಎನ್.ಗೋವಿನಗಿಡದ, ಕಾರಿಗನೂರು ಕಾಲೇಜು ಪ್ರಾಂಶುಪಾಲ ಶಿವಾನಂದ ಆರ್. ಕುಡಪಲಿ, ಜಿಲ್ಲಾ ಪದವಿ ಪೂರ್ವ ಕಾಲೇಜುಗಳ ಉಪನ್ಯಾಸಕರ ಸಂಘದ ಅಧ್ಯಕ್ಷ ರವಿ ಸಿ.ಬಿ. ಉಪಸ್ಥಿತರಿದ್ದರು.

# ಸುಖದ ಮೂಲ ಧರ್ಮ ಪಾಲನೆಯಲ್ಲಿದೆ : ರಂಭಾಪುರಿ ಶ್ರೀ



## ರಾಣೇಬೆನ್ನೂರಿನಲ್ಲಿ ಶನೈಶ್ಚರ ಮಂದಿರದ ಕಾರ್ತಿಕೋತ್ಸವ

ರಾಣೇಬೆನ್ನೂರು, ಡಿ.5- ಸುಖದ ಮೂಲ ಧರ್ಮದಲ್ಲಿದೆ. ಧರ್ಮಪಾಲನೆಯಿಂದ ಮನುಷ್ಯ ಸುಖವಾಗಿರಲು ಸಾಧ್ಯ. ಇದನ್ನರಿತು ನಡೆದರೆ ಸುಖೀ ಜೀವನ ನಡೆಸಬಹುದು ಎಂದು ರಂಭಾಪುರಿ ಜಗದ್ಗುರು ವೀರಸೋಮೇಶ್ವರ ಶಿವಾಚಾರ್ಯ ಶ್ರೀ ಗಳು ನುಡಿದರು.

ನಗರದ ಶನೈಶ್ಚರ ಮಂದಿರದಲ್ಲಿ ನಡೆದ ಧರ್ಮ ಸಮಾರಂಭ ಹಾಗೂ ಕಾರ್ತಿಕೋತ್ಸವ ಕಾರ್ಯ ಕ್ರಮದ ಸಾನಿಧ್ಯ ವಹಿಸಿ, ಶ್ರೀಗಳು ಆಶೀರ್ವಚನ ನೀಡುತ್ತಿದ್ದರು.

ಸುಂದರವಾಗಿ ಅಲಂಕಾರ ಮಾಡಿದ ಸುಳ್ಳಿಗಿಂತ ಹರಿದ ಬಟ್ಟೆಯ ಸತ್ಯ ಹೆಚ್ಚು ಶಕ್ತಿಶಾಲಿಯಾಗಿದೆ. ಹಿಡಿದ ಕೆಲಸ ಪೂರ್ಣ ಮನಸ್ಸಿನಿಂದ ಮಾಡಬೇಕು. ಬದುಕು ಕಷ್ಟ-ಸುಖ, ನೋವು-ನಲಿವುಗಳ ಸಮ್ಮಿಶ್ರಣ, ಆ ಬದುಕಿಗೆ ನಾವೇ ನಾಯಕರು. ಆ ಬದುಕನ್ನು ಬದುಕಿ, ಯಶಸ್ಸು ಸಾಧಿಸುವುದು ಅವಶ್ಯವಿದೆ ಎಂದು ಜಗದ್ಗುರುಗಳು ತಿಳಿಸಿದರು.

ಆಧುನಿಕ ವಿಜ್ಞಾನ ,ತಂತ್ರಜ್ಞಾನದ ಪ್ರಪಂಚದಲ್ಲಿ ಮನುಷ್ಯ ಶಾಂತಿಯಿಂದ ಬದುಕು ನಡೆಸಲು ಕಷ್ಟಸಾಧ್ಯವಾಗಲಿದೆ. ಹಣದ ಬೆನ್ನು ಹತ್ತಿ ಸಂಸ್ಕೃತಿ ಮರೆಯಾಗುತ್ತಿರುವ ಈ ದಿನಮಾನಗಳಲ್ಲಿ ಇಂತಹ ಧಾರ್ಮಿಕ ಸಭೆ-ಸಮಾರಂಭಗಳು ಮಾರ್ಗದರ್ಶನ ನೀಡಲಿವೆ. ಈ ಮೂಲಕ ಆದರ್ಶಗಳ ಬದುಕು ಕಟ್ಟಿಕೊಳ್ಳಲು ಸಾಧ್ಯವಾಗಲಿದೆ ಎಂದು ಸಮಾರಂಭ ಉದ್ಘಾಟಿಸಿದ ಸಂಸದ ಜಗದೀಶ ಶೆಟ್ಟರ್ ಹೇಳಿದರು.

ಬಂಕಾಪುರ ಅರಳೆಲೆ ಮಠದ ರೇವಣಸಿದ್ದ ಶ್ರೀಗಳು, ಶಿವಯೋಗಿ ಹಾಲಸ್ವಾಮಿಗಳು, ಶಾಸಕರಾದ ಬಸವರಾಜ ಶಿವಣ್ಣನವರ, ಪ್ರಕಾಶ ಕೋಳಿವಾಡ, ಯು.ಬಿ.ಬಣಕಾರ, ಯಾಸೀರ್ ಖಾನ್ ಪಠಾಣ, ಉಪಸಭಾಪತಿ ರುದ್ರಪ್ಪ ಲಮಾಣಿ, 12ನೇ ವರ್ಷದ ಮನುಕುಲ ಸದ್ಭಾವನಾ ರಾಷ್ಟ್ರೀಯ ಪ್ರಶಸ್ತಿ ಪಡೆದ ನಟ ದೊಡ್ಡಣ್ಣ, ದಾವಣಗೆರೆಯ ಶಿವಕುಮಾರ, ಜಿಪಂ ಮಾಜಿ ಉಪಾಧ್ಯಕ್ಷ ಎಸ್.ಎಸ್. ರಾಮಲಿಂಗಣ್ಣನವರ, ವರ್ತಕರಾದ ಶ್ರೀನಿವಾಸ ಕಾಕಿ, ಬಸವರಾಜ ಪಟ್ಟಣಶೆಟ್ಟಿ, ಕಾಂಗ್ರೆಸ್ ಮುಖಂಡ ಚಂದ್ರಪ್ಪ ಬೇಡರ ಮತ್ತಿತರರಿದ್ದರು.

ಪೀಠಾಧಿಪತಿ ಶಿವಯೋಗಿ ಶ್ರೀಗಳು ಮಾತನಾಡಿ, ಮಠದ ಸರ್ವತೋಮುಖ ಅಭಿವೃದ್ಧಿಗೆ ಶ್ರಮಿಸಿದ ಎಲ್ಲಾ ಭಕ್ತರನ್ನು ನೆನೆಪಿಸಿಕೊಂಡು ಸ್ವಾಗತಿಸಿ, ಪ್ರಾಸ್ತಾವಿಕ ಮಾತುಗಳನ್ನಾಡಿದರು. 12ನೇ ವರ್ಷದ ಎಲ್ಲ ಧಾರ್ಮಿಕ ಕಾರ್ಯಕ್ರಮಗಳ ಅಧ್ಯಕ್ಷತೆ ವಹಿಸಿದ್ದ ತಾಪಂ ಮಾಜಿ ಅಧ್ಯಕ್ಷ ರವೀಂದ್ರಗೌಡ ಪಾಟೀಲ್ ಮಾತನಾಡಿ, ಕಡಿಮೆ ಸಮಯದಲ್ಲಿ ಮಠ ಏಳ್ಗೆಯಾಗುತ್ತಿರುವುದಕ್ಕೆ ಭಕ್ತರ ಶ್ರದ್ಧೆ ಕಾರಣವೆಂದರು.

# ಬೀದರ್ ಮಾದರಿ ಸೊಸೈಟಿ ರಚಿಸಲು ಆಗ್ರಹಿಸಿ ಮನವಿ




ದಾವಣಗೆರೆ, ಡಿ.5- ಹೊರ ಗುತ್ತಿಗೆ ಏಜೆನ್ಸಿಗಳನ್ನು ರದ್ದುಪಡಿಸಿ ಜಿಲ್ಲಾಧಿಕಾರಿಗಳ ಅಧ್ಯಕ್ಷತೆಯಲ್ಲಿ ಬೀದರ್ ಮಾದರಿ ಸೊಸೈಟಿ ರಚಿಸುವಂತೆ ಆಗ್ರಹಿಸಿ ಜಿಲ್ಲಾಧಿಕಾರಿ ಕಚೇರಿ ಮುಂದೆ ಗುರುವಾರ ಕರ್ನಾಟಕ ರಾಜ್ಯ ಸಂಯುಕ್ತ ವಸತಿ ನಿಲಯ ಕಾರ್ಮಿಕರ ಸಂಘದಿಂದ ಪ್ರತಿಭಟನೆ ನಡೆಸಲಾಯಿತು.

ಸಮಾಜ ಕಲ್ಯಾಣ ಇಲಾಖೆ ಹಿಂದುಳಿದ ವರ್ಗಗಳ ಕಲ್ಯಾಣ ಇಲಾಖೆ, ಪರಿಶಿಷ್ಟ ವರ್ಗಗಳ ಇಲಾಖೆ, ಅಲ್ಪಸಂಖ್ಯಾತರ ಕಲ್ಯಾಣ ಇಲಾಖೆಗಳ ಅಡಿಯಲ್ಲಿ ಬರುವ ವಸತಿ ನಿಲಯಗಳು ಮತ್ತು ವಸತಿ ಶಾಲೆಗಳಲ್ಲಿ ಹಲವು ವರ್ಗಗಳಿಂದ ಹೊರಗುತ್ತಿಗೆ ಆಧಾರದ ಮೇಲೆ ಅಡುಗೆಯವರು, ಅಡುಗೆ ಸಹಾಯಕರು ರಾತ್ರಿ ಕಾವಲುಗಾರರಾಗಿ ನೂರಾರು ಕಾರ್ಮಿಕರು ಕೆಲಸ ಮಾಡುತ್ತಿದ್ದಾರೆ.

ಈ ಕಾರ್ಮಿಕರಿಗೆ ವೇತನ ಪಿಎಫ್ ಇಎಸ್‌ಐ, ನೇಮಕಾತಿ ಪತ್ರ ಗುರುತಿನ ಚೀಟಿ ವೇತನ ರಶೀದಿ ರಜೆ ಸೌಲಭ್ಯಗಳು ಕಾಲಕ್ಕೆ ಸರಿಯಾಗಿ ದೊರಕುತ್ತಿಲ್ಲ. ಗುತ್ತಿಗೆದಾರರು ಕಾರ್ಮಿಕರಿಗೆ ವೇತನ. ಪಿಎಫ್. ಇಎಸ್‌ಐ ಕೊಡುವುದರಲ್ಲಿ ವಂಚನೆ ಮಾಡುತ್ತಿದ್ದಾರೆ.

ಈ ಬಗ್ಗೆ ಸಾಕಷ್ಟು ಸಲ ಸರ್ಕಾರದ ಗಮನಕ್ಕೆ ತಂದರೂ ಸಮಸ್ಯೆ ಬಗೆ ಹರಿದಿಲ್ಲ. ಅಲ್ಲದೆ ಹೊರಗುತ್ತಿಗೆ ಕಾರ್ಮಿಕರಿಗೆ ಕಾರ್ಮಿಕ ಕಾಯ್ದೆ ಅನ್ವಯ ನಿಗದಿಯಾದ ಶಾಸನಬದ್ಧ ಸೌಲಭ್ಯಗಳನ್ನು ಸಹಿತ ನೀಡುತ್ತಿಲ್ಲ.

ಈ ಹಿನ್ನೆಲೆಯಲ್ಲಿ ಈ ಹೊರಗುತ್ತಿಗೆ ಏಜೆನ್ಸಿಗಳಿಂದ ಆಗುತ್ತಿರುವ ಅಕ್ರಮ ಹಾಗೂ ಅನ್ಯಾಯಗಳನ್ನು ತಡೆಗಟ್ಟಲು ಕಾರ್ಮಿಕ ಸಚಿವರು ಹಾಗೂ ರಾಜ್ಯ ಸರ್ಕಾರವು ಈ ಹೊರಗುತ್ತಿಗೆ ಏಜೆನ್ಸಿಗಳ ಬದಲಿಗೆ ಜಿಲ್ಲಾಧಿಕಾರಿಗಳ ನೇತೃತ್ವದಲ್ಲಿ ಜಿಲ್ಲಾ ಕಾರ್ಮಿಕ ಸೇವೆ ವಿವಿಧೋದ್ದೇಶ ಸಹಕಾರ ಸಂಘ ರಚಿಸುವಂತೆ ಸಲಹೆ, ಹಣಕಾಸು ಇಲಾಖೆಯಿಂದ ಅನುಮತಿ ಸಹ ನೀಡಿದ್ದಾರೆ.

ಹೊರಗುತ್ತಿಗೆ ಕಾರ್ಮಿಕರಿಗೆ ನ್ಯಾಯವೊದಗಿಸಲು ಜಿಲ್ಲಾಧಿಕಾರಿ ಅಧ್ಯಕ್ಷತೆಯಲ್ಲಿ ದಾವಣಗೆರೆ ಜಿಲ್ಲಾ ಕಾರ್ಮಿಕ ಸೇವೆ ವಿವಿಧೋದ್ದೇಶ ಸಹಕಾರ ಸಂಘವನ್ನು ರಚಿಸಬೇಕೆಂದು ಕರ್ನಾಟಕ ರಾಜ್ಯ ಸಂಯುಕ್ತ ವಸತಿ ನಿಲಯ ಕಾರ್ಮಿಕರ ಸಂಘದಿಂದ ಅಪರ ಜಿಲ್ಲಾಧಿಕಾರಿಗಳಿಗೆ ಗುರುವಾರ ಮನವಿ ಸಲ್ಲಿಸಲಾಯಿತು.

ಈ ಸಂದರ್ಭದಲ್ಲಿ ಮಂಜುನಾಥ ಕೈದಾಳೆ, ಸ್ವಾಮಿ ನಿಂಗಪ್ಪ, ರವಿನಾಯ್ಕ, ನಿಂಗಪ್ಪ ಸಿದ್ದಮ್ಮನಹಳ್ಳಿ, ರತ್ನಮ್ಮ, ನವೀನ್, ಮನೋಹರ್, ಮಂಜುಳಮ್ಮ ಇತರರು ಉಪಸ್ಥಿತರಿದ್ದರು.


## ಸಾರ್ವಜನಿಕ ಪ್ರಕಟಣೆ

ನನ್ನ ಕಕ್ಷಿದಾರರಾದ ಹಾವೇರಿ ಜಿಲ್ಲೆ, ಬ್ಯಾಡಗಿ ಟೌನ್, ಶೆಟ್ಟರ್ ಲೇಔಟ್ ವಾಸಿಯಾದ ಶ್ರೀ ಶಿವಯೋಗಿ ಉಪಾಸಿ ಬಿನ್ ಲೇಟ್ ಸಂಗಪ್ಪ (ಮೊ.ನಂ.86604-66219, 94480-09357) ಇವರ ಪರವಾಗಿ ಸಾರ್ವಜನಿಕ ಪ್ರಕಟಣೆ ಏನೆಂದರೆ,

ಮೇಲ್ಕಂಡ ನಮ್ಮ ಕಕ್ಷಿದಾರರು ಕೆಳಕಂಡ ಷೆಡ್ಯೂಲ್‌ನಲ್ಲಿ ಕಾಣಿಸಿರುವ ಜಮೀನನ್ನು ಅದರ ಹಾಲಿ ಮಾಲೀಕರಾದ ಬೆಂಗಳೂರು ಸಿಟಿ, ರಾಮಮೂರ್ತಿನಗರ, ಅಪ್ಪಾರಾವ್ ಲೇಔಟ್, ಡೋರ್ ನಂ.34, 'ಹರ್ಷಿತ ನಿಲಯ' ದ ವಾಸಿಯಾದ ಶ್ರೀಮತಿ ಎ.ಎಂ. ನಿರ್ಮಲ ಬಿನ್ ಲೇಟ್ ಎ.ಎಂ. ವೃಷಭೇಂದ್ರಮೂರ್ತಿ (ಕೋಂ ಸಿ. ಕೃಷ್ಣಮೂರ್ತಿ) ಇವರಿಂದ ಕ್ರಯಕ್ಕೆ ಪಡೆಯಲು ಇಚ್ಛಿಸಿರುತ್ತಾರೆ. ಸದರಿ ಜಮೀನಿನ ಬಗ್ಗೆ ಬೇರೆ ಯಾರದೇ ಆಗಲೀ ತಂಟೆ ತಕರಾರು ಅಥವಾ ಯಾವುದೇ ರೀತಿಯ ಹಕ್ಕು ಬಾಧ್ಯತೆ ಇದ್ದಲ್ಲಿ, ಸದರಿ ಜಮೀನಿನ ಬಗ್ಗೆ ಯಾವುದೇ ರೀತಿಯ ನ್ಯಾಯಾಲಯದಲ್ಲಿ ಪ್ರಕರಣ ದಾಖಲು ಮಾಡಿದ್ದಲ್ಲಿ, ಯಾವುದೇ ರೀತಿಯ ಕ್ರಯದ ಕರಾರು ಮಾಡಿಕೊಂಡಿದ್ದಲ್ಲಿ, ಯಾವುದೇ ಅಡಮಾನ ಸಾಲವಿದ್ದಲ್ಲಿ ಅಥವಾ ಯಾವುದೇ ಜೀವನಾಂಶದ ಹಕ್ಕಿಗೆ ಅಥವಾ ಪಾಲು ವಿಭಾಗದ ಹಕ್ಕಿಗೆ ಒಳಪಟ್ಟಿದ್ದಲ್ಲಿ ಈ ಪ್ರಕಟಣೆ ಪ್ರಕಟಗೊಂಡ ಒಂದು ವಾರದೊಳಗಾಗಿ ಈ ಮೇಲ್ಕಂಡ ನನ್ನ ಕಕ್ಷಿದಾರರನ್ನಾಗಲೀ ಅಥವಾ ಅವರ ವಕೀಲರನ್ನಾಗಲೀ ಸೂಕ್ತ ದಾಖಲೆಗಳೊಂದಿಗೆ ಸಂಪರ್ಕಿಸತಕ್ಕದ್ದು, ಒಂದು ವಾರದೊಳಗಾಗಿ ಯಾವುದೇ ರೀತಿಯ ಲಿಖಿತ ತಕರಾರು ಬಾರದಿದ್ದಲ್ಲಿ ನಮ್ಮ ಕಕ್ಷಿದಾರರು ಸದರಿ ಜಮೀನು ಬೇರೆ ಯಾವುದೇ ವ್ಯಕ್ತಿಗಳ ಹಕ್ಕು ಹಿತಾಸಕ್ತಿ ಒಳಪಟ್ಟಿರುವುದಿಲ್ಲ ಎಂದು ಪರಿಗಣಿಸಿ ತಮ್ಮ ಹೆಸರಿಗೆ ನೋಂದಾಯಿಸಿಕೊಳ್ಳಲು ಹಕ್ಕುಳ್ಳವರಾಗಿರುತ್ತಾರೆ. ಆ ನಂತರ ಬಂದ ಯಾವುದೇ ತಕರಾರನ್ನು ಪರಿಗಣಿಸಲಾಗುವುದಿಲ್ಲ ಎಂದು ಈ ಮೂಲಕ ಸಾರ್ವಜನಿಕರಿಗೆ ತಿಳಿಯಪಡಿಸಲಾಗಿದೆ.

ಷೆಡ್ಯೂಲ್ : 1) ದಾವಣಗೆರೆ ತಾಲ್ಲೂಕು, ಆನಗೋಡು ಹೋಬಳಿ, ಕುರ್ಕಿ ಗ್ರಾಮದ ಹಾಲಿ ಸ.ನಂ.43/14 ವಿಸ್ತೀರ್ಣ 01 ಎಕರೆ ವ್ಯವಸಾಯದ ಜಮೀನಿಗೆ ಚಕ್ಕುಬಂದಿ: ಪೂರ್ವಕ್ಕೆ : ನಾರಾಯಣಪ್ಪ ಇವರ ಜಮೀನು, ಪಶ್ಚಿಮಕ್ಕೆ : ದಾವಣಗೆರೆ-ಬಾಡ ರಸ್ತೆ, ಉತ್ತರಕ್ಕೆ : ಸ.ನಂ.43/15 ರ ಎ.ಎಂ. ಶೈಲಾ ಇವರ ಜಮೀನು, ದಕ್ಷಿಣಕ್ಕೆ : ಸ.ನಂ.43/13 ರ ಎ.ಎಂ. ಸುಧಾ ಇವರ ಜಮೀನು.

**(ಆರ್.ಟಿ. ವಿನಯ ಕುಮಾರ) ವಕೀಲರು,**
#1862/19, 4ನೇ ಮೇನ್, ಹೆಚ್.ಆರ್.ಬಿ. ನಗರ, ಸೆಂಟ್ ಜಾನ್ಸ್ ಹೈ-ಸ್ಕೂಲ್ ಹತ್ತಿರ,
ಶಿವಕುಮಾರಸ್ವಾಮಿ ಬಡಾವಣೆ, 1ನೇ ಹಂತ, ದಾವಣಗೆರೆ - 577005
ಮೊ. : 98445 97838, Gmail : ajjihallivinay@gmail.com



## ಮಾನ್ಯ ಪ್ರಧಾನ ಹಿರಿಯ ಸಿವಿಲ್ ನ್ಯಾಯಾಧೀಶರು & ಸಿ.ಜೆ.ಎಂ. ನ್ಯಾಯಾಲಯ, ದಾವಣಗೆರೆ.

ಎಫ್.ಡಿ.ಪಿ. ಸಂಖ್ಯೆ : 39/2023

**ಅರ್ಜಿದಾರರು :** ಶ್ರೀಮತಿ ಲಲಿತಮ್ಮ **ವಿರುದ್ಧ**
**ಎದುರುದಾರರು :** ಶ್ರೀಮತಿ ಚನ್ನಮ್ಮ ಮತ್ತು ಇತರರು
**ಎದುರುದಾರರು :** 6. ಶ್ರೀಮತಿ ಶಿವಗಂಗಮ್ಮ ಕೋಂ ವೀರಭದ್ರಪ್ಪ ವಯಸ್ಸು 54 ವರ್ಷ, ವಾಸ: ಲಿಂಗದಹಳ್ಳಿ ಗ್ರಾಮ & ಅಂಚೆ, ಚನ್ನಗಿರಿ ತಾಲ್ಲೂಕು, ದಾವಣಗೆರೆ ಜಿಲ್ಲೆ.

**ಸಿ.ಪಿ.ಸಿ. ಆದೇಶ 5 ನಿಯಮ 20ರ ಅಡಿಯಲ್ಲಿ ಪತ್ರಿಕಾ ಪ್ರಕಟಣೆ**

ಅರ್ಜಿದಾರರು ಎದುರುದಾರರ ವಿರುದ್ಧ ಅಸಲು ದಾವಾ ನಂ.92/2019 ತೀರ್ಪಿನಂತೆ ಅಂತಿಮ ಡಿಕ್ರಿ ಕೋರಿ ಸದರಿ ದಾವೆಯನ್ನು ಸಲ್ಲಿಸಿದ್ದು, 6ನೇ ಎದುರುದಾರರಿಗೆ ನ್ಯಾಯಾಲಯದಿಂದ ಹೊರಡಿಸಲಾಗಿರುವ ಸಮನ್ಸ್/ನೋಟೀಸ್ ಹಾಗೂ ಅಂಚೆ ನೋಟೀಸ್ ಇತ್ಯಾದಿಗಳನ್ನು ಉದ್ದೇಶಪೂರ್ವಕವಾಗಿ ಸ್ವೀಕರಿಸದೇ ಹಿಂದಿರುಗಿಸಿರುವ ಪ್ರಯುಕ್ತ ತಮಗೆ ಸಾರ್ವಜನಿಕ ನೋಟೀಸನ್ನು ಈ ಮೂಲಕ ಹೊರಡಿಸುತ್ತಿದ್ದು, ದಿನಾಂಕ 22/01/2025 ರಂದು ಬೆಳಿಗ್ಗೆ 11.00 ಗಂಟೆ ಸಮಯದಂದು ತಾವುಗಳು ಖುದ್ದಾಗಿ ಅಥವಾ ವಕೀಲರ ಮೂಲಕ ಹಾಜರಾಗಿ ಆಕ್ಷೇಪಣೆ ಅಥವಾ ತಕರಾರು ಇದ್ದಲ್ಲಿ ಸಲ್ಲಿಸತಕ್ಕದ್ದು. ನಿರ್ಲಕ್ಷಿಸಿದ್ದಲ್ಲಿ ತಮ್ಮ ಗೈರು ಹಾಜರಿ ಯಲ್ಲಿ ನ್ಯಾಯಾಲಯವು ಮುಂದಿನ ಆದೇಶ ಹೊರಡಿಸಲಾಗುವುದು ತಿಳಿಯಿರಿ.

ನ್ಯಾಯಾಲಯದ ಮೊಹರು ಮತ್ತು ಸಹಿಯೊಂದಿಗೆ ದಿನಾಂಕ 29.11.2024ರಂದು ಹೊರಡಿಸಲ್ಪಟ್ಟಿದೆ.

ವಾದಿಯ ಪರ ವಕೀಲರು
**(ಎಂ.ಎಸ್. ರಾಜಕುಮಾರ್)**
ಸ್ಥಳ : ದಾವಣಗೆರೆ
ದಿನಾಂಕ : 28.11.202

ನ್ಯಾಯಾಲಯದ ಆದೇಶದ ಮೇರೆಗೆ
**ಶಿರಸ್ತೇದಾರರು**
ಪ್ರಧಾನ ಹಿರಿಯ ಸಿವಿಲ್ ನ್ಯಾಯಾಧೀಶರು & ಸಿ.ಜೆ.ಎಂ ನ್ಯಾಯಾಲಯ, ದಾವಣಗೆರೆ.

# ಕರ್ನಾಟಕ ಲೋಕಸೇವಾ ಆಯೋಗದಿಂದ ನಾಳೆ ಪಿ.ಡಿ.ಓ ಪರೀಕ್ಷೆ

ದಾವಣಗೆರೆ, ಡಿ. 5 - ಕರ್ನಾಟಕ ಲೋಕಸೇವಾ ಆಯೋಗದಿಂದ ನಾಡಿದ್ದು ದಿನಾಂಕ 7 ಮತ್ತು 8 ರಂದು ಗ್ರಾಮೀಣ ಅಭಿವೃದ್ಧಿ ಮತ್ತು ಪಂಚಾಯತ್ ರಾಜ್ ಇಲಾಖೆಯಲ್ಲಿ ಗ್ರೂಪ್ ಸಿ ಹುದ್ದೆಗಳಾದ ಪಂಚಾಯಿತಿ ಅಭಿವೃದ್ಧಿ ಅಧಿಕಾರಿಗಳ 150 ಹುದ್ದೆಗಳ ನೇಮಕಾತಿಗೆ ಸ್ಪರ್ಧಾತ್ಮಕ ಪರೀಕ್ಷೆ ನಡೆಯಲಿದೆ. ಪರೀಕ್ಷೆ ವೇಳೆ ಎಲ್ಲಾ ಪರೀಕ್ಷಾ ಕೇಂದ್ರಗಳಲ್ಲಿ ಯಾವುದೇ ಪರೀಕ್ಷಾ ಅವ್ಯವಹಾರಕ್ಕೆ ಅವಕಾಶ ನೀಡದೇ ಕಟ್ಟುನಿಟ್ಟಿನ ಪರೀಕ್ಷೆ ನಡೆಸಲು ಜಿಲ್ಲಾಧಿಕಾರಿ ಡಾ. ಜಿ.ಎಂ. ಗಂಗಾಧರಸ್ವಾಮಿ ಸೂಚಿ ಸಿದರು. ಜಿಲ್ಲಾಡಳಿತ ಭವನದ ಜಿಲ್ಲಾಧಿಕಾರಿಗಳ ಕಚೇರಿ ಸಭಾಂಗಣದಲ್ಲಿ ನಿನ್ನೆ ಜರುಗಿದ ಸ್ಪರ್ಧಾತ್ಮಕ ಪರೀಕ್ಷಾ ಪೂರ್ವ ಸಿದ್ಧತಾ ಸಭೆಯ ಅಧ್ಯಕ್ಷತೆ ವಹಿಸಿ ಅವರು ಮಾತನಾಡಿದರು.



ದಿನಾಂಕ 7 ರ ಶನಿವಾರ ಜಿಲ್ಲೆಯ 22 ಪರೀಕ್ಷಾ ಕೇಂದ್ರ ಗಳಲ್ಲಿ 9198 ಅಭ್ಯರ್ಥಿಗಳು ಮತ್ತು ದಿನಾಂಕ 8 ರ ಭಾನು ವಾರ 27 ಪರೀಕ್ಷಾ ಕೇಂದ್ರ ಗಳಲ್ಲಿ 11,749 ಅಭ್ಯರ್ಥಿಗಳು ಪರೀಕ್ಷೆ ಬರೆಯಲಿದ್ದಾರೆ. ಪರೀಕ್ಷೆಯಲ್ಲಿ ಭಾಗವಹಿಸಲಿರುವ ಎಲ್ಲಾ ಪರೀ ಕ್ಷಾರ್ಥಿಗಳು ಪರೀಕ್ಷಾ ಕೇಂದ್ರದೊಳಗೆ ಸ್ಮಾರ್ಟ್ ವಾಚ್, ಮೊಬೈಲ್, ಕ್ಯಾಲ್ಕು ಲೇಟರ್‌ಸೇರಿದಂತೆಯಾವುದೇ ಎಲೆಕ್ಟ್ರಾನಿಕ್ಸ್ ಉಪಕರಣ ಗಳನ್ನು ಪರೀಕ್ಷಾ ಕೇಂ ದ್ರದೊಳಗೆ ಕೊಂಡೊಯ್ಯುವು ದನ್ನು ಕಡ್ಡಾಯವಾಗಿ ನಿಷೇಧಿಸಿದೆ. ದಿನಾಂಕ 7 ರಂದು ಮಧ್ಯಾಹ್ನ 2 ರಿಂದ 4 ಗಂಟೆಯವರೆಗೆ ಕನ್ನಡ ಭಾಷಾ ಪರೀಕ್ಷೆ, ಡಿ.8 ರಂದು ಬೆಳಿಗ್ಗೆ 10 ರಿಂದ 11.30 ರವರೆಗೆ ಪತ್ರಿಕೆ-1 ಸಾಮಾನ್ಯ ಜ್ಞಾನ, ಮಧ್ಯಾಹ್ನ 2 ರಿಂದ 4 ಗಂಟೆಯವರೆಗೆ ಪತ್ರಿಕೆ-2, ಸಾಮಾನ್ಯ ಕನ್ನಡ, ಸಾಮಾನ್ಯ ಇಂಗ್ಲೀಷ್, ಕಂಪ್ಯೂಟರ್ ಜ್ಞಾನ ವಿಷಯದ ಕುರಿತು ಪರೀಕ್ಷೆ ಇರುತ್ತದೆ. ಪರೀಕ್ಷೆಗಳು ನಡೆಯುವ ದಿನಗಳಂದು ಪರೀಕ್ಷಾ ಕೇಂದ್ರದ 200ಮೀ. ವ್ಯಾಪ್ತಿಯಲ್ಲಿ ನಿಷೇಧಾಜ್ಞೆ ಜಾರಿಯಲ್ಲಿರುತ್ತದೆ ಎಂದರು.

ಅಪರ ಜಿಲ್ಲಾಧಿಕಾರಿ ಪಿ.ಎನ್.ಲೋಕೇಶ್, ಶಾಲಾ ಶಿಕ್ಷಣ ಮತ್ತು ಸಾಕ್ಷರತಾ ಇಲಾಖೆಯ ಉಪನಿರ್ದೇಶಕ ಜಿ. ಕೊಟ್ರೇಶ್, ಪದವಿ ಪೂರ್ವ ಶಿಕ್ಷಣ ಇಲಾಖೆಯ ಉಪನಿರ್ದೇಶಕ ಕರಿಸಿದ್ದಪ್ಪ ಉಪಸ್ಥಿತರಿದ್ದರು.

## ತಾಲ್ಲೂಕು ಕಸಾಪದಿಂದ ದತ್ತಿ ಉಪನ್ಯಾಸ ಕಾರ್ಯಕ್ರಮ



ದಾವಣಗೆರೆ, ಡಿ.5- ತಾಲ್ಲೂಕು ಕನ್ನಡ ಸಾಹಿತ್ಯ ಪರಿಷತ್ ವತಿಯಿಂದ ಶಾಲಾ-ಕಾಲೇಜು ಅಂಗಳದಲ್ಲಿ ಸಾಹಿತ್ಯೋತ್ಸವದ ಅಂಗವಾಗಿ ದತ್ತಿ ಉಪನ್ಯಾಸ ಕಾರ್ಯಕ್ರಮವನ್ನು ಕಾಳಿಕಾದೇವಿ ರಸ್ತೆಯಲ್ಲಿರುವ ಪದ್ಮಭೂಷಣ ಡಾ. ರಾಜಕುಮಾರ್ ಪ್ರೌಢಶಾಲೆಯಲ್ಲಿ ನಡೆಸಲಾಯಿತು.

ಪದ್ಮಭೂಷಣ ಡಾ.ರಾಜಕುಮಾರ್ ಪ್ರೌಢಶಾಲೆಯ ಶಿಕ್ಷಕರಾದ ರಾಜು ಎನ್. ಕೊಪ್ಪಳ ಅಧ್ಯಕ್ಷತೆ ವಹಿಸಿದ್ದರು. ತಾಲ್ಲೂಕು ಕಸಾಪ ನಿರ್ದೇಶಕ ಷಡಕ್ಷರಪ್ಪ ಎಂ. ಬೇತೂರು ಪ್ರಾಸ್ತಾವಿಕವಾಗಿ ಮಾತನಾಡಿದರು.

ಜಿಲ್ಲಾ ಪಂಚಾಯತ್ ಜಿಲ್ಲಾ ವಯಸ್ಕರ ಶಿಕ್ಷಣಾಧಿಕಾರಿ ಮಹೇಶಪ್ಪ ದೊಡ್ಮನಿ ಇವರು 'ಜನಪದ ಸಾಹಿತ್ಯದಲ್ಲಿ ಜೀವನ ಮೌಲ್ಯಗಳು' ಕುರಿತು ಉಪನ್ಯಾಸ ನೀಡಿದರು. ತಾಲ್ಲೂಕು ಕನ್ನಡ ಸಾಹಿತ್ಯ ಪರಿಷತ್ ಅಧ್ಯಕ್ಷರಾದ ಶ್ರೀಮತಿ ಸುಮತಿ ಜಯಪ್ಪ, ನಿರ್ದೇಶಕರಾದ ಕೆ.ಜಿ. ಸೌಭಾಗ್ಯ, ಸಹ ಶಿಕ್ಷಕರ ಸಂಘದ ಅಧ್ಯಕ್ಷ ಹನುಮಂತರೆಡ್ಡಿ ಉಪಸ್ಥಿತರಿದ್ದರು.

## 11 ರಂದು ಜಗಳೂರು ತಾ.ಪಂ.ನಲ್ಲಿ ಲೋಕಾಯುಕ್ತ ಎಸ್ಪಿ ಅಹವಾಲು ಸ್ವೀಕಾರ

ದಾವಣಗೆರೆ, ಡಿ.5- ದಾವಣಗೆರೆ ವಿಭಾಗದ ಲೋಕಾಯುಕ್ತ ಪೊಲೀಸ್ ಅಧೀಕ್ಷಕ ಎಂ.ಎಸ್ ಕೌಲಾಪೂರೆ ಅವರು ಜಗಳೂರು ತಾಲ್ಲೂಕು ಪಂಚಾಯಿತಿ ಸಭಾಂಗಣದಲ್ಲಿ ಇದೇ ದಿನಾಂಕ 11 ರಂದು ಬೆಳಿಗ್ಗೆ 10.30 ರಿಂದ ಮಧ್ಯಾಹ್ನ 1.30 ರವರೆಗೆ ಸಾರ್ವಜನಿಕರಿಂದ ಅಹವಾಲು ಸ್ವೀಕರಿಸುವರು. ಸಾರ್ವಜನಿಕರು ವಿವಿಧ ಇಲಾಖೆಗಳಿಗೆ ಸಲ್ಲಿಸಿದ ಅರ್ಜಿಗಳನ್ನು ವಿಲೇ ಮಾಡದೇ ಬಾಕಿ ಇಟ್ಟಿದ್ದಲ್ಲಿ ಅಂತಹ ದೂರುಗಳನ್ನು ಸಲ್ಲಿಸಬಹುದೆಂದು ತಿಳಿಸಿದ್ದಾರೆ.

## ನಾಡಿದ್ದು ನಗರದಿಂದ ಹರಿಹರಕ್ಕೆ ಕಾಲ್ನಡಿಗೆ

ದಾವಣಗೆರೆ, ಡಿ. 5 - ಕುಂದುವಾಡ ಕೆರೆ ವಾಯು ವಿಹಾರ ಬಳಗ ದಿಂದ ನಗರದ ಬಿಎಸ್‌ಎನ್‌ಎಲ್ ಸರ್ಕಲ್‌ನಿಂದ ಹರಿಹರದ ಹರಿಹರೇ ಶ್ವರ ದೇವಸ್ಥಾನದ ಆವರಣದವರೆಗೆ ಕಾಲ್ನಡಿಗೆಯನ್ನು ಇದೇ ದಿನಾಂಕ 8 ರ ಭಾನುವಾರ ಬೆಳಿಗ್ಗೆ 5.30ಕ್ಕೆ ಹಮ್ಮಿಕೊಳ್ಳಲಾಗಿದೆ ಎಂದು ಕುಂದುವಾಡ ಕೆರೆ ವಾಯು ವಿಹಾರ ಬಳಗದ ಜೆ. ಈಶ್ವರ್ ಸಿಂಗ್ ಕವಿತಾಳ್ ತಿಳಿಸಿದ್ದಾರೆ.

ಹೆಚ್ಚಿನ ವಿವರಕ್ಕೆ 98441 27137, 93410 00306, 89713 89102, 94483 75866ಗೆ ಸಂಪರ್ಕಿಸಬಹುದು.

## ಮುರುಗಯ್ಯ ನಿಧನಕ್ಕೆ ಕಸಾಪ ಸಂತಾಪ

ದಾವಣಗೆರೆ, ಡಿ.5- ನಗರದ ಬಿ.ಎಂ. ಮುರುಗಯ್ಯ ಕುರ್ಕಿ ಅವರ ನಿಧನಕ್ಕೆ ಜಿಲ್ಲಾ ಕನ್ನಡ ಸಾಹಿತ್ಯ ಪರಿಷತ್ ಅಧ್ಯಕ್ಷ ಬಿ. ವಾಮದೇವಪ್ಪ ಸಂತಾಪ ವ್ಯಕ್ತಪಡಿಸಿದ್ದಾರೆ. ಕನ್ನಡ ಸಾಹಿತ್ಯ ಪರಿಷತ್ತಿನ ಹಿರಿಯ ಆಜೀವ ಸದಸ್ಯ ರಾಗಿದ್ದ ಮುರುಗಯ್ಯ ಅವರು, ತಾನು ದಾವಣಗೆರೆ ತಾಲ್ಲೂಕು ಘಟಕದ ಅಧ್ಯಕ್ಷನಾಗಿದ್ದ ಸಂದರ್ಭ ದಲ್ಲಿ ಅವರು ಕಚೇರಿ ಕಾರ್ಯ ದರ್ಶಿಯಾಗಿ ಕಾರ್ಯ ನಿರ್ವಹಿಸಿ ದ್ದರು ಎಂದು ವಾಮದೇವಪ್ಪ ಸ್ಮರಿಸಿದ್ದಾರೆ.

## ಜಾನಪದ ಕಲಾ ಪ್ರಕಾರಗಳ ತರಬೇತಿ ಶಿಬಿರಕ್ಕೆ ಅರ್ಜಿ ಆಹ್ವಾನ

ದಾವಣಗೆರೆ, ಡಿ. 5 - ಯುವ ಸಬಲೀಕರಣ ಮತ್ತು ಕ್ರೀಡಾ ಇಲಾಖೆಯ ಪರಿಶಿಷ್ಟ ಜಾತಿ ಉಪಯೋಜನೆ ಅಡಿಯಲ್ಲಿ ಪರಿಶಿಷ್ಟ ಜಾತಿ ಯುವಜನರಿಗೆ ಕಲಾ ಪ್ರಕಾರಗಳ ಜಾನಪದ ತರಬೇತಿ ಶಿಬಿರಕ್ಕೆ ಅರ್ಜಿಯನ್ನು ಆಹ್ವಾನಿಸಲಾಗಿದೆ. ಪರಿಶಿಷ್ಟ ಜಾತಿ ಯುವ ಜನರಿಗೆ ಜಾನಪದ ಕಲಾ ಪ್ರಕಾರಗಳ ತರಬೇತಿ ಶಿಬಿರವನ್ನು 50 ಶಿಬಿರಾರ್ಥಿಗಳಿಗೆ ಇದೇ ದಿನಾಂಕ 10 ರಿಂದ 17 ವರೆಗೆ ತರಬೇತಿ ಆಯೋಜನೆ ಮಾಡಲಾಗಿದೆ.

ಆಸಕ್ತ ಪರಿಶಿಷ್ಟ ಜಾತಿಯ ಯುವಕ, ಯುವತಿಯರು ಅರ್ಜಿ ನಮೂನೆಯನ್ನು ಸಹಾಯಕ ನಿರ್ದೇಶಕರ ಕಚೇರಿ, ಯುವ ಸಬಲೀಕರಣ ಮತ್ತು ಕ್ರೀಡಾ ಇಲಾಖೆ, ಜಿಲ್ಲಾ ಕ್ರೀಡಾಂಗಣ, ದಾವಣಗೆರೆ ಇಲ್ಲಿ ಪಡೆದು ಭರ್ತಿ ಮಾಡಿ ಇದೇ ದಿನಾಂಕ 9 ರೊಳಗಾಗಿ ಸಲ್ಲಿಸಲು ಹಾಗೂ ಹೆಚ್ಚಿನ ವಿವರಗಳಿಗೆ ದೂ.ಸಂ: (08192-237480) ಸಂಪರ್ಕಿಸಬಹುದು.

## ಕನ್ನಡಪರ ಹೋರಾಟಗಾರ ಸಂತೋಷ್‌ಗೆ ಪ್ರಶಸ್ತಿ



ದಾವಣಗೆರೆ, ಡಿ.5- ನಗರದ ಚನ್ನಗಿರಿ ವಿರುಪಾಕ್ಷಪ್ಪ ಧರ್ಮಶಾಲಾ ಮಂಟಪದಲ್ಲಿ ಇತ್ತೀಚೆಗೆ 'ಕರ್ನಾಟಕ ಮುಕುಟಮಣಿ ರಾಜ್ಯ ಪ್ರಶಸ್ತಿ' ಪ್ರದಾನ ಸಮಾರಂಭ ಮತ್ತು 69ನೇ ರಾಜ್ಯೋತ್ಸವವನ್ನು ಹಮ್ಮಿಕೊಳ್ಳ ಲಾಗಿತ್ತು. ಸುವರ್ಣ ಕರ್ನಾಟಕ ವೇದಿಕೆಯ ಸಂಸ್ಥಾಪಕ ರಾಜ್ಯಾಧ್ಯಕ್ಷ ಸಂತೋಷ್ ಕುಮಾರ್ ಅವರ ಕನ್ನಡ ಪರ ಹೋರಾಟ ಹಾಗೂ ಸಾಮಾಜಿಕ ಸೇವೆಯನ್ನು ಗುರುತಿಸಿ ಇವರಿಗೆ ಕಲಾಕುಂಚ ಸಾಂಸ್ಕೃತಿಕ ಸಂಸ್ಥೆಯು ಈ ಪ್ರಶಸ್ತಿ ನೀಡಿದೆ.

## 9ಕ್ಕೆ ಶ್ರೀ ಗುರು ಕರಿಬಸವೇಶ್ವರ ಕಾರ್ತಿಕ



ದಾವಣಗೆರೆ, ಡಿ.5- ನಗರದ ಲೇಬರ್ ಕಾಲೋನಿ 6ನೇ ಕ್ರಾಸ್‌ನಲ್ಲಿನ ಶ್ರೀ ಗುರು ಕರಿಬಸವೇಶ್ವರ ದೇವಸ್ಥಾನದಲ್ಲಿ ಇದೇ ದಿನಾಂಕ 9 ರಂದು ಸೋಮವಾರ ಸಂಜೆ 6.30ಕ್ಕೆ ಸ್ವಾಮಿಯ ಕಾರ್ತಿಕ ದೀಪೋತ್ಸವ ಏರ್ಪಡಿಸಲಾಗಿದೆ.



# ಭ್ರಷ್ಟಾಚಾರದ ಗುಂಡಿ ಮುಚ್ಚಲು ಹಾಸನ ಸಮಾವೇಶ

**ವಿಧಾನ ಪರಿಷತ್ ವಿರೋಧ ಪಕ್ಷದ ನಾಯಕ ಛಲವಾದಿ ನಾರಾಯಣಸ್ವಾಮಿ**

ದಾವಣಗೆರೆ, ಡಿ. 5-ಭ್ರಷ್ಟಾಚಾರದ ಗುಂಡಿ ಮುಚ್ಚುವ ಸಲುವಾಗಿ ಹಾಸನದಲ್ಲಿ ಕಾಂಗ್ರೆಸ್ ಪಕ್ಷ ಜನ ಕಲ್ಯಾಣ ಸಮಾವೇಶ ನಡೆಸಿದೆ. ಮೂರು ಉಪ ಚುನಾವಣೆಯಲ್ಲಿ ಗೆದ್ದಿರುವುದಕ್ಕೆ ಸಮಾವೇಶ ಎಂದಿದ್ದಾರೆ. ಗೆದ್ದಿದ್ದು ಹೇಗೆ ಎಂಬುದು ಗೊತ್ತಿದೆ ಎಂದು ವಿಧಾನ ಪರಿಷತ್ ವಿರೋಧ ಪಕ್ಷದ ನಾಯಕ ಛಲವಾದಿ ನಾರಾಯಣಸ್ವಾಮಿ ದೂರಿದರು.

ನಗರದ ಬಿಜೆಪಿ ಕಾರ್ಯಾಲಯದಲ್ಲಿ ಇಂದು ಸುದ್ದಿಗೋಷ್ಠಿಯಲ್ಲಿ ಮಾತನಾಡಿದ ಅವರು, ಉಪ ಚುನಾವಣೆಯ ಫಲಿತಾಂಶದಿಂದ ಸರ್ಕಾರ ಬರೋಲ್ಲ. ಹೋಗೊಲ್ಲ ಎಂದು ಜನ ನೀಡಿರುವ ತೀರ್ಪನ್ನು ಸ್ವಾಗತಿಸುತ್ತೇನೆಂದು ಹೇಳಿದರು.

ಮೂರು ಉಪ ಚುನಾವಣೆಯಲ್ಲಿನ ಫಲಿತಾಂಶ ಭ್ರಷ್ಟಾಚಾರಕ್ಕೆ ಲೈಸನ್ಸ್ ಅಲ್ಲವೇ ಅಲ್ಲ ಎಂದ ಅವರು, ಬಿಜೆಪಿಯವರು ಏನೇ ಟೀಕೆ ಮಾಡಿದರೂ ಬಗ್ಗಲ್ಲ, ಜಗ್ಗಲ್ಲ ಎಂದು ಸಿದ್ದರಾಮಯ್ಯ ಹೇಳಿದ್ದರು. ಹಾಗಾದರೆ ರಾತ್ರೋರಾತ್ರಿ ಯಾಕೆ 14 ಮುಡಾ ನಿವೇಶನಗಳನ್ನು ವಾಪಸ್ ಮಾಡಿದರು ಎಂದು ಪ್ರಶ್ನಿಸಿದರು.

ರಾಜ್ಯದಲ್ಲಿ ಹೊಸ ಟ್ರೆಂಡ್ ಶುರುವಾಗಿದೆ. ಅಘೋಷಿತ ಕಾನೂನು ಜಾರಿಯಾಗಿದೆ. ಎಷ್ಟು ಬೇಕಾದರೂ ಕಳ್ಳತನ ಮಾಡಿ, ಲೂಟಿ ಮಾಡಿ, ಸಿಕ್ಕಿ ಬಿದ್ದರೆ ಮಾತ್ರ ವಾಪಸ್ ಮಾಡಿ. ಅಲ್ಲಿಗೆ ನಿಮ್ಮ ಮೇಲಿನ ಕೇಸ್ ಖುಲಾಸ್ ಎನ್ನುವಂತಾಗಿದೆ ಎಂದು ವ್ಯಂಗ್ಯವಾಡಿದರು.

ರಾಜ್ಯದಲ್ಲಿ ಆಡಳಿತ ನಡೆಸುತ್ತಿರುವುದು ಕಳ್ಳ ಸರ್ಕಾರ. ಈಗ ಜಮೀನು ಕದಿಯುವುದಕ್ಕೆ ಬಂದಿದ್ದಾರೆ. ಮುಂದು ವಕ್ಫ್ ಬೋರ್ಡ್‌ನಿಂದಲೂ ಎನ್‌ಓಸಿ (ನಿರಾಪೇಕ್ಷಣಾ ಪತ್ರ) ತರುವ ಕಾಲವೂ ಬರಬಹುದು. ಇಂತಹ ಸರ್ಕಾರಕ್ಕೆ ಜನ ತಕ್ಕ ಪಾಠ ಕಲಿಸಬೇಕಾಗಿದೆ ಎಂದರು.

ಸಿದ್ದರಾಮಯ್ಯ ಅವರು ಸುಳ್ಳು ಹೇಳುವುದರಲ್ಲಿ ಇದೀಗ ನಂಬರ್ ಒನ್ ಆಗಿದ್ದಾರೆ. 2014 ಮತ್ತು 2018 ರಲ್ಲಿ ಇದೇ ನನ್ನ ಕೊನೆ ಚುನಾವಣೆ ಎಂದಿದ್ದರು. ಇದೀಗ 2024 ಕ್ಕೆ ಬಂದಿದ್ದಾರೆ. ಅವರ ಮಾತುಗಳಲ್ಲಿ ನೈಜತೆ ಇರುವುದಿಲ್ಲ ಎಂದು ಟೀಕಿಸಿದರು.

ಮಾಜಿ ಸಚಿವ ಎಸ್.ಎ. ರವೀಂದ್ರನಾಥ್, ವಿಧಾನ ಪರಿಷತ್ ಮಾಜಿ ಮುಖ್ಯ ಸಚೇತಕ ಡಾ. ಎ. ಹೆಚ್. ಶಿವಯೋಗಿಸ್ವಾಮಿ, ಬಿಜೆಪಿ ಜಿಲ್ಲಾಧ್ಯಕ್ಷ ರಾಜಶೇಖರ್ ನಾಗಪ್ಪ, ಮಾಜಿ ಸಚಿವ ಬಿ.ಸಿ.ಪಾಟೀಲ್, ಮಾಡಾಳು ಮಲ್ಲಿಕಾರ್ಜುನ್, ನಾರಾಯಣಸ್ವಾಮಿ, ಮತ್ತಿತರರು ಉಪಸ್ಥಿತರಿದ್ದರು.

## ಅಡುಗೆ ಸುರಕ್ಷತೆ ಜಾಗೃತಿ ಮೂಡಿಸುವ ಕಾರ್ಯಕ್ರಮ



ದಾವಣಗೆರೆ, ಡಿ. 5- ಎಲ್‌ಪಿಜಿ ಗ್ಯಾಸ್ ಬಳಕೆಯ ಸುರಕ್ಷಿತ ಕ್ರಮ, ತೈಲ ಮಾರುಕಟ್ಟೆ ಕಂಪನಿಗಳಿಂದ ಪಾಕಶಾಲೆಯ ಕೌಶಲ್ಯಗಳನ್ನು ಆಚರಿಸುವಾಗ ಎಲ್‌ಪಿಜಿ ನಿರ್ವಹಣೆ ಹಾಗೂ ಅಡುಗೆ ಸುರಕ್ಷತೆಯ ಬಗ್ಗೆ ಜಾಗೃತಿ ಮೂಡಿಸುವ ಕಾರ್ಯಕ್ರಮವು ನಗರದ ಜಿನಿಸಿಸ್ ರಿಟ್ರೀಟ್‌ನಲ್ಲಿ ಈಚೆಗೆ ನಡೆಯಿತು.

ನಮ್ಮ ಅಡುಗೆ ನಮ್ಮ ಜವಾಬ್ದಾರಿ ಎಂಬ ಘೋಷ ವಾಕ್ಯದೊಂದಿಗೆ ಏರ್ಪಾಡಾಗಿದ್ದ ಕಾರ್ಯಕ್ರಮದಲ್ಲಿ ಅಡುಗೆ ಸ್ಪರ್ಧೆ ಏರ್ಪಡಿಸಲಾಗಿತ್ತು. ವಿವಿಧ ರೀತಿಯ ಭಕ್ಷ್ಯಗಳನ್ನು ತಯಾರಿಸುವುದರೊಂದಿಗೆ ಎಲ್‌ಪಿಜಿ ಗ್ರಾಹಕರಲ್ಲಿ ಎಲ್‌ಪಿಜಿ ಕುರಿತಾಗಿ ಏರ್ಪಡಿಸಿದ್ದ ಕಾರ್ಯಕ್ರಮ ಯಶಸ್ಸು ಕಂಡಿತು. ಸ್ಪರ್ಧಾ ವಿಜೇತರಿಗೆ ಜಿಲ್ಲಾ ನೋಡಲ್ ಅಧಿಕಾರಿ ಭರತ್‌ಚಂದ್ರ ಪಂಚಲ ಬಹುಮಾನ, ಪ್ರಮಾಣ ಪತ್ರ ವಿತರಿಸಿದರು.

ಚೇತನ ಬಹುಮಾನ ವಿತರಣೆ ಕಾರ್ಯಕ್ರಮ ನಡೆಸಿಕೊಟ್ಟರು. ದರ್ಶನ್ ಸ್ವಾಗತಿಸಿದರು. ವಿಜಯಲಕ್ಷ್ಮಿ ಕಾರ್ಯಕ್ರಮ ನಿರೂಪಿಸಿದರು. ಚಿಂದೋಡಿ ವೀರಶಂಕರ ವಂದಿಸಿದರು.

# ಜಿ.ಎಂ. ವಿಶ್ವವಿದ್ಯಾಲಯದಿಂದ ರೋಬೋಟಿಕ್ಸ್ - ಆಟೋಮೇಷನ್ ಕುರಿತು ಟಿಂಕರಿಂಗ್ ಕಾರ್ಯಾಗಾರ



ದಾವಣಗೆರೆ, ಡಿ.5- ಭಾರತ ಸರ್ಕಾರದ ವಿಜ್ಞಾನ ಮತ್ತು ತಂತ್ರಜ್ಞಾನ ಇಲಾಖೆ ಪ್ರಾರಂಭಿಸಿರುವ ಜ್ಞಾನಜ್ಯೋತಿ ಕಾರ್ಯಕ್ರಮದ ಪ್ರವರ್ತಕ ಉಪಕ್ರಮವಾಗಿದ್ದು, ವಿದ್ಯಾರ್ಥಿನಿಯರಲ್ಲಿ ವಿಜ್ಞಾನ ಶಿಕ್ಷಣವನ್ನು ಉತ್ತೇಜಿಸುವ ಪ್ರಾಥಮಿಕ ಗುರಿಯಾಗಿದೆ ಎಂದು ಜಿ.ಎಂ. ವಿಶ್ವವಿದ್ಯಾನಿಲಯದ ರೋಬೋಟಿಕ್ಸ್ ಮತ್ತು ಆಟೋಮೇಷನ್ ವಿಭಾಗದ ಪ್ರಾಧ್ಯಾಪಕ ಡಾ. ಜಿ.ಜಿ. ರಾಜಕುಮಾರ್ ಅವರು ತಿಳಿಸಿದರು.

ಗಾಜನೂರಿನ ಶ್ರೀ ಜವಾಹರ ನವೋದಯ ವಿದ್ಯಾಲಯದಲ್ಲಿ ವಿಜ್ಞಾನ ಜ್ಯೋತಿ ಕಾರ್ಯಕ್ರಮದಡಿಯಲ್ಲಿ ಹಮ್ಮಿಕೊಂಡಿದ್ದ ರೋಬೋಟಿಕ್ಸ್ ಮತ್ತು ಆಟೋಮೇಷನ್ ಕುರಿತು ಟಿಂಕರಿಂಗ್ ಕಾರ್ಯಾಗಾರವನ್ನು ದೀಪ ಬೆಳಗಿಸುವುದರ ಮೂಲಕ ಕಾರ್ಯಕ್ರಮವನ್ನು ಉದ್ಘಾಟಿಸಿ ಅವರು ಮಾತನಾಡಿದರು.

ಈ ಕಾರ್ಯಕ್ರಮವು ವಿಜ್ಞಾನ, ತಂತ್ರಜ್ಞಾನ, ಇಂಜಿನಿಯರಿಂಗ್ ಮತ್ತು ಗಣಿತ ಕ್ಷೇತ್ರಗಳಲ್ಲಿ ಲಿಂಗ ಸಮಾನತೆಯನ್ನು ಉತ್ತೇಜಿಸುವ ಗುರಿ ಹೊಂದಿರುವ ವಿಜ್ಞಾನ, ತಂತ್ರಜ್ಞಾನ ಮತ್ತು ನಾವೀನ್ಯತೆ ನೀತಿಯ ಭಾಗವಾಗಿದೆ. ಇದು ನಿರ್ದಿಷ್ಟವಾಗಿ ಗ್ರಾಮೀಣ ಮತ್ತು ಹಿಂದುಳಿದ ಪ್ರದೇಶಗಳಲ್ಲಿನ ವಿದ್ಯಾರ್ಥಿನಿಯರನ್ನು ಗುರಿಯಾಗಿಸುತ್ತದೆ. ವೈಜ್ಞಾನಿಕ ಜ್ಞಾನ ಮತ್ತು ಸಂಪನ್ಮೂಲಗಳಿಗೆ ಒಡ್ಡಿಕೊಳ್ಳುವ ಮೂಲಕ ವಿಜ್ಞಾನ ಮತ್ತು ತಂತ್ರಜ್ಞಾನ ದಲ್ಲಿ ವೃತ್ತಿ ಜೀವನವನ್ನು ಮುಂದುವರೆಸಲು ಅವರನ್ನು ಪ್ರೋತ್ಸಾಹಿಸುತ್ತದೆ. ಕಾರ್ಯಾಗಾರವು ಆಧುನಿಕ ವಿನ್ಯಾಸ ಮತ್ತು ಅಸೆಂಬ್ಲಿ ತಂತ್ರಜ್ಞಾನದಲ್ಲಿ ವಿದ್ಯಾರ್ಥಿಗಳ ಕೌಶಲ್ಯಗಳನ್ನು ಹೆಚ್ಚಿಸಲು ನಾವೀನ್ಯತೆ ಮತ್ತು ತಾಂತ್ರಿಕ ಪರಿಣಿತಿಯನ್ನು ಬೆಳೆಸುವ ಗುರಿಯನ್ನು ಹೊಂದಿದೆ ಎಂದರು.

ಜಿ.ಎಂ. ವಿಶ್ವವಿದ್ಯಾನಿಲಯದ ರೋಬೋಟಿಕ್ಸ್ ಮತ್ತು ಆಟೋಮೇಷನ್ ವಿಭಾಗದ ಸಹಾಯಕ ಪ್ರಾಧ್ಯಾಪಕರುಗಳಾದ ಲಿಂಗರಾಜು, ಶ್ರೀಮತಿ ಬಿ.ಎಂ. ಚೇತನ ಅವರುಗಳು ಮಾತನಾಡಿದರು.

ವಿಜ್ಞಾನ ಜ್ಯೋತಿ ಕಾರ್ಯಕ್ರಮದ ಬಗ್ಗೆ ವಿವರಿಸಿದ ವಿದ್ಯಾಲಯದ ಹಿರಿಯ ಶಿಕ್ಷಕರಾದ ಶರಣಪ್ಪ ನಾಯಕ್ ಅವರು, ವಿಜ್ಞಾನ ಜ್ಯೋತಿ ಕಾರ್ಯಕ್ರಮವು ಭಾರತ ಸರ್ಕಾರದ ವಿಜ್ಞಾನ ಮತ್ತು ತಂತ್ರಜ್ಞಾನದ ವಿಷಯದಲ್ಲಿ ಹೆಣ್ಣು ಮಕ್ಕಳನ್ನು ತೊಡಗಿಸುವುದರ ಸಲುವಾಗಿ ಹಮ್ಮಿಕೊಂಡಿರುವ ಕಾರ್ಯಕ್ರಮವಾಗಿದೆ ಎಂದು ಹೇಳಿದರು.

ಕಾರ್ಯಕ್ರಮದ ಸಂಯೋಜಕರಾದ ಶ್ರೀಮತಿ ರೇಖಾ ಆರ್. ಸುಲಾಖೆ ಅವರು ವಿಜ್ಞಾನ ಜ್ಯೋತಿ ಕಾರ್ಯಕ್ರಮವನ್ನು ಅವಲೋಕಿಸಿ ಮಾತನಾಡಿದರು.

10ನೇ ತರಗತಿಯ ಎಂ. ಸ್ನೇಹ ವಂದಿಸಿದರು. 11ನೇ ತರಗತಿಯ ಜೆ.ಸಿ. ಸುಂದರಿ ಮಾನ್ಯ ನಿರೂಪಿಸಿದರು.

## ನಗರದಲ್ಲಿ ಇಂದು ಅಂಬೇಡ್ಕರ್ 68ನೇ ಪರಿನಿರ್ವಾಣ ದಿನಾಚರಣೆ

ಸಂವಿಧಾನ ಶಿಲ್ಪಿ ಡಾ. ಬಿ.ಆರ್. ಅಂಬೇಡ್ಕರ್ ರವರ 68ನೇ ಮಹಾ ಪರಿನಿರ್ವಾಣ ದಿನಾಚರಣೆಯನ್ನು ಇಂದು ಆಚರಿಸಲಾಗುತ್ತಿದ್ದು, ಬೆಳಗ್ಗೆ 10 ಗಂಟೆಗೆ ಅಂಬೇಡ್ಕರ್ ವೃತ್ತದಲ್ಲಿರುವ ಡಾ. ಬಿ.ಆರ್. ಅಂಬೇಡ್ಕರ್ ಅವರ ಪ್ರತಿಮೆಗೆ ಮತ್ತು ಬೆಳಿಗ್ಗೆ 10.30 ಕ್ಕೆ ಜಿಲ್ಲಾಧಿಕಾರಿಗಳ ಕಚೇರಿಯಲ್ಲಿ ಅವರ ಭಾವಚಿತ್ರಕ್ಕೆ ಗಣ್ಯರಿಂದ ಮಾಲಾರ್ಪಣೆ ಮಾಡಲಾಗುತ್ತದೆ ಎಂದು ಜಿಲ್ಲಾಧಿಕಾರಿ ಜಿ.ಎಂ. ಗಂಗಾಧರಸ್ವಾಮಿ ತಿಳಿಸಿದ್ದಾರೆ.

ಅಂಬೇಡ್ಕರ್ ವೃತ್ತದಲ್ಲಿ ಸ್ವಚ್ಚತೆಯನ್ನು ಮಾಡಲು ಮತ್ತು ಇದಕ್ಕೆ ಬೇಕಾದ ಸಿದ್ದತೆಯನ್ನು ಕೈಗೊಳ್ಳಲು ಪಾಲಿಕೆಯಿಂದ ಕ್ರಮ ವಹಿಸಲು ತಿಳಿಸಿದ್ದು ಸಾರ್ವ ಜನಿಕರು ಈ ಕಾರ್ಯಕ್ರಮಗಳಲ್ಲಿ ಭಾಗವಹಿಸಬಹುದೆಂದು ಅವರು ತಿಳಿಸಿದ್ದಾರೆ.

# ನಗರದಲ್ಲಿ ಇಂದು - ನಾಳೆ 'ಇಗ್ನಿಟ್ರಾನ್ 2k 24' ಕಾರ್ಯಕ್ರಮ

ದಾವಣಗೆರೆ, ಡಿ. 5- ನಗರದ ಜಿ.ಎಂ. ವಿಶ್ವವಿದ್ಯಾಲಯದ ವಿದ್ಯಾರ್ಥಿ ವ್ಯವಹಾರಗಳ ನಿರ್ದೇಶನಾಲಯ ಮತ್ತು ತಾಂತ್ರಿಕ ಸಮುದಾಯ ವಿಭಾಗದ ವತಿಯಿಂದ ನಾಳೆ ದಿನಾಂಕ 6ರ ಶುಕ್ರವಾರ, ನಾಡಿದ್ದು ದಿನಾಂಕ 7 ರ ಶನಿವಾರ ಎರಡು ದಿನಗಳ ಕಾಲ ತಾಂತ್ರಿಕತೆಯ ಕಲಿಕಾ, ಪ್ರತಿಭಾ ಕೌಶಲ್ಯದ ಹಬ್ಬವಾಗಿರುವ ಇಗ್ನಿಟ್ರಾನ್ 2k 24 ಕಾರ್ಯಕ್ರಮವನ್ನು ಹಮ್ಮಿಕೊಳ್ಳ ಲಾಗಿದೆ ಎಂದು ಉಪನಿರ್ದೇಶಕ ಎಸ್.ಟಿ. ಮಾರುತಿ ಸುದ್ದಿಗೋಷ್ಠಿಯಲ್ಲಿ ತಿಳಿಸಿದರು.

ನಾಳೆ ದಿನಾಂಕ 6 ರ ಶುಕ್ರವಾರ ಬೆಳಿಗ್ಗೆ 11 ಗಂಟೆಗೆ ಜಿಎಂ ತಾಂತ್ರಿಕ ಮಹಾವಿದ್ಯಾಲಯದ ಆವರಣದಲ್ಲಿ ಇಗ್ನಿಟ್ರಾನ್ 2k 24 ಕಾರ್ಯಕ್ರಮ ವನ್ನು ಡಿಎಕ್ಸ್‌ಸಿ ಲಕ್ಷ್ಮಟ್ ಇಂಜಿನಿಯರಿಂಗ್ ನಿರ್ದೇಶಕ ಬ್ರಹ್ಮಚೈತನ್ಯ ಚೆನ್ನಿವರ್ ಉದ್ಘಾಟಿಸಲಿದ್ದಾರೆ.

ಮುಖ್ಯ ಅತಿಥಿಗಳಾಗಿ ಜಿಎಂ ವಿವಿ ಕುಲಾಧಿಪತಿ ಜಿ.ಎಂ. ಲಿಂಗರಾಜ್, ಕುಲಪತಿ ಡಾ.ಎಸ್.ಆರ್. ಶಂಕಪಾಲ್, ಸಹ ಕುಲಪತಿ ಡಾ. ಹೆಚ್.ಡಿ. ಮಹೇಶಪ್ಪ, ಕುಲಸಚಿವ ಡಾ. ಬಿ.ಎನ್. ಸುನೀಲ್ ಕುಮಾರ್ ಭಾಗವಹಿಸಲಿದ್ದಾರೆ.

ಇಗ್ನಿಟ್ರಾನ್ 2k 24 ಪ್ರಯುಕ್ತ 9 ವಿವಿಧ ಸ್ಪರ್ಧೆಗಳು ನಡೆಯಲಿದ್ದು, ದಿನಾಂಕ 6 ರಂದು ಬೆಳಿಗ್ಗೆ 9 ರಿಂದ ದಿನಾಂಕ 7 ರಂದು ಬೆಳಿಗ್ಗೆ 9 ರವರೆಗೆ ಸತತವಾಗಿ 24 ಗಂಟೆಗಳ ಕಾಲ 'ಹ್ಯಾಕಥಾನ್' ನಡೆಯಲಿದ್ದು, 42 ತಂಡಗಳು, 168 ಸ್ಪರ್ಧಿಗಳು ಭಾಗವಹಿಸಲಿದ್ದಾರೆ ಎಂದು ಹೇಳಿದರು.

ಪತ್ರಿಕಾಗೋಷ್ಠಿಯಲ್ಲಿ ಜಿಎಂ ವಿವಿ ವಿದ್ಯಾರ್ಥಿ ವ್ಯವಹಾರಗಳ ನಿರ್ದೇಶನಾಲಯದ ನಿರ್ದೇಶಕ ಡಾ. ಹೆಚ್.ಎಸ್. ಕಿರಣ್ ಕುಮಾರ್, ತರಬೇತಿ ಮತ್ತು ಉದ್ಯೋಗ ವಿಭಾಗದ ನಿರ್ದೇಶಕ ಪ್ರೊ. ಟಿ.ಆರ್. ತೇಜಸ್ವಿ ಕಟ್ಟಿಮನಿ ಉಪಸ್ಥಿತರಿದ್ದರು.



# ಡಾ. ಬಿ.ಆರ್.ಅಂಬೇಡ್ಕರ್ ಜ್ಯೋತಿ ಯಾತ್ರೆಗೆ ಅದ್ಧೂರಿ ಸ್ವಾಗತ

ದಾವಣಗೆರೆ, ಡಿ. 5- ಕರ್ನಾಟಕ ದಲಿತ ಸಂಘಟನೆಗಳ ಒಕ್ಕೂಟದ ಜಿಲ್ಲಾ ಸಮಿತಿ ವತಿಯಿಂದ ಡಾ. ಬಿ. ಆರ್. ಅಂಬೇಡ್ಕರ್ ಅವರ 67 ನೇ ಮಹಾಪರಿನಿರ್ವಾಣದ ಪ್ರಯುಕ್ತ ಅಸ್ಪೃಶ್ಯತಾ ನಿವಾರಣೆಗಾಗಿ ಹಮ್ಮಿಕೊಂಡಿರುವ ಅಂಬೇಡ್ಕರ್ ಜ್ಯೋತಿ ಯಾತ್ರೆ ಇಂದು ರಾತ್ರಿ ನಗರಕ್ಕೆ ಆಗಮಿಸಿದ ಸಂದರ್ಭದಲ್ಲಿ ಅದ್ಧೂರಿಯಾಗಿ ಸ್ವಾಗತಿಸಿ, ಬೀಳ್ಕೊಡಲಾಯಿತು.

ರಾಮನಗರ ಜಿಲ್ಲೆಯ ಮಾಗಡಿ ತಾಲ್ಲೂಕಿನ ಕುದೂರು ಗ್ರಾಮದಿಂದ ಆರಂಭಗೊಂಡ ಅಂಬೇಡ್ಕರ್ ಜ್ಯೋತಿ ಯಾತ್ರೆ ನಾಳೆ ಮುಂಬೈನ ದಾದರ್‌ನ ಕಡಲ ತೀರ ಶಿವಾಜಿ ಪಾರ್ಕ್ ಚೈತನ್ಯ ಭೂಮಿಗೆ ತಲುಪಲಿದೆ.

ಅಂಬೇಡ್ಕರ್ ಸರ್ಕಲ್ ಬಳಿ ಡೊಳ್ಳು ಮತ್ತು ನಂದಿಕೋಲು ಕಲಾ ತಂಡಗಳೊಂದಿಗೆ ಅದ್ಧೂರಿಯಾಗಿ ಸ್ವಾಗತ ಕೋರಲಾಯಿತು.

ಈ ಸಂದರ್ಭದಲ್ಲಿ ಕರ್ನಾಟಕ ದಲಿತ ಸಂಘಟನೆಗಳ ಒಕ್ಕೂಟದ ಜಿಲ್ಲಾಧ್ಯಕ್ಷ ಸಿ. ಬಸವರಾಜ್ ಜ್ಯೋತಿ ಯಾತ್ರೆಗೆ ಶುಭ ಕೋರಿ ಮಾತನಾಡಿದರು.

ವಿವಿಧ ಸಂಘಟನೆಗಳ ಪದಾಧಿಕಾರಿಗಳಾದ ನರಸಿಂಹಪ್ಪ ಕುದೂರು, ರವಿಕುಮಾರ್, ಬಾಲಪ್ಪ, ಟಿ. ಹನುಮಂತಪ್ಪ, ಸೋಮಲಾಪುರದ ಹನುಮಂತಪ್ಪ, ಆವರಗೆರೆ ಚಂದ್ರು, ಐರಣಿ ಚಂದ್ರು, ಕೆ. ಬಾನಪ್ಪ, ಹೆಗ್ಗೆರೆ ರಂಗಪ್ಪ, ಬಿ. ಗುರುಮೂರ್ತಿ, ಬಿ.ಆರ್. ಮಂಜುನಾಥ್, ವಿಜಯ ಪುಟಗನಾಳ್, ಸಂತೋಷ್ ಕುಮಾರ್ ಹಾವೇರಿ, ಮಲ್ಲೇಶ್ ರಾಣೇಬೆನ್ನೂರು, ಮಂಜುನಾಥ್ ಕೊಪ್ಪಳ ಹರಿಹರ ಮತ್ತಿತರರು ಭಾಗವಹಿಸಿದ್ದರು.

## ಓದುಗರ ಪತ್ರ

### ಸೌಲಭ್ಯವಿಲ್ಲದ 'ಶಿವ-ಪಾರ್ವತಿ' ಬಡಾವಣೆ

**ಮಾನ್ಯರೇ,**

ಶಾಮನೂರು ಶಿವಪಾರ್ವತಿ ಬಡಾವಣೆ ವೇಗವಾಗಿ ಬೆಳೆಯುತ್ತಿದ್ದು, ಯಾವುದೇ ಅಭಿವೃದ್ಧಿ ಆಗಿರುವುದಿಲ್ಲ. ಪಾಲಿಕೆ ಆಯುಕ್ತರಿಗೆ ಈ ಬಗ್ಗೆ ಸಾಕಷ್ಟು ಬಾರಿ ಮನವಿ ಮಾಡಿದರೂ ಯಾವುದೇ ಅಭಿವೃದ್ಧಿ ಕಂಡಿಲ್ಲ. ಜಲಸಿರಿ ನೀರು, ಬೀದಿ ದೀಪ. ರಸ್ತೆ ಸೇರಿದಂತೆ ಯಾವುದೇ ಕೆಲಸ ಮಾಡಲು ಸಾಧ್ಯವಾಗಿಲ್ಲ. ಇದಕ್ಕೆ ಪಾಲಿಕೆ ಅಧಿಕಾರಿಗಳ ಬೇಜವಾಬ್ದಾರಿಯೇ ಕಾರಣವಾಗಿದೆ.. ಆದ್ದರಿಂದ ಈ ಭಾಗದ ಶಾಸಕರಾದ ಮಾನ್ಯ ಮಂತ್ರಿಗಳು ಹಾಗೂ ಸಂಸದರು ಪಾಲಿಕೆ ಅಧಿಕಾರಿಗಳಿಗೆ ಹೇಳಿ ಆಗತ್ಯವಾದ ಮೂಲಭೂತ ಕೆಲಸಗಳನ್ನು ಮಾಡಿಸಬೇಕಾಗಿ ವಿನಂತಿ.

**-ನೊಂದ ಬಡಾವಣೆ ನಾಗರಿಕರು**

### ಹದಡಿ ರಸ್ತೆ ವಿಭಜಕಗಳಿಗೆ ರಿಫ್ಲೆಕ್ಟರ್ ಅಳವಡಿಸಲು ಕೋರಿಕೆ

**ಮಾನ್ಯರೇ,**

ದಾವಣಗೆರೆ - ನಗರದ ಹದಡಿ ರಸ್ತೆ ಅತೀ ಹೆಚ್ಚು ವಾಹನಗಳು ಓಡಾಡುವ ರಸ್ತೆ. ಇಲ್ಲಿ ರಸ್ತೆ ವಿಭಜಕಗಳಿವೆ. ಆದರೆ ಕತ್ತಲಿನಲ್ಲಿ ರಸ್ತೆ ವಿಭಜಕಗಳು ಸರಿಯಾಗಿ ಕಾಣದೇ ಅಪಘಾತವಾಗುವ ಸಂಭವ ಹೆಚ್ಚು. ಹಾಗಾಗಿ ಈ ವಿಭಜಕಗಳಿಗೆ ರಿಫ್ಲೆಕ್ಟರ್‌ಗಳನ್ನು ಅಳವಡಿಸಬೇಕಾಗಿದೆ. ಮಹಾನಗರ ಪಾಲಿಕೆ ಅಧಿಕಾರಿಗಳು ಇದನ್ನು ಗಂಭೀರವಾಗಿ ಪರಿಗಣಿಸಿ ಸೂಕ್ತ ಕ್ರಮ ಕೈಗೊಳ್ಳುವಂತೆ ಕೋರಲಾಗಿದೆ.

**- ಪದ್ಮಲತಾ , ದಾವಣಗೆರೆ.**

## ಹರಿಹರ ಹಿಂದೂ ರುದ್ರಭೂಮಿಯಲ್ಲಿ ಇಂದು ಮೌಢ್ಯ ವಿರೋಧಿ ಪರಿವರ್ತನಾ ದಿನಾಚರಣೆ

ಕರ್ನಾಟಕ ದಲಿತ ಸಂಘರ್ಷ ಸಮಿತಿ (ಪ್ರೊ. ಬಿ. ಕೃಷ್ಣಪ್ಪ ಬಣ) ಹಾಗೂ ಮಾನವ ಬಂಧುತ್ವ ವೇದಿಕೆ ವತಿಯಿಂದ ಹಿಂದೂ ರುದ್ರಭೂಮಿಯಲ್ಲಿ ಇಂದು ಬೆಳಿಗ್ಗೆ 11 ಗಂಟೆಗೆ ಡಾ. ಅಂಬೇಡ್ಕರ್ ಅವರ 68 ನೇ ಮಹಾಪರಿನಿಬ್ಬಣ ಸದ್ಭಾವನಾ ದಿನವನ್ನು ಮೌಢ್ಯ ವಿರೋಧಿ ಪರಿವರ್ತನಾ ದಿನವನ್ನಾಗಿ ಆಚರಿಸಲಾಗುವುದು.

ಮಾನವ ಬಂಧುತ್ವ ವೇದಿಕೆ ರಾಜ್ಯ ಸಂಚಾಲಕ ಡಾ.ಎ.ಬಿ. ರಾಮಚಂದ್ರಪ್ಪ ಉಪನ್ಯಾಸ ನೀಡುವರು. ಕರ್ನಾಟಕ ದಲಿತ ಸಂಘರ್ಷ ಸಮಿತಿ ಹರಿಹರ ತಾಲ್ಲೂಕು ಅಧ್ಯಕ್ಷ ಎಂ.ಮಂಜುನಾಥ್ ಅಧ್ಯಕ್ಷತೆ ವಹಿಸಲಿದ್ದಾರೆ.

ರಾಜ್ಯ ಸಂಘಟನಾ ಸಂಚಾಲಕ ಹೆಗ್ಗೆರೆ ರಂಗಪ್ಪ, ಕಾಂಗ್ರೆಸ್ ಮುಖಂಡ ನಂದಿಗಾವಿ ಶ್ರೀನಿವಾಸ್, ನಗರಸಭೆ ಅಧ್ಯಕ್ಷೆ ಕವಿತಾ ಮಾರುತಿ ಬೇಡರ್, ಸಿಪಿಐ ದೇವಾನಂದ್, ಕಾರ್ಮಿಕ ಮುಖಂಡ ಹೆಚ್.ಕೆ. ಕೊಟ್ರಪ್ಪ, ದಲಿತ ಮುಖಂಡ ಎಂ.ಬಿ. ಅಣ್ಣಪ್ಪ, ಸಂತೋಷ್ ನೋಟದ, ಮಂಜುನಾಥ್ ಕುಪ್ಪೇಲೂರು, ಸುಭಾಷ್ ಚಂದ್ರ ಬೋಸ್, ಆನಂದ, ಮಂಜುನಾಥ ದೊಡ್ಮನಿ, ಜಿ.ಎಂ. ಮಂಜಪ್ಪ, ಬಿ.ಕೆ. ವಿಶ್ವ, ಧನರಾಜ್, ಭರತ್ ಮುದೇನೂರು, ನಾಗರಾಜ್ ರಾಮತೀರ್ಥ ಪಾರ್ವತಿ ಬೋರಯ್ಯ ಮತ್ತಿತರರು ಭಾಗವಹಿಸಲಿದ್ದಾರೆ.

## ಜಿಲ್ಲಾ ಮಟ್ಟದ ಯುವಜನೋತ್ಸವಕ್ಕೆ ಆಯ್ಕೆ

ದಾವಣಗೆರೆ, ಡಿ.5- ಜಿಲ್ಲಾಡಳಿತ, ಜಿ.ಪಂ, ನೆಹರು ಯುವ ಕೇಂದ್ರ, ಎ.ವಿ.ಕೆ. ಕಾಲೇಜು ಹಾಗೂ ಯುವ ಸಬಲೀಕರಣ ಮತ್ತು ಕ್ರೀಡಾ ಇಲಾಖೆ ಇವರುಗಳ ಸಂಯುಕ್ತಾಶ್ರಯದಲ್ಲಿ ಇದೇ ದಿನಾಂಕ 10 ರಂದು ನಗರದ ಎ.ವಿ. ಕಮಲಮ್ಮ ಮಹಿಳಾ ಕಾಲೇಜು ಇಲ್ಲಿ ಜಿಲ್ಲಾ ಮಟ್ಟದ ಯುವಜನೋತ್ಸವ ಆಯ್ಕೆ ಪ್ರಕ್ರಿಯೆ ಹಮ್ಮಿಕೊಳ್ಳಲಾಗಿದೆ.

ಜಿಲ್ಲೆಯವರಾಗಿದ್ದು 15 ರಿಂದ 29 ವರ್ಷ ವಯೋಮಾನದವರಾಗಿರಬೇಕು.

ಹೆಚ್ಚಿನ ಮಾಹಿತಿಗಾಗಿ ಸಹಾಯಕ ನಿರ್ದೇಶಕರ ಕಾರ್ಯಾಲಯ, ಯುವ ಸಬಲೀಕರಣ ಮತ್ತು ಕ್ರೀಡಾ ಇಲಾಖೆ, ಜಿಲ್ಲಾ ಕ್ರೀಡಾಂಗಣ, ದಾವಣಗೆರೆ ಕಛೇರಿಗೆ ಸಂಪರ್ಕಿಸುವುದು.

ದೂ.ಸಂ: 08192-237480 ಸಂಪರ್ಕಿಸಲು ಸಹಾಯಕ ನಿರ್ದೇಶಕರಾದ ರೇಣುಕಾ ದೇವಿ ತಿಳಿಸಿದ್ದಾರೆ.

# ಮಕ್ಕಳ ರಕ್ಷಣೆ ಎಲ್ಲಾ ಇಲಾಖೆ ಅಧಿಕಾರಿಗಳ ಕರ್ತವ್ಯ

ದಾವಣಗೆರೆ, ಡಿ.5- ಮಕ್ಕಳೇ ನಮ್ಮ ದೇಶದ ಸಂಪತ್ತಾಗಿದ್ದು ಮಕ್ಕಳ ಮೇಲಿನ ದೌರ್ಜನ್ಯ ತಡೆಗಟ್ಟಲು ಮಕ್ಕಳ ಸಹಾಯವಾಣಿಗೆ ಸಂಪರ್ಕಿಸುವಂತೆ ರಾಜ್ಯ ಮಕ್ಕಳ ರಕ್ಷಣಾ ಆಯೋಗದ ಸದಸ್ಯೆ ಅಪರ್ಣ ಎಂ.ಕೊಳ್ಳ ತಿಳಿಸಿದರು.

ಗುರುವಾರ ಜಿಲ್ಲಾಧಿಕಾರಿಗಳ ಕಚೇರಿ ತುಂಗಭದ್ರಾ ಸಭಾಂಗಣದಲ್ಲಿ ಮಹಿಳಾ ಮತ್ತು ಮಕ್ಕಳ ಅಭಿವೃದ್ಧಿ ಇಲಾಖೆಯಿಂದ ಜಿಲ್ಲಾ ಮತ್ತು ತಾಲ್ಲೂಕು ಮಟ್ಟದ ಅಧಿಕಾರಿ, ಸಿಬ್ಬಂದಿಗಳಿಗೆ ಏರ್ಪಡಿಸಲಾದ ಮಕ್ಕಳ ಸಂರಕ್ಷಣಾ ಕಾಯ್ದೆಗಳು ಹಾಗೂ ಮಕ್ಕಳೊಂದಿಗೆ ನಡೆಸಿದ ಸಂವಾದದಲ್ಲಿ ಭಾಗವಹಿಸಿ, ಮಾತನಾಡಿದರು.

ಮಕ್ಕಳಿಗೆ ಸಂಬಂಧಿಸಿದ ಯಾವುದೇ ಅಹಿತಕರ ಘಟನೆಗಳು ನಡೆದಿದ್ದಲ್ಲಿ ಅಥವಾ ಕಂಡುಬಂದಲ್ಲಿ ಕೂಡಲೇ ಮಕ್ಕಳ ಸಹಾಯವಾಣಿ 1098 ಹಾಗೂ 112 ಕ್ಕೆ ಕರೆ ಮಾಡಬೇಕು. ತಕ್ಷಣ ಮಕ್ಕಳ ಸಂರಕ್ಷಣೆ ಮಾಡಲು ಕಾರ್ಯಪ್ರವೃತ್ತರಾಗುವುದು ಎಲ್ಲಾ ಜಿಲ್ಲಾ ಹಾಗೂ ತಾಲ್ಲೂಕು ಮಟ್ಟದ ಅಧಿಕಾರಿ ಹಾಗೂ ಸಿಬ್ಬಂದಿಗಳ ಆದ್ಯ ಕರ್ತವ್ಯ ವಾಗಿರುತ್ತದೆ.

ಮಕ್ಕಳು ಪ್ರತಿ ದಿನ ಶಾಲೆಗೆ, ಕಾಲೇಜಿಗೆ ಹೋಗಲು ಬಸ್ ವ್ಯವಸ್ಥೆ ಕಲ್ಪಿಸಿಕೊಡಲು ಹಾಗೂ ಹಾಸ್ಟೆಲ್ ಗಳಲ್ಲಿ ಗ್ರಂಥಾಲಯ ಗಳ ವ್ಯವಸ್ಥೆ ಕಲ್ಪಿಸಿ ಕೊಡುವಂತೆ ಹಾಗೂ ಇನ್ನಿತರೆ ಅಹವಾಲು ಗಳನ್ನು ಎಲ್ಲಾ ಜಿಲ್ಲಾ ಮಟ್ಟದ ಅಧಿಕಾರಿಗಳು ಮುಂದೆ ವ್ಯಕ್ತ ಪಡಿಸಿದ್ದು ಕ್ರಮ ಕೈಗೊಳ್ಳಲು ಅಧಿಕಾರಿಗಳಿಗೆ ತಿಳಿಸಿದರು.



ಮಕ್ಕಳು ನಿರ್ಭಯವಾಗಿ ಪೋಕ್ಸೋ ಕಾಯ್ದೆ, ಬಾಲ್ಯ ವಿವಾಹ ಕಾಯ್ದೆ, ಜೆಜೆ ಕಾಯ್ದೆ ಹಾಗೂ ಕರ್ನಾಟಕ ರಾಜ್ಯ ಮಕ್ಕಳ ರಕ್ಷಣಾ ಆಯೋಗದ ಜವಾಬ್ದಾರಿಗಳ ಮತ್ತು ಮಕ್ಕಳ ಕಲ್ಯಾಣ ಸಮಿತಿ ಹಾಗೂ ಬಾಲ ಮಂಡಳಿಯ ಕುರಿತು ಜಿಲ್ಲಾ ಮಟ್ಟದ ಎಲ್ಲಾ ಅಧಿಕಾರಿಗಳೊಂದಿಗೆ ಚರ್ಚಿಸಲಾಯಿತು. ಮಕ್ಕಳು ಉತ್ಸಾಹದಿಂದ ಅಹವಾಲು ಹಾಗೂ ಸಂವಾದ ಕಾರ್ಯಕ್ರಮದಲ್ಲಿ ಭಾಗವಹಿಸಿದರು.

**ರಾಜ್ಯ ಮಕ್ಕಳ ರಕ್ಷಣಾ ಆಯೋಗದ ಸದಸ್ಯೆ ಅಪರ್ಣ ಎಂ.ಕೊಳ್ಳ**

ಕಾರ್ಯಕ್ರಮದಲ್ಲಿ ಹಿರಿಯ ಸಿವಿಲ್ ನ್ಯಾಯಾಧೀಶರು ಹಾಗೂ ಜಿಲ್ಲಾ ಕಾನೂನು ಸೇವಾ ಪ್ರಾಧಿಕಾರದ ಸದಸ್ಯ ಕಾರ್ಯದರ್ಶಿ ಮಹಾವೀರ್ ಮ.ಕರೆಣ್ಣವರ, ಹೆಚ್ಚುವರಿ ಪೊಲೀಸ್ ಅಧೀಕ್ಷಕ ವಿಜಯಕುಮಾರ್ ಎಂ.ಸಂತೋಷ್, ಮಹಿಳಾ ಮತ್ತು ಮಕ್ಕಳ ಅಭಿವೃದ್ಧಿ ಇಲಾಖೆ ಉಪನಿರ್ದೇಶಕ ರಾಜಾ ನಾಯಕ್, ಜಿಲ್ಲಾ ಆರೋಗ್ಯ ಮತ್ತು ಕುಟುಂಬ ಕಲ್ಯಾಣಾಧಿಕಾರಿ ಡಾ.ಷಣ್ಮುಖಪ್ಪ ಮತ್ತು ಇತರರು ಕಾರ್ಯಕ್ರಮದಲ್ಲಿ ಉಪಸ್ಥಿತರಿದ್ದರು.

# ಮಕ್ಕಳನ್ನು ದುಡಿಸಿಕೊಂಡರೆ ಶಿಕ್ಷಾರ್ಹ ಅಪರಾಧ



ದಾವಣಗೆರೆ, ಡಿ.3- ಹದಿನೆಂಟು ವರ್ಷದೊಳಗಿನ ಕಿಶೋರರನ್ನು ಅಪಾಯಕಾರಿ ಉದ್ದಿಮೆಗಳಲ್ಲಿ ಕೆಲಸಕ್ಕೆ ನೇಮಿಸಿಕೊಳ್ಳುವುದು ಶಿಕ್ಷಾರ್ಹ ಅಪರಾಧವಾಗಿದೆ ಎಂದು ಜಿಲ್ಲಾಧಿಕಾರಿ ಜಿ.ಎಂ. ಗಂಗಾಧರಸ್ವಾಮಿ ತಿಳಿಸಿದ್ದಾರೆ.

ಹೋಟೆಲ್, ಗ್ಯಾರೇಜ್, ವಾಣಿಜ್ಯ ಸಂಸ್ಥೆಗಳು, ಮಂಡಕ್ಕಿ ಭಟ್ಟಿ, ಇಟ್ಟಿಗೆ ಭಟ್ಟಿ, ಕಲ್ಲಿನ ಕೋರೆಗಳಲ್ಲಿ ಹಾಗೂ ಬಾರ್ ಮತ್ತು ರೆಸ್ಟೋರೆಂಟ್ ಸೇರಿದಂತೆ ಇತರೆ ಅಂಗಡಿಗಳಲ್ಲಿ 14 ವರ್ಷಕ್ಕಿಂತ ಕಡಿಮೆ ವಯಸ್ಸಿನ ಮಕ್ಕಳನ್ನು ಕೆಲಸಕ್ಕೆ ಸೇರಿಸಿಕೊಂಡಲ್ಲಿ ಕಾನೂನು ರೀತಿಯಲ್ಲಿ ಶಿಕ್ಷೆಗೆ ಗುರಿ ಪಡಿಸಲಾಗುವುದು ಎಂದು ತಿಳಿಸಿದ್ದಾರೆ.

ಕಾನೂನು ಉಲ್ಲಂಘಿಸಿ 18 ವರ್ಷದೊಳಗಿನ ಕಿಶೋರರನ್ನು ಕೆಲಸಕ್ಕೆ ಸೇರಿಸಿಕೊಂಡಲ್ಲಿ ಮೊದಲ ಅಪರಾಧಕ್ಕೆ ಮಾಲೀಕರಿಗೆ 6 ತಿಂಗಳಿಂದ 2 ವರ್ಷಗಳವರೆಗೆ ಜೈಲು ಶಿಕ್ಷೆ ಅಥವಾ 20 ಸಾವಿರ ರೂ.ಗಳಿಂದ 50 ಸಾವಿರ ರೂ.ಗಳ ವರೆಗೆ ದಂಡ ಅಥವಾ ಎರಡನ್ನೂ ವಿಧಿಸಲಾಗುವುದು.

ಪುನರಾವರ್ತಿತ ಅಪರಾಧಕ್ಕೆ 1ವರ್ಷದಿಂದ 3ವರ್ಷಗಳವರೆಗೆ ಜೈಲು ಶಿಕ್ಷೆ, ಬಾಲ್ಯಾವಸ್ಥೆ ಹಾಗೂ ಕಿಶೋರಾವಸ್ಥೆ ಕಾರ್ಮಿಕ ಪದ್ಧತಿಯನ್ನು ಪ್ರೋತ್ಸಾಹಿಸುವ ಪೋಷಕರಿಗೂ ಸಹ ಲಘು ಶಿಕ್ಷಾ ಅವಕಾಶವಿದ್ದು, ಪುನರಾವರ್ತಿತ ಅಪರಾಧಕ್ಕೆ 10 ಸಾವಿರ ರೂ.ಗಳ ದಂಡ ವಿಧಿಸಲಾಗುವುದು.

14 ಹಾಗೂ 18 ವರ್ಷದೊಳಗಿನ ಮಕ್ಕಳು ಯಾವುದೇ ಉದ್ಯೋಗ ಪ್ರಕ್ರಿಯೆ ಅಥವಾ ಅಪಾಯಕಾರಿ ಉದ್ದಿಮೆಗಳಲ್ಲಿ ಕೆಲಸ ಮಾಡುವುದು ಕಂಡು ಬಂದಲ್ಲಿ ತಕ್ಷಣವೇ ಮಕ್ಕಳ ಸಹಾಯವಾಣಿ 1098 ಅಥವಾ 08192-230094, 237332 ತಿಳಿಸುವಂತೆ ಮನವಿ ಮಾಡಿದ್ದಾರೆ.


## ಚಿರಸ್ಮರಣೆ





ಶ್ರೀ ನಾರಾಯಣ ಎಂ. ಶೇಟ್
ಜನನ : 11.12.1948 ಮರಣ : 6.12.2004
20ನೇ ವರ್ಷದ ಚಿರಸ್ಮರಣೆ

ಶ್ರೀಮತಿ ಸುಧಾ ನಾರಾಯಣ ಶೇಟ್
ಜನನ : 17.04.1957 ಮರಣ : 04.12.2022
2ನೇ ವರ್ಷದ ಚಿರಸ್ಮರಣೆ

ಸದಾ ನಿಮ್ಮ ಸ್ಮರಣೆ ಹಾಗೂ ನೀವು ಹಾಕಿಕೊಟ್ಟ ಮಾರ್ಗದಲ್ಲಿ ಮುನ್ನಡೆಯುತ್ತಿರುವ,

ಮಕ್ಕಳು, ಸಹೋದರ-ಸಹೋದರಿ, ಅಳಿಯಂದಿರು, ಸೊಸೆಯಂದಿರು, ಮೊಮ್ಮಕ್ಕಳು ಹಾಗೂ ಬಂಧು-ಮಿತ್ರರು.

**ದೀಪಕ್ ಜ್ಯುಯಲರ್ಸ್**
**ಡಿ.ಎನ್.ಎಸ್. ಜ್ಯುಯಲರ್ಸ್**

ಗಡಿಯಾರ ಕಂಬದ ಹತ್ತಿರ, ಬಿ.ಟಿ. ಗಲ್ಲಿ, ದಾವಣಗೆರೆ. Ph. : 08192-257463


# ವಕೀಲರು ಆಧುನಿಕ ತಂತ್ರಜ್ಞಾನ ಕೌಶಲ್ಯ ಅಳವಡಿಸಿಕೊಳ್ಳಿ

ಜಗಳೂರು, ಡಿ. 5- ವಿಜ್ಞಾನ ಹಾಗೂ ತಂತ್ರಜ್ಞಾನ ದಿನೇ ದಿನೇ ಬೆಳೆಯುತ್ತಿದೆ. 'ಕೃತಕ ಬುದ್ದಿಮತ್ತೆ' ಯನ್ನು ನ್ಯಾಯಾಂಗ ಕ್ಷೇತ್ರದಲ್ಲಿ ಸೃಜನಾತ್ಮಕವಾಗಿ ಅಳವಡಿಸಿಕೊಳ್ಳುವ ಬಗ್ಗೆ ಚಿಂತಿಸಬೇಕಿದೆ ಎಂದು ಸಿವಿಲ್ ಹಿರಿಯ ಶ್ರೇಣಿ ನ್ಯಾಯಾಧೀಶರಾದ ಎಚ್.ಕೆ. ರೇಷ್ಮಾ ಅಭಿಪ್ರಾಯಪಟ್ಟರು.



**ನ್ಯಾ. ಎಚ್.ಕೆ. ರೇಷ್ಮಾ**

ಪಟ್ಟಣದಲ್ಲಿ ತಾಲ್ಲೂಕು ವಕೀಲರ ಸಂಘದ ವತಿಯಿಂದ ಬುಧವಾರ ಆಯೋಜಿಸಲಾಗಿದ್ದ ವಕೀಲರ ದಿನಾಚರಣೆ ಕಾರ್ಯಕ್ರಮದಲ್ಲಿ ಹಿರಿಯ ವಕೀಲರಿಗೆ ಸನ್ಮಾನಿಸಿ ಅವರು ಮಾತನಾಡಿದರು.

ವಕೀಲರು ತಮ್ಮ ವೃತ್ತಿಯಲ್ಲಿ ಆಧುನಿಕ ತಂತ್ರಜ್ಞಾನದ ಕೌಶಲ್ಯಗಳನ್ನು ಅಳವಡಿಸಿಕೊಳ್ಳುವ ಮೂಲಕ ಹೆಚ್ಚಿನ ಯಶಸ್ಸು ಪಡೆಯಲು ಸಾಧ್ಯವಾಗುತ್ತದೆ. ಹೆಚ್ಚು ಓದಿರುವ ನಾವುಗಳೇ ಬುದ್ದಿವಂತರು ಎನ್ನುವ ಅಹಂ ಯಾರಿಗೂ ಬೇಡ. ನಮಗಿಂತಲೂ ಹೆಚ್ಚು ತಿಳಿದವರು, ಜ್ಞಾನಿಗಳೂ ಇದ್ದಾರೆ. ಯಾವುದೇ ವ್ಯಕ್ತಿಯ ನಡತೆ ಮತ್ತು ಸಂಸ್ಕಾರ ಆ ವ್ಯಕ್ತಿಯ ಯಶಸ್ಸನ್ನು ನಿರ್ಧರಿಸುತ್ತದೆ. ಹಿರಿಯ ವಕೀಲರು ಹಾಗೂ ಕಿರಿಯ ವಕೀಲರ ನಡುವೆ ಪರಸ್ಪರ ಗೌರವ ಹಾಗೂ ಮಾರ್ಗದರ್ಶನ ಮುಖ್ಯವಾಗಬೇಕು ಎಂದು ಅವರು ಹೇಳಿದರು.

ಸಿವಿಲ್ ಮತ್ತು ಜೆ.ಎಂ.ಎಫ್. ನ್ಯಾಯಾಲಯದ ನ್ಯಾಯಾಧೀಶ ಆರ್. ಚೇತನ್ ಮಾತನಾಡಿ, ವಕೀಲ ವೃತ್ತಿ ಜಗತ್ತಿನಲ್ಲೇ ನೋಬಲ್ ವೃತ್ತಿ ಎಂದು ಮನ್ನಣೆ ಗಳಿಸಿದೆ. ಯುವ ವಕೀಲರು ತಮ್ಮ ವೃತ್ತಿಯಲ್ಲಿ ಯಶಸ್ಸು ಪಡೆಯಬೇಕಿದ್ದಲ್ಲಿ ಕಠಿಣ ಪರಿಶ್ರಮ ಮತ್ತು ಆಳವಾದ ಅಧ್ಯಯನ ಮುಖ್ಯವಾಗುತ್ತದೆ. ವಕೀಲ ವೃತ್ತಿಯಲ್ಲಿ ಆರಂಭದಲ್ಲಿ ಪರಿಶ್ರಮ ಪಟ್ಟಲ್ಲಿ ಎರಡನೇ ಹಂತದಲ್ಲಿ ಹಣ ಮತ್ತು ಗೌರವ ತಾನಾಗೇ ಹುಡುಕಿಕೊಂಡು ಬರುತ್ತದೆ. ವೃತ್ತಿಯಲ್ಲಿ ಕೇವಲ ಹಣ ಮುಖ್ಯವಲ್ಲ. ಪ್ರತಿಯೊಬ್ಬರೂ ಸೇವಾ ಮನೋಭಾವ ಮೈಗೂಡಿಸಿಕೊಳ್ಳಬೇಕು ಎಂದು ಸಲಹೆ ನೀಡಿದರು.

ಕಿರಿಯ ವಕೀಲರ ಸಮುದಾಯದಲ್ಲಿ ಇಂದಿನ ದಿನಗಳಲ್ಲಿ ಓದಿನ ಹವ್ಯಾಸ ಕಡಿಮೆಯಾಗುತ್ತಿರು ವುದು ವಿಪರ್ಯಾಸ. ಯುವ ವಕೀಲರು ನ್ಯಾಯಾಧೀಶರ ಹುದ್ದೆಗಳಿಗೆ ಸ್ಪರ್ಧಾತ್ಮಕ ಪರೀಕ್ಷೆ ಬರೆಯುವುದನ್ನು ಕರಗತ ಮಾಡಿಕೊಳ್ಳಬೇಕು. ಒಂದು ವೇಳೆ ಪರೀಕ್ಷೆ ಯಲ್ಲಿ ನ್ಯಾಯಾಧೀಶರಾಗಿ ಆಯ್ಕೆಯಾಗದಿದ್ದರೂ ಸಹ ಮುಂದಿನ ದಿನಗಳಲ್ಲಿ ವೃತ್ತಿಗೆ ಸಹಾಯಕವಾಗುತ್ತದೆ. ಓದು ಎಂದಿಗೂ ವ್ಯರ್ಥವಲ್ಲ ಎಂದರು.

25 ವರ್ಷಕ್ಕೂ ಹೆಚ್ಚು ಅವಧಿಯಿಂದ ವಕೀಲ ವೃತ್ತಿಯಲ್ಲಿ ಸೇವೆ ಸಲ್ಲಿಸುತ್ತಿರುವ 22 ವಕೀಲರಿಗೆ ಇಂದು ಸಂಘದಿಂದ ಗೌರವಿಸ ಲಾಗಿದೆ ಎಂದು ತಾಲ್ಲೂಕು ವಕೀಲರ ಸಂಘದ ಅಧ್ಯಕ್ಷ ಮರೇನಹಳ್ಳಿ ಬಸವರಾಜ್ ಹೇಳಿದರು.

ವಕೀಲರ ಸಂಘದ ಕಾರ್ಯದರ್ಶಿ ಎ.ಕೆ. ಪರಶುರಾಮಪ್ಪ, ಗೌರವಾಧ್ಯಕ್ಷ ಜಿ.ಎಸ್. ಪ್ರಕಾಶ್, ಸಹಾಯಕ ಸರ್ಕಾರಿ ವಕೀಲ ಮಂಜುನಾಥ್, ಹಿರಿಯ ವಕೀಲರಾದ ಕೆ. ಎನ್. ಪರಮೇಶ್ವರಪ್ಪ, ಟಿ.ಸ್ವಾಮಿ, ಕೆ.ಎಂ. ಬಸವರಾಜಪ್ಪ, ವೈ.ಹನುಮಂತಪ್ಪ, ಡಿ. ಪ್ರಕಾಶ್, ಡಿ. ಶ್ರೀನಿವಾಸ್, ಎಚ್. ಬಸವರಾಜಪ್ಪ, ಇ.ಓಂಕಾರಪ್ಪ, ಎಸ್. ಹಾಲಪ್ಪ, ಆರ್. ಓಬಳೇಶ್, ಎನ್.ಜಿ. ಮಾದಪ್ಪ, ಎಸ್.ಐ. ಕುಂಬಾರ್, ಶರಣಪ್ಪ, ಕೆ.ವಿ. ರುದ್ರೇಶ್, ಪಿ.ವಿ. ಕರಿಬಸವ ಸ್ವಾಮಿ ಇದ್ದರು.

## 13ಕ್ಕೆ ಶ್ರೀ ಉತ್ಸವಾಂಭದೇವಿ ದೇವಿಯ ಮಹಾರುದ್ರಾಭಿಷೇಕ ಮತ್ತು ಕಾರ್ತಿಕ




ದಾವಣಗೆರೆ, ಡಿ.5- ನಗರದ ವಸಂತ ರಸ್ತೆಯಲ್ಲಿನ ಶ್ರೀ ಉತ್ಸವಾಂಭದೇವಿ ದೇವಸ್ಥಾನದ ಶ್ರೀ ಚೌಡೇಶ್ವರಿದೇವಿ, ಶ್ರೀ ಗಣೇಶ, ಶ್ರೀ ಆದಿಶಕ್ತಿ ದೇವಿ, ಶ್ರೀ ಮಹಾಲಕ್ಷ್ಮಿದೇವಿ ದೇವರುಗಳ ಮಹಾರುದ್ರಾಭಿಷೇಕ ಮತ್ತು ಕಾರ್ತಿಕ ದೀಪೋತ್ಸವವನ್ನು ಇದೇ ದಿನಾಂಕ 13 ರ ಶುಕ್ರವಾರ ನೆರವೇರಿಸಲಾಗುವುದು. ಭಕ್ತಾದಿಗಳಿಂದ ತಾಯಿ ಅವರಿಗೆ ಬೆಳಗಿನ ಜಾವ 4.30ಕ್ಕೆ ಮಹಾರುದ್ರಾಭಿಷೇಕ ಹಾಗೂ ಸಂಜೆ 7.30ಕ್ಕೆ ಕಾರ್ತಿಕ ದೀಪೋತ್ಸವ ನೆರವೇರಿಸಲಾಗುವುದು.

## ವಿಶೇಷಚೇತನರು ತ್ರಿಚಕ್ರವಾಹನ ಪಡೆಯಲು ಹಣ ನೀಡದಂತೆ ಮನವಿ

ದಾವಣಗೆರೆ, ಡಿ.5- 2023-24ನೇ ಸಾಲಿನ ತ್ರಿಚಕ್ರ ವಾಹನದ ಆಯ್ಕೆ ಪ್ರಕ್ರಿಯೆ ಮುಗಿದಿದ್ದು, ವಿಮೆ ಮುಂತಾದ ದಾಖಲಾತಿಗಳು ಫಲಾನುಭವಿಗಳ ಹೆಸರಿನಲ್ಲಿ ನೋಂದಾಯಿತವಾಗಿರುತ್ತದೆ. ವಿಶ್ವ ವಿಕಲಚೇತನರ ದಿನಾಚರಣೆಯ ಪ್ರಯುಕ್ತ ವಿಧಾನಸಭಾ ಕ್ಷೇತ್ರವಾರು ತಲಾ ಇಬ್ಬರು ಫಲಾನುಭವಿಗಳಂತೆ 14 ಫಲಾನುಭವಿಗಳಿಗೆ ಗಣ್ಯರ ಸಮ್ಮುಖದಲ್ಲಿ ಯಂತ್ರಚಾಲಿತ ತ್ರಿಚಕ್ರ ವಾಹನವನ್ನು ವಿತರಿಸಲಾಗಿದೆ. ಉಳಿದ ತ್ರಿಚಕ್ರ ವಾಹನಗಳ ಆಯಾ ವಿಧಾನಸಭಾ ಕ್ಷೇತ್ರದ ಶಾಸಕರಿಂದ ದಿನಾಂಕ ಪಡೆದು ವಿತರಿಸಲಾಗುತ್ತದೆ.

ವಾಹನ ಪಡೆಯುವ ಫಲಾನುಭವಿಗಳು ಕಚೇರಿಯಲ್ಲಿ ಯಾರಿಗೂ ಹಣ ಸಂದಾಯ ಮಾಡದಂತೆ, ಒಂದು ವೇಳೆ ಇಲಾಖೆ ಅಧಿಕಾರಿಗಳು ಹಾಗೂ ಸಿಬ್ಬಂದಿ ವರ್ಗದವರ ಹೆಸರಿನಲ್ಲಿ ಮಧ್ಯವರ್ತಿಗಳು ಹಣ ಕೇಳಿದ್ದಲ್ಲಿ ಈ ಕಚೇರಿಗೆ ದೂರು ಸಲ್ಲಿಸಬೇಕೆಂದು ಜಿಲ್ಲಾ ವಿಕಲಚೇತನರ ಹಾಗೂ ಹಿರಿಯ ನಾಗರಿಕರ ಸಬಲೀಕರಣಾಧಿಕಾರಿ ಡಾ।। ಕೆ.ಕೆ ಪ್ರಕಾಶ್ ತಿಳಿಸಿದ್ದಾರೆ.

## ಆಶ್ರಯ ಸಮಿತಿ ಸದಸ್ಯರಾಗಿ ಮಾರುತಿ



ದಾವಣಗೆರೆ, ಡಿ.5- ನಗರದ ಆಶ್ರಯ ಸಮಿತಿ ಸದಸ್ಯರನ್ನಾಗಿ ಬೇತೂರು ರಸ್ತೆ ದೇವರಾಜ ನಗರದ ಹೆಚ್.ಡಿ.ಮಾರುತಿ ಅವರನ್ನು ನೇಮಕ ಮಾಡಿ ಸರ್ಕಾರ ಆದೇಶ ಹೊರಡಿಸಿದೆ.

## ಕದರಮಂಡಲಗಿ ಕಾಂತೇಶ ಸ್ವಾಮಿ ಕಾರ್ತಿಕೋತ್ಸವ, ತೆಪ್ಪೋತ್ಸವ ನಾಳೆ



ಬ್ಯಾಡಗಿ, ಡಿ.5- ತಾಲ್ಲೂಕಿನ ಸುಕ್ಷೇತ್ರ ಕದರಮಂಡಲಗಿ ಶ್ರೀ ಆಂಜನೇಯ ಸ್ವಾಮಿಯ ಮಹಾಕಾರ್ತಿಕೋತ್ಸವ ಹಾಗೂ ತೆಪ್ಪೋತ್ಸವ ಕಾರ್ಯಕ್ರಮವವು ಇದೇ ದಿನಾಂಕ 7 ರ ಶನಿವಾರ ರಾತ್ರಿ 8.30ಕ್ಕೆ ನಡೆಯಲಿದೆ. ತೆಪ್ಪೋತ್ಸವವು ಇದೇ ದಿನಾಂಕ 8ರ ಭಾನುವಾರ ರಾತ್ರಿ 10.30ಕ್ಕೆ ನಡೆಯಲಿದೆ.


## ಶ್ರೀ ಬಿ.ಎಂ. ಮುರುಗಯ್ಯ ನಿಧನ



ದಾವಣಗೆರೆ ತರಳಬಾಳು ಬಡಾವಣೆ, 2ನೇ ಮೇನ್, 5ನೇ ಕ್ರಾಸ್ ವಾಸಿ ಕುರ್ಕಿ ಬುಳ್ಳಾಪುರ ಮಠದ ದಿ.ವೀರಭದ್ರಯ್ಯನವರ ಪುತ್ರ

ಶ್ರೀ ಬಿ.ಎಂ. ಮುರುಗಯ್ಯ (78), ನಿವೃತ್ತ ಉಪನ್ಯಾಸಕರು

ಇವರು ದಿನಾಂಕ 5.12.2024 ಗುರುವಾರ ಮಧ್ಯಾಹ್ನ 3 ಗಂಟೆಗೆ ಲಿಂಗೈಕ್ಯರಾದರು. ಪತ್ನಿ ರತ್ನಮ್ಮ ಕೆ.ಬಿ. ಸೇರಿದಂತೆ ಓರ್ವ ಪುತ್ರಿ, ಓರ್ವ ಪುತ್ರ, ಅಳಿಯ, ಸೊಸೆ, ಮೊಮ್ಮಕ್ಕಳು ಹಾಗೂ ಬಂಧು-ಬಳಗವನ್ನು ಅಗಲಿರುವ ಮೃತರ ಅಂತ್ಯಕ್ರಿಯೆಯನ್ನು ದಿನಾಂಕ 6.12.2024ರ ಶುಕ್ರವಾರ ಬೆಳಿಗ್ಗೆ 10.30 ಗಂಟೆಗೆ ಕುರ್ಕಿ ಗ್ರಾಮದ ಮೃತರ ಜಮೀನಿನಲ್ಲಿ ನೆರವೇರಿಸಲಾಗುವುದು.

- ದುಃಖತಪ್ತ ಕುಟುಂಬ ವರ್ಗ: ಫೋ. : 63626 24025

## ಶ್ರೀ ಸುಬ್ರಮಣ್ಯ ಸ್ವಾಮಿ ಸೇವಾ ಸಮಿತಿ ಟ್ರಸ್ಟ್ (ರಿ.),

ಸುಬ್ರಮಣ್ಯ ನಗರ, ಎಸ್.ಎ. ರವೀಂದ್ರನಾಥ್ ಬಡಾವಣೆ ಲೋಕಿಕೆರೆ ರೋಡ್, ದಾವಣಗೆರೆ-5.



ಸ್ವಸ್ತಿಶ್ರೀ ಕ್ರೋಧಿನಾಮ ಸಂವತ್ಸರದ ದಕ್ಷಿಣಾಯಣ ಮಾರ್ಘಶಿರ ಮಾಸ ಶುಕ್ಲಪಕ್ಷ ಷಷ್ಠಿ

ದಿನಾಂಕ : 07.12.2024ನೇ ಶನಿವಾರ ಬೆಳಗ್ಗೆ 6.00 ರಿಂದ

**ಶ್ರೀ ಸುಬ್ರಮಣ್ಯ ಸ್ವಾಮಿ ಚಂಪಾಷಷ್ಠಿ ಮಹೋತ್ಸವ**

ಶ್ರೀ ಸ್ವಾಮಿಗೆ ವಿಶೇಷ ಅಭಿಷೇಕ, ಅರ್ಚನೆ ಹಾಗೂ ಪೂಜಾ ಕಾರ್ಯಕ್ರಮ ಇರುತ್ತದೆ.

ಈ ಎಲ್ಲಾ ಕಾರ್ಯಕ್ರಮಗಳಲ್ಲಿ ಸರ್ವ ಭಕ್ತಾದಿಗಳು ಭಾಗವಹಿಸಿ ತನು, ಮನ-ಧನ, ಸಹಾಯ ಮಾಡಿ, ಶ್ರೀ ಸ್ವಾಮಿ ಕೃಪೆಗೆ ಪಾತ್ರರಾಗಲು ವಿನಂತಿ.

ದಿನಾಂಕ : 13.12.2024ನೇ ಶುಕ್ರವಾರ ಸಂಜೆ 6 ಗಂಟೆಗೆ

ಶ್ರೀ ಸುಬ್ರಮಣ್ಯಸ್ವಾಮಿ ಕಾರ್ತಿಕ ದೀಪೋತ್ಸವವನ್ನು ಏರ್ಪಡಿಸಲಾಗಿರುತ್ತದೆ.

ಆದ್ದರಿಂದ ಅಂದು ಸಂಜೆ ಸರ್ವ ಭಕ್ತಾದಿಗಳು ಎಣ್ಣೆ, ಬತ್ತಿ, ಹೂವು, ಹಣ್ಣು ತೆಗೆದುಕೊಂಡು ಆಗಮಿಸಿ ಕಾರ್ತಿಕ ದೀಪೋತ್ಸವದಲ್ಲಿ ಪಾಲ್ಗೊಂಡು, ದೇವರ ಕೃಪೆಗೆ ಪಾತ್ರರಾಗಬೇಕೆಂದು ಶ್ರೀ ಸುಬ್ರಹ್ಮಣ್ಯಸ್ವಾಮಿ ದೇವಸ್ಥಾನದ ಆಡಳಿತ ಮಂಡಳಿ ಪರವಾಗಿ ವಿನಂತಿಸಿಕೊಳ್ಳುತ್ತೇವೆ.

ಪ್ರಸಾದ ವ್ಯವಸ್ಥೆ ಇರುತ್ತದೆ... ಸರ್ವರಿಗೂ ಆದರದ ಸ್ವಾಗತ

## ಭಾವಪೂರ್ಣ ಶ್ರದ್ಧಾಂಜಲಿ



(ಹರಿಹರ ತಾಲ್ಲೂಕು ಬನ್ನಿಕೋಡು ಗ್ರಾಮದ ಹೊಟ್ಟೆಗೌಡ್ರು ಬಸಪ್ಪನವರ ಪುತ್ರ)

ನ್ಯಾಯಬೆಲೆ ಅಂಗಡಿ ಮಾಲೀಕರಾದ

ಶ್ರೀ ಹೆಚ್. ಚಂದ್ರಣ್ಣ

(70 ವರ್ಷ) ಇವರು ದಿನಾಂಕ : 05.12.2024 ಗುರುವಾರ ಮಧ್ಯಾಹ್ನ ನಿಧನರಾಗಿದ್ದಾರೆಂದು ತಿಳಿಸಲು ವಿಷಾದಿಸುತ್ತೇವೆ. ಮೃತರ ಆತ್ಮಕ್ಕೆ ಚಿರಶಾಂತಿ ನೀಡಲೆಂದು ಹಾಗೂ ಮೃತರ ಕುಟುಂಬಕ್ಕೆ ದುಃಖವನ್ನು ಭರಿಸುವ ಶಕ್ತಿಯನ್ನು ನೀಡಲೆಂದು ಭಗವಂತನಲ್ಲಿ ಪ್ರಾರ್ಥಿಸುತ್ತೇವೆ.

ಸಂತಾಪ ಸೂಚಿಸುವವರು :

ಡಿ.ಎಂ. ಹಾಲಸ್ವಾಮಿ, ಗೌರವಾಧ್ಯಕ್ಷರು, ಸಾಲಕಟ್ಟೆ.,
ಕೃಷ್ಣ ಡಿ ನಾಯಕ, ಅಧ್ಯಕ್ಷರು, ಡಿ.ಜಿ. ಶಿವಾನಂದಪ್ಪ, ಕೋಶಾಧ್ಯಕ್ಷರು, ಹರಿಹರ., ಮತ್ತು ಪಾದಾಧಿಕಾರಿಗಳು, ಕರ್ನಾಟಕ ರಾಜ್ಯ ಪಡಿತರ ವಿತರಕರ ಕ್ಷೇಮಾಭಿವೃದ್ಧಿ ಸಂಘ ಬೆಂಗಳೂರು.
ಟಿ.ಎನ್. ನಾಗರಾಜಪ್ಪ, ಅಧ್ಯಕ್ಷರು ಮತ್ತು ಪದಾಧಿಕಾರಿಗಳು, ನ್ಯಾಯಾಬೆಲೆ ಅಂಗಡಿ ಮಾಲೀಕರು, ಸಹಕಾರ ಸಂಘದ ಕಾರ್ಯದರ್ಶಿಗಳು,
ಕರ್ನಾಟಕ ರಾಜ್ಯ ಪಡಿತರ ವಿತರಕರ ಕ್ಷೇಮಾಭಿವೃದ್ಧಿ ಸಂಘ, ತಾಲ್ಲೂಕು ಘಟಕ, ಹರಿಹರ.

॥ ಶ್ರೀ ಶಿರಡಿ ಸಾಯಿನಾಥ ಪ್ರಸನ್ನ ॥ ॥ ಶ್ರೀ ಗುರು ಕೊಟ್ಟೂರೇಶ್ವರ ಪ್ರಸನ್ನ ॥ ॥ ಶ್ರೀ ಚಿಂಚಲಿ ಮಾಯಮ್ಮದೇವಿ ಪ್ರಸನ್ನ ॥

## ಹದಿನೇಳನೇ ವರ್ಷದ ಪುಣ್ಯಸ್ಮರಣೆ



ದಾವಣಗೆರೆ ಸಿಟಿ ವಾಸಿ

**ಹಾಲೇಕಲ್ಲು ಬಿ. ತಿಪ್ಪಣ್ಣನವರು**

ನಿವೃತ್ತ ಮುಖ್ಯೋಪಾಧ್ಯಾಯರು

*ನೀವು ನಮ್ಮನ್ನಗಲಿ ಇಂದಿಗೆ 17 ವರ್ಷಗಳು ಕಳೆದರೂ, ನೀವು ಹಚ್ಚಿಟ್ಟು ಹೋದ ಹಣತೆ ನಿತ್ಯ-ನಿರಂತರ ನಮ್ಮ ಮನೆ-ಮನಗಳನ್ನು ನಂದಾದೀಪವಾಗಿ ಬೆಳಗುತ್ತಿದೆ. ನೀವು ನಮ್ಮನ್ನಗಲಿ ಇಂದಿಗೆ 17 ವರ್ಷಗಳು ಕಳೆದರೂ ನೀವು ಭೌತಿಕವಾಗಿ ನಮ್ಮ ಕಣ್ಣ ಮುಂದೆ ಇಲ್ಲದಿದ್ದರೂ, ನಮ್ಮೆಲ್ಲರ ಹೃದಯಗಳಲ್ಲಿ ಶಾಶ್ವತವಾಗಿ ನೆಲೆಸಿದ್ದೀರಿ. ಎಲ್ಲರೊಳಗೊಂದಾಗಿ ಬದುಕಿದ ನೀವು ನಿತ್ಯ ಸ್ಮರಣೀಯರಾಗಿದ್ದೀರಿ.*

**ನೀವು ಹಾಕಿಕೊಟ್ಟ ಮಾರ್ಗದಲ್ಲಿ ನಡೆಯುತ್ತಾ, ಸದಾ ನಿಮ್ಮ ಸ್ಮರಣೆಯಲ್ಲಿರುವ**

ಪತ್ನಿ: ಹಾಲೇಕಲ್ಲು ಶ್ರೀಮತಿ ಸಿದ್ದಮ್ಮ ಮತ್ತು ಮಕ್ಕಳು ಹಾಗೂ ಸೊಸೆಯಂದಿರು

ಮೊಮ್ಮಕ್ಕಳಾದ : ಎಸ್.ಜೆ.ಮನ್ವಿತ್ ಮೌರ್ಯ (ಅಚ್ಚು), ಎಸ್.ಆರ್. ಹಾರ್ದಿಕ್ ಎಸ್.ಆರ್. ಪ್ರಣವ್, ಎಸ್.ಎ. ಅಮೋಘ ಸಾಯಿ, ಎಸ್.ಎ. ಕೊಟ್ರೇಶ್ (ಚಿನ್ಮಯ್) ಹಾಗೂ ಸುಂಕದಕಲ್ಲು ವಂಶಸ್ಥರು, ಹಾಲೇಕಲ್ಲು.

# 781/41, ಶ್ರೀ ತಂದೆ-ತಾಯಿ ನಿಲಯ, 5ನೇ ಕ್ರಾಸ್, 'ಬಿ' ಬ್ಲಾಕ್, ಚರ್ಚ್ ಹಿಂಭಾಗ, ಸರಸ್ವತಿ ನಗರ, ದಾವಣಗೆರೆ. ಮೊ: 94814 18009


KA/SK/DVG-028/2024-2026. O/P @ B.V. Nagar P.O. **JANATHAVANI** - Published, Owned and Printed by M.S. Vikas, at Jayadhara Offset Printers, # 605, Hadadi Road, Davangere - 5, Published from # 605, Hadadi Road, Davangere - 5. Editor: M.S. Vikas